ಸಂಪುಟ: 13 Volume | ಸಂಚಿಕೆ: 314 Issue | ಪುಟಗಳು 08 Pages | ಮಂಗಳವಾರ 03 ಫೆಬ್ರವರಿ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ತಿರಸ್ಕಾರಕ್ಕೆ ತಿರಸ್ಕಾರವೇ ಮದ್ದಲ್ಲ ಪ್ರೀತಿಯೇ ದಿವ್ಯಾಷಧ.
–ಗೌತಮ ಬುದ್ಧ

ಕಿಕ್ಕಿರಿದು ತುಂಬಿದ ಸ್ಟೇಡಿಯಂ, ಚಿಣ್ಣರ ಸಂಭ್ರಮ 6

ಸೈನಿಕ ರೈತ ದೇಶದ ಎರಡು ಕಣ್ಣು: ಸ್ವಾಮೀಜಿ 7

ಹಿಂದೂ ಧರ್ಮ ರಕ್ಷಣೆಗಾಗಿ ಜಾಗೃತಿ 8

## ಪುಸ್ತಕ ಬಹುಮಾನಕ್ಕೆ ಆಹ್ವಾನ

**ಬೆಂಗಳೂರು:** ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ವತಿಯಿಂದ 2025–26ನೇ ಸಾಲಿಗೆ ಲಂಬಾಣಿ/ ಬಂಜಾರರ ಸಂಸ್ಕೃತಿ, ಸಾಹಿತ್ಯ ಭಾಷೆ ಹಾಗೂ ವಿವಿಧ ಕಲಾಪ್ರಕಾರಗಳ ಕ್ಷೇತ್ರ–ಕ್ಕೆ ಸಂಬಂಧಿಸಿದಂತೆ ಗರಿಷ್ಠ ಮೂರು ಪುಸ್ತಕಗಳಿಗೆ ಬಹುಮಾನಕ್ಕಾಗಿ ಪುಸ್ತಕಗಳನ್ನು ಆಹ್ವಾನಿಸಲಾಗಿದೆ.

ಪ್ರತಿ ಪ್ರಕಾರದಲ್ಲೂ ವರ್ಷದಲ್ಲಿ ಕನಿಷ್ಠ 3 ಶೀರ್ಷಿಕೆಗಳಾದರೂ ಪ್ರಕಟವಾಗಿದ್ದಲ್ಲಿ ಮಾತ್ರ ಬಹುಮಾನಕ್ಕೆ ಪರಿಗಣಿಸಲಾಗುವುದು. ಬಹುಮಾನದ ಮೊತ್ತ ರೂ. 25,000/– ಗಳು ಹೊಂದಿರುತ್ತದೆ. ಮುದ್ರಣಗೊಂಡ ಮೂರು ಕೃತಿಗಳನ್ನು ಫೆಬ್ರವರಿ 28, 2026ರೊಳಗೆ ರಿಜಿಸ್ಟ್ರಾರ್, ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ, ಬೆಂಗಳೂರು , ಕನ್ನಡ ಭವನ, 1ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು–560 002 ಇಲ್ಲಿ ಕಳುಹಿಸಿಕೊಡಬೇಕು.ವಿವರಕ್ಕೆ: 080–29917745 ಗೆ ಸಂಪರ್ಕಿಸಬಹುದು.

## ಪೈಪ್ ಲೈನ್ ಚೇಂಬರ್‌ನಲ್ಲಿ ಶವ

**ಬೆಂಗಳೂರು:** ಮೂರು ದಿನಗಳ ಹಿಂದೆ ಕಾಣೆ–ಯಾಗಿದ್ದ ಬಾಲಕ ಬೆಂಗಳೂರು ದಕ್ಷಿಣ ತಾಲೂಕಿನ ತಾತಗುಣಿ ಜಲಮಂಡಳಿ ಪೈಪ್‌ಲೈನ್ ಚೇಂಬರ್‌ನಲ್ಲಿ ಶವವಾಗಿ ಪತ್ತೆಯಾಗಿದ್ದಾನೆ. ಚಾಮರಾಜನಗರ ಜಿಲ್ಲೆಯ ರಜನಿಕಾಂತ್ ಎಂಬುವವರ ಪುತ್ರ ಪ್ರೀತಮ್ (14) ಮೃತ ಬಾಲಕ. ಬೆಂಗಳೂರು ಜಲಮಂಡಳಿ (ಬಿಡಬ್ಲ್ಯುಎಸ್‌ಎಸ್ಬಿ) ಪೈಪ್ಲೈನ್ ಅಳವಡಿಕೆಗಾಗಿ ನಿರ್ಮಿಸಿದ್ದ ತೆರೆದ ಸಂಪ್ನಲ್ಲಿ ಬಾಲಕನ ಮೃತದೇಹ ಪತ್ತೆಯಾಗಿದೆ. ಕೇಸ್ ದಾಖಲಾಗಿದೆ.

## ರಾಯ್ ಸಾವು: ಎಸ್ಐಟಿ ರಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಪ್ರಸಿದ್ಧ ರಿಯಲ್ ಎಸ್ಟೇಟ್ ಸಂಸ್ಥೆ Confident Group ಸಂಸ್ಥಾಪಕ ಹಾಗೂ ಅಧ್ಯಕ್ಷ ಸಿ.ಜೆ. ರಾಯ್ ಅವರ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ರಚಿಸಿರುವ ವಿಶೇಷ ತನಿಖಾ ತಂಡ (SIT) ತನಿಖೆ ಆರಂಭಿಸಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ ಅವರು ಭಾನುವಾರ ತಿಳಿಸಿದ್ದಾರೆ.

ಜನವರಿ 30ರಂದು ಬೆಂಗಳೂರು ನಗರದ ಅಶೋಕನಗರ ವ್ಯಾಪ್ತಿಯಲ್ಲಿರುವ ಕಚೇರಿಯಲ್ಲಿ ರಾಯ್ ಅವರು ಗುಂಡಿನ ಗಾಯಗಳೊಂದಿಗೆ ಮೃತ ಸ್ಥಿತಿಯಲ್ಲಿ ಪತ್ತೆಯಾಗಿದ್ದರು.ಘಟನೆ ನಡೆದ ವೇಳೆ ಅವರ ಕಚೇರಿಯಲ್ಲಿ ಆದಾಯ ತೆರಿಗೆ ಇಲಾಖೆ (ಐಟಿ) ಅಧಿಕಾರಿಗಳ ಶೋಧ ಕಾರ್ಯ ನಡೆಯುತ್ತಿತ್ತು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಈ ಹಿನ್ನೆಲೆಯಲ್ಲಿ ಪ್ರಕರಣವು ರಾಜ್ಯಾದ್ಯಂತ ವ್ಯಾಪಕ ಚರ್ಚೆಗೆ ಕಾರಣವಾಗಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿದ ಗೃಹ ಸಚಿವ ಪರಮೇಶ್ವರ್ ಅವರು, ಜಂಟಿ ಪೊಲೀಸ್ ಆಯುಕ್ತ ವಂಶಿ ಕೃಷ್ಣ ಅವರ ನೇತೃತ್ವದಲ್ಲಿ ಖಖಖಿ ರಚಿಸಲಾಗಿದೆ ಎಂದು ಹೇಳಿದ್ದಾರೆ.

## ಸಾಮಾಜಿಕ ನ್ಯಾಯ ವಿರೋಧಿ ಬಜೆಟ್

**ಭಾಲ್ಕಿ:** ಬಜೆಟ್ ಮಂಡನೆಯ ಸಮಯದಲ್ಲೇ ಷೇರು ಮಾರುಕಟ್ಟೆಯಲ್ಲಿ ಸನೆಕ್ಸ್ ಮತ್ತು ನಿಫ್ಟಿ ಸೂಚ್ಯಂಕಗಳಲ್ಲಿ ಕುಸಿತ ಕಂಡಿರುವುದು ಈ ಬಜೆಟ್ ಬಗ್ಗೆ ಹೂಡಿಕೆದಾರರು ಹಾಗೂ ಆರ್ಥಿಕ ವಲಯದಲ್ಲಿರುವ ಅಸಮಾಧಾನವನ್ನು ಸ್ಪಷ್ಟಪಡಿಸುತ್ತದೆ.

ಈ ಬಜೆಟ ಘೋಷಣೆಗಳಿಗೆ ಮಾತ್ರ ಸೀಮಿತವಾಗಿದೆ, ಉದಾಹರಣೆಗಾಗಿ ಕಳೆದ ವರ್ಷದ ಬಜೆಟನಲ್ಲಿ ಪ್ರಧಾನ ಮಂತ್ರಿ ಇಂಟರ್ನ್‌ಶಿಪ್ ಯೋಜನೆ ಘೋಷಣೆಯಾಗಿತ್ತು ಆದರೆ ಈ ಯೋಜನೆ ಪ್ರಾಯೋಗಿಕವಾಗಿ ಯಶಸ್ವಿಯಾಗಿಲ್ಲ.

ಒಟ್ಟು ಬಜೆಟ್‌ನಲ್ಲಿ ಕೇವಲ ಶೇ. 0.3 ರಷ್ಟು ಮಾತ್ರ ಸಾಮಾಜಿಕ ನ್ಯಾಯಕ್ಕೆ ಹಂಚಿಕೆಯಾಗಿರುವುದು ಕೇಂದ್ರ ಸರ್ಕಾರದ ಮನೋಭಾವವನ್ನು ತೋರಿಸುತ್ತದೆ.



ಇಲ್ಲಿಯವರೆಗೆ ಕೇಂದ್ರ ಸರ್ಕಾರದ ಒಟ್ಟು ಸಾಲವು 201 ಲಕ್ಷ ಕೋಟಿ ದಾಟಿರುವುದು ಭಾರತದ ಆರ್ಥಿಕ ಸ್ಥಿತಿಗೆ ಎಚ್ಚರಿಕೆಯ ಸಂಕೇತವಾಗಿದೆ ಎಂದು ಸಾಗರ್ ಖಂಡ್ರೆ ಹೇಳಿದ್ದಾರೆ.

# ಪ್ರತಿಪಕ್ಷ ದನಿಗೆ ಪ್ರತಿಧ್ವನಿ

### ವಿರೋಧ ಪಕ್ಷ ವಿರುದ್ಧ ಸಿಎಂ ವಾಗ್ದಾಳಿ, ರಾಜ್ಯಪಾಲರ ಭಾಷಣದ ಮೇಲೆ ನಡೆದ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯಪಾಲರು ಪೂರ್ತಿ ಭಾಷಣ ಓದದೆ ತರಾತುರಿಯಲ್ಲಿ ಹೋದರು. ಭಾಷಣದಲ್ಲಿದ್ದ ಜೈ ಸಂವಿಧಾನ ಎನ್ನುವುದನ್ನೂ ಉಲ್ಲೇಖಿಸದೆ, ಓದದೆ ಹೋದರು. ರಾಷ್ಟ್ರಗೀತೆ ಮುಗಿಯುವವರೆಗೂ ಕಾಯದೆ ಹೋಗಿಬಿಟ್ಟರು. ಇದು ಸರಿಯಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾಬ ವ್ಯಕ್ತಪಡಿಸಿದ್ದಾರೆ. ರಾಜ್ಯಪಾಲರ ಭಾಷಣದ ಮೇಲೆ ವಿಧಾನಸಭೆಯಲ್ಲಿ ನಡೆದ ಚರ್ಚೆಗೆ ಮುಖ್ಯಮಂತ್ರಿಗಳ ಉತ್ತರ ನೀಡಿ ಮಾತನಾಡಿದ ಅವರು, ಬಿಜೆಪಿ ಶಾಸಕ ಸುನಿಲ್ ಕುಮಾರ್ ಅವರು ಮಾತಾಡುವಾಗ ನನ್ನನ್ನು ಅಸಹಾಯಕ ಮುಖ್ಯಮಂತ್ರಿ ಎಂದು ಕರೆದಿದ್ದಾರೆ. ಕೆಲವು ಬಾರಿ, ಅಸತ್ಯದ ಎದುರು ಸತ್ಯ ಅಸಹಾಯಕವಾಗುತ್ತದೆ ಎಂದು ಟಾಂಗ್ ನೀಡಿದ್ದಾರೆ.

**ನರೇಗಾ ಹೆಸರು ಬದಲು:** ನಾವು ರಾಜ್ಯಪಾಲರ ವಿರುದ್ಧ ಇಲ್ಲ. ಕೇಂದ್ರ ಸರ್ಕಾರದ ವಿರುದ್ಧ ಇದ್ದೇವೆ. ಮನರೇಗಾ ಬದಲಾಯಿಸಿ ವಿಬಿ ಜಿ ರಾಮ್ ಜಿ ಎಂದು ಮಾಡಿದ್ದಾರೆ. ಇದರಲ್ಲಿರುವ ರಾಮ, ಧಶರಥ ರಾಮನೂ ಅಲ್ಲ. ಅಯೋಧ್ಯೆ ರಾಮನೂ ಅಲ್ಲ. ಹೆಸರು ಬದಲಾಯಿಸುವುದಕ್ಕೇ ಕೆಲವರನ್ನು ಅವರು ಇಟ್ಟುಕೊಂಡಿದ್ದಾರೆ ಅನ್ನಿಸತ್ತೆ ಎಂದು ವಿವರಿಸಿದ್ದಾರೆ.

**ಆಗಿನ ರಾಜ್ಯಪಾಲರ ಬಾಯಲ್ಲೂ:** ಸಂವಿಧಾನದ ಆರ್ಟಿಕಲ್ 176 ಓದಿದ್ದರೆ ಚನ್ನಾಗಿರುತ್ತಿತ್ತು. ಸಂವಿಧಾನ ಜಾರಿಯಾದ ದಿನದಿಂದ ಇವತ್ತಿವರೆಗೆ ಜಂಟಿ ಅಧಿವೇಶನಗಳು ನಡೆದುಕೊಂಡು ಬಂದಿವೆ. ಇದು ಸಂವಿಧಾನದ ಪ್ರಕಾರ ನಡೆದುಕೊಂಡು ಬರುತ್ತಿರುವ ಪದ್ಧತಿ. ಬಿಜೆಪಿ ಅಧಿಕಾರದಲ್ಲಿದ್ದಾಗ ರಾಜ್ಯಪಾಲರಾಗಿದ್ದ ಹಂಸರಾಜ್ ಭಾರದ್ವಜ್ ಅವರ ಬಾಯಲ್ಲೂ ಹೇಳಿಸಿದ್ದೀರಿ ಎಂದು ಕಿಡಿಕಾರಿದ್ದಾರೆ.



### ತೆರಿಗೆ ಹಂಚಿಕೆ: ನ್ಯಾಯ ಎಲ್ಲಿದೆ..?

16 ನೇ ಹಣಕಾಸು ಆಯೋಗದ ಶಿಫಾಸುಗಳನ್ನು ಕೇಂದ್ರಸರ್ಕಾರ ಒಪ್ಪಿಕೊಂಡಿದೆ. ಆದರೆ ಆಯೋಗದ ಶಿಫಾರಸುಗಳಿಂದಲೂ ನಮಗೆ ಸಿಗಬೇಕಾದ ನ್ಯಾಯ ಸಿಕ್ಕಿಲ್ಲ. ಆಯೋಗವು ಶೇ.4.71 ತೆರಿಗೆ ಹಂಚಿಕೆ ಮಾಡಿತ್ತು. ಆದರೆ 16 ನೇ ಹಣಕಾಸು ಆಯೋಗವು ಶೇ.4.131 ರಷ್ಟನ್ನು ಮಾತ್ರ ಶಿಫಾರಸು ಮಾಡಿದೆ. ತೆರಿಗೆ ಪಾಲನ್ನು ಶೇ. 50 ಕ್ಕೆ ಏರಿಸಿ ಎಂದು ಕೇಳಿದ್ದೆವು. ಆದರೆ ಶೇ. 41 ಮಾತ್ರ ಕೊಟ್ಟಿದೆ ಎಂದಿದ್ದಾರೆ.

### ಅಸತ್ಯದ ಎದುರು ಸತ್ಯ ಅಸಹಾಯಕ

ಶಾಸಕ ಸುನಿಲ್ ಕುಮಾರ್ ಅವರು 'ಸರ್ಕಾರ ಆಡಳಿತ ಹದಗೆಟ್ಟಿದೆ ಮತ್ತು ಸಂವಿಧಾನರಹಿತ ಸರ್ಕಾರ' , 'ಅಸಹಾಯಕ ಮುಖ್ಯಮಂತ್ರಿ' ಎಂದಿದ್ದಾರೆ. ಕೆಲವೊಮ್ಮ ಅಸತ್ಯದ ಎದುರು ಸತ್ಯ ಅಸಹಾಯಕವಾಗುತ್ತದೆ. ಜನರು ನಮ್ಮನ್ನು ಅವರ ಪ್ರತಿನಿಧಿಯಾಗಿ ಆಯ್ಕೆ ಮಾಡುತ್ತಾರೆ. ಪ್ರತಿ ಪಕ್ಷ– ಸರ್ಕಾರದ ಸಿದ್ಧಾಂತ ಭಿನ್ನ. ಆದರೆ ನಾವೆಲ್ಲರೂ ಸಂವಿಧಾನ ಒಪ್ಪಲೇಬೇಕು ಎಂದು ಸಿಎಂ ವಿವರ ನೀಡಿದ್ದಾರೆ.

ಕೇಂದ್ರ ವಿತ್ತ ಸಚಿವರು ಕೃಷ್ಣಾ ಮೇಲ್ದಂಡೆ ಯೋಜನೆಗೆ ಅನುದಾನ ನೀಡುವುದಾಗಿ ಘೋಷಿಸಿ, ನಂತರದ ರಾಜ್ಯ ಸರ್ಕಾರವೂ ಇದನ್ನು ರಾಷ್ಟ್ರೀಯ ಯೋಜನೆ ಘೋಷಿಸಲಾಗುವುದು ಎಂದೂ ತಿಳಿಸಿದ್ದರು. ಆದರೆ ಅನುದಾನವಾಗಲಿ, ರಾಷ್ಟ್ರೀಯ ಯೋಜನೆ ಎಂದಾಗಲಿ ಘೋಷಣೆಯಾಗಿಲ್ಲ. ಇದು ಸತ್ಯವಲ್ಲವೇ
–ಸಿದ್ದರಾಮಯ್ಯ, ಮುಖ್ಯಮಂತ್ರಿ

### ವಂದನಾ ನಿರ್ಣಯ ಮಂಡನೆ

ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ ನರೇಗ ಉದ್ಯೋಗ ಸಂಜೀವಿನಿ ಎಂದಿದ್ದರು. ಈಗ ಬಿಜೆಪಿ ಜೊತೆಸೇರಿ ನರೇಗಾ ವಿರೋಧಿಸುತ್ತಿದ್ದಾರೆ. ರಾಜ್ಯಪಾಲರ ಭಾಷಣದ ಮೇಲೆ ವಿರೋಧಪಕ್ಷದ ನಾಯಕ ಆರ್. ಅಶೋಕ್ ಸೇರಿದಂತೆ 27 ಜನ ಮಾತನಾ ಡಿದ್ದಾರೆ. ಕಾಂಗ್ರೆಸ್‌ನ ವಂದನಾ ನಿರ್ಣಯ ಮಂಡಿಸಿದ ಪೊನ್ನಣ್ಣ, ಪ್ರದೀಪ್ ಈಶ್ವರ್ ಅನುಮೋದಿಸಿದ್ದಾರೆ. 15 ಗಂಟೆ 17 ನಿಮಿಷ ಚರ್ಚೆ ನಡೆದಿದೆ.

## ಶ್ರೀಮಂತರಿಗೆ ಮಾತ್ರ ಬಜೆಟ್



**ಬಸವಕಲ್ಯಾಣ:** ಕೇವಲ ಖಾಲಿ ಪ್ರಚಾರ, ಯಾವುದೇ ಅರ್ಥವಿಲ್ಲ! ಶ್ರೀಮಂತರಿಗೆ ಮಾತ್ರ ಬಜೆಟ್! ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ ತಿಳಿಸಿದರು. 2026 ರ ಕೇಂದ್ರ ಬಜೆಟ್‌ನಲ್ಲಿ ಯಾವುದೇ ಪರಿವರ್ತಕ ನೀತಿ ಬದಲಾವಣೆಗಳಿಲ್ಲ.

ಹಣಕಾಸು ಸಚಿವರು ಖಾಲಿ ಮಾತುಗಳಲ್ಲಿ ತೊಡಗಿಸಿಕೊಂಡರು ಮತ್ತು SC, ST ಮತ್ತು ಔಃಅ ನೀತಿಗಳಿಗೆ ಹಂಚಿಕೆಗಳು ಅಥವಾ ಪ್ರಯೋಜನಗಳನ್ನು ತಿಳಿಸಲಿಲ್ಲ. ಮಧ್ಯಮ ವರ್ಗಕ್ಕೆ ಯಾವುದೇ ತೆರಿಗೆ ಕಡಿತ ಅಥವಾ ಬೆಲೆ ಪರಿಹಾರವಿಲ್ಲ.

* **MSP ಅಥವಾ ರೈತರಿಗೆ ಗಮನಾರ್ಹವಾದ ಯಾವುದಕ್ಕೂ ಕಾನೂನು ಬೆಂಬಲವಿಲ್ಲ.**
* **ದುರ್ಬಲ ಬಂಡವಾಳ ಒಳಹರಿವು ಮತ್ತು ರೂಪಾಯಿ ಅಪಮೌಲ್ಯೀಕರಣದ ಬಗ್ಗೆ ಕಳವಳಗಳನ್ನು ಪರಿಹರಿಸಲಾಗಿಲ್ಲ.**
* **ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಮತ್ತು ಕರ್ನಾಟಕದಂತಹ ಬಿಜೆಪಿಯೇತರ ರಾಜ್ಯಗಳನ್ನು ಹೆಚ್ಚಾಗಿ ನಿರ್ಲಕ್ಷಿಸಲಾಗಿದೆ ಮತ್ತು ನ್ಯಾಯಯುತವಾಗಿ ನೀಡಲಾಗಿಲ್ಲ ಎಂದು ಕೇಂದ್ರ ಸರ್ಕಾರ ಮಂಡಿಸಿದ ಬಜೆಟ್ ಕುರಿತು ಈ ರೀತಿ ಪ್ರತಿಕ್ರಿಯೆ ನೀಡಿದರು.**

## ರಾಷ್ಟ್ರಪತಿ ಅಂಗಳಕ್ಕೆ ದ್ವೇಷ ಭಾಷಣ

• ಮಲ್ಲಮ್ಮ ನುಡಿವಾರ್ತೆ, ಬೆಂಗಳೂರು

ದ್ವೇಷ ಭಾಷಣ ಮಸೂದೆಯಲ್ಲಿನ 28 ಅಂಶಗಳನ್ನು ರಾಜ್ಯಪಾಲರು ಪ್ರಶ್ನಿಸಿದ್ದಾರೆ. ಅದನ್ನು ರಾಷ್ಟ್ರಪತಿಗಳಿಗೆ ಕಳಿಸಿದ್ದಾರೆ. ಮುಂದೆ ಏನಾಗುತ್ತದೆ ನೋಡೋಣ. ರಾಷ್ಟ್ರಪತಿಗಳು ಪರಿಶೀಲಿಸಿ ವಾಪಸ್ ಕೊಟ್ಟರೆ, ಬದಲಾವಣೆ ಮಾಡಿ ಕಳಿಸಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಅಭಿವ್ಯಕ್ತಿ ಸ್ವಾತಂತ್ರ್ಯ ಇದೆ ಎಂದು ಏನು ಬೇಕಾದರೂ ಮಾತನಾಡಿದರೆ, ಅದರ ಪರಿಣಾಮ ಸಮಾಜಕ್ಕೆ ಆಗುತ್ತದೆ. ಸಮುದಾಯಗಳನ್ನು ದೂಷಣೆ ಮಾಡುವುದು, ವೈಯಕ್ತಿಕವಾಗಿ ಮಾತನಾಡುವುದು. ಆ ಮಾತುಗಳು ಸಮಾಜದ ಮೇಲೆ ಏನು ಪರಿಣಾಮ ಬೀರುತ್ತದೆ ಎಂಬುದನ್ನು ಗಮನದಲ್ಲಿಟ್ಟುಕೊಂಡು ದ್ವೇಷಭಾಷಣ ಮಸೂದೆ ತಂದಿದ್ದೇವೆ ಎಂದಿದ್ದಾರೆ. ಕೆಲವು ಭಾಗಗಳಲ್ಲಿ, ಕೆಲವರು ಭಾಷಣಗಳನ್ನು ಮಾಡಿದ್ದಾರೆ. ಭಾಷಣ ಮಾಡಿದ ಮೇಲೆ ಏನಾಯಿತು ಎಂಬುದನ್ನು ಗಮನಿಸಿದ್ದೇವೆ. ಇದಕ್ಕೆ ಕಡಿವಾಣ ಹಾಕಬೇಕು ಎಂಬ ಉದ್ದೇಶದಿಂದ ಬಿಲ್ ತಂದಿದ್ದೇವೆ.

## ಕೋಮಾ ಸ್ಥಿತಿಗೆ ಸರ್ಕಾರ: ಅಶೋಕ್

• ಮಲ್ಲಮ್ಮ ನುಡಿವಾರ್ತೆ, ಬೆಂಗಳೂರು

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದ್ದು, ರಾಜ್ಯದಲ್ಲಿ ಆಡಳಿತ ಕೋಮಾ ಸ್ಥಿತಿಗೆ ಹೋಗಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣಕ್ಕೆ ವಂದನಾ ನಿರ್ಣಯ ವೇಳೆ ಮಾತನಾಡಿದ ಆರ್. ಅಶೋಕ್, ರಾಜ್ಯಪಾಲರ ಭಾಷಣದ ಮೂಲಕ ಸುಳ್ಳನ್ನು ಹಬ್ಬಿಸಲಾಗುತ್ತಿದೆ. ಮುಖ್ಯಮಂತ್ರಿ ಸ್ಥಾನಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಮತ್ತು ಡಿ ಕೆ ಶಿವಕುಮಾರ್ ನಡುವಿನ ಅಧಿಕಾರದ ಜಗಳ ರಾಜ್ಯದ ಆಡಳಿತದ ಮೇಲೆ "ಗಂಭೀರವಾಗಿ ಪರಿಣಾಮ ಬೀರಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜಕೀಯ ಪ್ರತಿಷ್ಠೆ ಮತ್ತು ಹೈಕಮಾಂಡ್ ಓಲೈಕೆಗಾಗಿ ಹಲವು ವಿಚಾರಗಳಲ್ಲಿ ರಾಜ್ಯದ ಹಿತಾಸಕ್ತಿಯನ್ನು ಸಿದ್ದು ನೇತೃತ್ವದ ಸರ್ಕಾರ ಬಲಿಕೊಟ್ಟಿದೆ ಎಂದು ಆರೋಪಿಸಿದರು. ಒಂದಿಲ್ಲೊಂದು ಹಗರಣಗಳು ಬಯಲಿಗೆ ಬರುತ್ತಿವೆ.

## ದೇವರಗುಡಿ ಗ್ರಾಪಂ.ನಲ್ಲಿ ಸಮಸ್ಯೆಗಳ ಗರಡಿ

• ಮಲ್ಲಮ್ಮ ನುಡಿ ವಾರ್ತೆ ವೀರೇಶ್ ಹೊಸಳ್ಳಿ

ಸಿಂಧನೂರು ತಾಲೂಕಿನ ದೇವರಗುಡಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಇದ್ದರೂ ಇಲ್ಲದಂತಾಗಿದೆ. ಯಾವುದೇ ಅಭಿವೃದ್ಧಿ ಯಾಗದ ದೇವರ ಗುಡಿ ಗ್ರಾ.ಪಂ.ಇದ್ದು, ಗ್ರಾಮದ ಚರಂಡಿ ಇಲ್ಲದೆ ನೀರು ಕುನ್ನಟಗಿ ಹಾದು ಹೋಗುವ ದಾರಿಯಲ್ಲಿ ಚರಂಡಿ ನೀರು ಹರಿದು ಬರುತ್ತಿರುವುದರಿಂದ ಓಡಾಡುವ ಪ್ರಾಮಾಣಿಕರಿಗೆ ಶಾಲಾ–ಕಾಲೇಜುಗಳ ಹೋಗುವ ವಿದ್ಯಾರ್ಥಿಗಳಿಗೆ ತೊಂದರೆಯಾಗಿದೆ. ಚರಂಡಿ ನೀರು ತಗ್ಗು ಪ್ರದೇಶಗಳಲ್ಲಿ ನಿಂತು ಗಬ್ಬು ವಾಸನೆ ಬೀರೆಉತ್ತದೆ. ಸೊಳ್ಳೆಗಳ ಕಾಟದಿಂದ ಅಕ್ಕ ಪಕ್ಕದ ಮನೆಗಳ ಸಾರ್ವಜನಿಕರು ತೊ ಂದರೆ ಅನುಭವಿಸುತ್ತಿದ್ದಾರೆ.

ಇಂತಹಾ ಸಮಸ್ಯೆಗಳನ್ನು ಇತ್ಯರ್ಥ ಮಾಡುವುದಕ್ಕೆ ಗ್ರಾ.ಪಂ.ಸದಸ್ಯರು–ಪಿಡಿಒ ಅಧಿಕಾರಿಗಳು ನಮಗೆ ಯಾವುದೇ ಸಂಬಂಧ ಇಲ್ಲ ಎಂಬಂತೆ ಜಾಣ ಮೌನಕ್ಕೆ ಶರಣಾಗಿದ್ದಾರೆ ಎಂದು ಇಡೀ ಗ್ರಾಮದ ಸಾರ್ವಜನಿಕರು ಹಿಡಿ ಶಾಪ ಹಾಕುತ್ತಿದ್ದಾರೆ.

ಚಳಿ ಕಡಿಮೆಯಾಗಿದೆ. ಬಿಸಿಲು ಶರುವಾಗಿದೆ. ಅದರೆ ಗ್ರಾಮದಲ್ಲಿ ಎಲ್ಲಿ ನೋಡಿದರೂ ಕೊಳಚೆ ನೀರು ನಿಂತಿರುವುದರಿಂದ ಸೊಳ್ಳೆಗಳ ಹಾವಳಿ ಹೇಳತೀರದಾಗಿದೆ. ಸೊಳ್ಳೆ ಪರದೆ ಇಲ್ಲದೆ ಊಟ ಮಾಡಲೂ ಆಗದೆ. ಮಲಗಲೂ ಬರದು. ಅಭಿವೃದ್ಧಿ ಎಲ್ಲಿದೆ ಸ್ವಾಮಿ?
–ಹೆಸರು ಹೇಳಲು ಇಚ್ಛಿಸದ ಗ್ರಾಮದ ಮುಖಂಡ, ದೇವರಗುಡಿ.



### ಪ್ರಗತಿಗೆ ಅಧಿಕಾರಿಗಳೇ ಅಸಡ್ಡೆ

ಇಲ್ಲಿನ ಗ್ರಾಮದ ಜನರು ಮೂಲಕ ಚುನಾಯಿತರಾದ ಗ್ರಾ.ಪಂ.ದಸ್ಯರು ಮೌನವಾಗಿದ್ದರೆ ಅಧಿಕಾರಿಗಳು ಕಾರ್ಯದಲ್ಲಿ ನಿರುತರಾಗಿದ್ದಾರೆ. ಸಂಪೂರ್ಣ ಬೇಜವಾಬ್ದಾರಿ ನಿರ್ಲಕ್ಷ್ಯ ಧೋರಣೆಯಾಕೆ ಎನ್ನುವುದು ಜನರಯಕ್ಷ ಪ್ರಶ್ನೆಯಾಗಿದೆ.

### ಕಳಪೆ ಕಾಮಗಾರಿಗಳು..!

ಜೆ.ಜೆ.ಎಂ ಕಾಮಗಾರಿಗಳು ಹಾಗೂ ಜಲ ಮಿಷನ್ ಯೋಜನೆಯಡಿಯಲ್ಲಿ ಮನೆ ಮನೆಗೆ ನಳ ಹಾಕುವ ಕಾಮಗಾರಿಗಳು ಗುಣಮಟ್ಟ ಇಲ್ಲದೇ ಕಳಪೆಯಾಗಿವೆ ಎಂದು ಜನರು ದೂರುತ್ತಿದ್ದಾರೆ. ಸಿಬ್ಬಂದಿ ನೀರು ಬಿಟ್ಟಾಗ ನೀರು ಹೋಗುವುದಕ್ಕೆ ಸರಿಯಾಗಿ ಚರಂಡಿ ಇಲ್ಲದೆ ಕುನ್ನಟಗಿ ಹಾದು ಹೋಗುವ ದಾರಿಯಲ್ಲಿ ನೀರು ಹರಿಯುತ್ತಿದ್ದು ಜನರರಿಗೆ ಸಂಕಟವಾಗಿದೆ ಪಕ್ಕದಲ್ಲಿ ಇರುವ ವೇಳೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಇದ್ದು ಶಾಲೆಗೆ ಹೋಗುವ ವಿದ್ಯಾರ್ಥಿಗಳು ಗ್ರಾಮಸ್ಥರು ಸಂಕಷ್ಟ ಎದುರಿಸುವಂತಾಗಿದೆ.

## ಬಜೆಟ್: ಸಂಪೂರ್ಣ ನಿರಾಶಾದಾಯಕ

• ಮಲ್ಲಮ್ಮ ನುಡಿ ವಾರ್ತೆ00

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ 9ನೇ ಬಜೆಟ್‌ನಲ್ಲಿ ಯಾವುದೇ ಗಣನೀಯ ಸುಧಾರಣೆ ಕಾಣಿಸಿಲ್ಲ. ಸರ್ಕಾರಿ ವೆಚ್ಚಗಳ ಮೇಲೆ ನಿಯಂತ್ರಣದ ಲಕ್ಷಣವೂ ಇಲ್ಲ. ಹೆಚ್ಚು ತೆರಿಗೆ ಪಾವತಿಸುವ ರಾಜ್ಯವಾದ ಕರ್ನಾಟಕಕ್ಕೆ ಹೇಳಿಕೊಳ್ಳುವಂತಹ ಪ್ರಯೋಜನ ಈ ಬಜೆಟ್‌ನಲ್ಲಿ ಕಾಣುವುದಿಲ್ಲ.



ಹೈದ್ರಾಬಾದ್–ಬೆಂಗಳೂರು ಹೈಸ್ಪೀಡ್ ರೈಲು ಯೋಜನೆ ಸಮಾಧಾನಕರ ಬಹುಮಾನವಷ್ಟೇ. ರೈತರು ಬೆಳೆಯುವ ಎಲ್ಲಾ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ನೀಡುವಲ್ಲಿ ಕೇಂದ್ರ ಸರ್ಕಾರ ಮತ್ತೊಮ್ಮೆ ವಿಫಲವಾಗಿದೆ.

**ಶ್ರೀಗಂಧದ ಬೆಳೆಗೆ ಉತ್ತೇಜನದ ಮಾತು ಮಾತ್ರ:** ಕೇಂದ್ರ ಸರ್ಕಾರ ಈ ಬಜೆಟ್‌ನಲ್ಲಿ ಶ್ರೀಗಂಧ ಬೆಳೆಗೆ ಉತ್ತೇಜನದ ಮಾತುಗಳನ್ನಾಡಿದೆ. ಆದರೆ ಅದು ಹೇಗೆ ಕಾರ್ಯಗತವಾಗುತ್ತದೆ ಎಂಬುದನ್ನು ಕಾದು ನೋಡಬೇಕಿದೆ. ಸ್ವಾಭಾವಿಕವಾಗಿ ಬೆಳೆಯುವ ಶ್ರೀಗಂಧದಲ್ಲಿ ತೈಲದ ಅಂಶ ಹೆಚ್ಚು ಇರುತ್ತದೆ. ಆದರೆ ರೈತರು ಜಮೀನಿನಲ್ಲಿ ಗೊಬ್ಬರ ಹಾಕಿ ಬೆಳೆಯುವ ಶ್ರೀಗಂಧಕ್ಕೆ ಹೆಚ್ಚಿನ ಬೆಲೆ ದೊರಕುವುದಿಲ್ಲ. ಇದರಿಂದ ಮುಂದಿನ ದಿನಗಳಲ್ಲಿ ರೈತರು ಸಂಕಷ್ಟ ಅನುಭವಿಸುವ ಸಾಧ್ಯತೆ ಇದೆ.

ರಾಜ್ಯ ಸರ್ಕಾರ ಈಗಾಗಲೇ ನೂತನ ಶ್ರೀಗಂಧ ನೀತಿಯನ್ನು ರೂಪಿಸಿದೆ. ಕಡಲ ಆಮೆಗಳ ಸಂರಕ್ಷಣೆಯನ್ನು ಪ್ರವಾಸೋದ್ಯಮದೊಂದಿಗೆ ಜೋಡಿಸಿ ಮಾದರಿಯ ಕೆಲಸ ಮಾಡಿದೆ. ಮಂಗಳೂರು ಮತ್ತು ಕಾರವಾರ ಭಾಗಗಳಲ್ಲಿ ಕಡಲ ಆಮೆಗಳ ಮೊಟ್ಟೆಗಳ ಸಂರಕ್ಷಣೆ ಮತ್ತು ಮರಿಗಳ ರಕ್ಷಣೆಗೆ ಪರಿಣಾಮಕಾರಿ ಕ್ರಮ ಕೈಗೊಂಡಿದೆ.

ಕಳೆದ 12 ವರ್ಷಗಳಲ್ಲಿ ದೇಶದಲ್ಲಿ ನಿರುದ್ಯೋಗ ಪ್ರಮಾಣ ಏರಿಕೆಯಾಗಿದೆ. ವರ್ಷಕ್ಕೆ 2 ಕೋಟಿ ಉದ್ಯೋಗದ ಭರವಸೆ ನೀಡಿದ್ದರೂ, ಯುವಜನರಿಗೆ ಉದ್ಯೋಗ ಸೃಷ್ಟಿಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಈ ಬಜೆಟ್‌ನಲ್ಲಿಯೂ ರಾಜ್ಯದ ಯುವಕರಿಗೆ ಭರವಸೆ ನೀಡುವಂತಹ ಯಾವುದೇ ಯೋಜನೆ ಕಾಣುತ್ತಿಲ್ಲ. ಹಳೆಯ ಬಾಟಲಿಯಲ್ಲಿ ಹೊಸ ದ್ರಾಕ್ಷಾರಸ ತುಂಬಿದಂತಿರುವ ಈ ಬಜೆಟ್ ದೇಶದ ಜನರ ನಿರೀಕ್ಷೆಗಳನ್ನು ಪೂರೈಸುವಲ್ಲಿ ವಿಫಲವಾಗಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

## ಕೇಂದ್ರದ ಬಜೆಟ್ ಬಡವರ ಶಾಪವಾಗಿದೆ.ಎಲ್ಲವೂ ನಿರಾಸೆ ಮೂಡಿಸಿದೆ: ಮಹದೇವಪ್ಪ ಸಚಿವ

# ಆರೋಗ್ಯ ಮತ್ತು ಶಿಕ್ಷಣ ಒಂದು ನಾಣ್ಯದ ಎರಡು ಮುಖಗಳಿದ್ದಂತೆ

## ರವೀಂದ್ರ ದಾಮ



**ಮಲ್ಲಮ್ಮ ನುಡಿ ವಾರ್ತೆ ಬೀದರ:**

ಬೀದರ ನಗರದ ಹಿಂದುಳಿದ ವರ್ಗಗಳ ಬಾಲಕಿಯರ ವಸತಿ ನಿಲಯದಲ್ಲಿಇತ್ತೀಚಿಗೆಹಮ್ಮಿಕೊಂಡಿದ್ದ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮಕ್ಕೆ ಬೀದರ ತಹಸೀಲ್ದಾರ ರವೀಂದ್ರ ದಾಮಾ ಅವರು ಉದ್ಘಾಟಿಸಿದರು.

ನಂತರ ಮಾತನಾಡಿ, ಆರೋಗ್ಯ ಮತ್ತು ಶಿಕ್ಷಣ ಒಂದು ನಾಣೆದ ಎರಡು ಮುಖಗಳಿದ್ದಂತೆ ಮಕ್ಕಳು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಯಾವುದೇ ತರಹದ ರೋಗ ಲಕ್ಷಣಗಳನ್ನು ಕಂಡುಬಂದಲ್ಲಿ ತಮ್ಮ ವಸತಿ ಶಾಲೆಯ ಮೇಲ್ವಿಚಾಕರಿಗೆ ತಕ್ಷಣ ತಿಳಿಸಬೇಕು ಹಾಗೂ ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಬಂದಾಗ ಅವರನ್ನು ಸಹಕರಿಸಿ ಪರೀಕ್ಷಿಸಿಕೊಳ್ಳಬೇಕು ಮತ್ತು ಸ್ವಚ್ಛತೆಯ ಬಗ್ಗೆ ಗಮನಹರಿಸಬೇಕು. ಇವಾಗ ದಿನಾಂಕ:-30-01-2026 ರಿಂದ 13-02-2026 ರವರೆಗೆ ಸ್ಪರ್ಶ ಕುಷ್ಠ ರೋಗ ಅರಿವು ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಕುಷ್ಠರೋಗದ ಲಕ್ಷಣಗಳನ್ನು ಕಂಡುಬಂದಲ್ಲಿ ಹೆದರದೆ ಪರೀಕ್ಷಿಸಿಕೊಳ್ಳಿ ಒಂದು ವೇಳೆ ರೋಗ ದೃಡಪಟ್ಟಲ್ಲಿ ಬಹು ಔಷಧಿಯಿಂದ ಸಂಪೂರ್ಣವಾಗಿ ಗುಣಪಡಿಸಬಹುದು ಎಂದು ಹೇಳಿದರು.

ತಾಲೂಕಾ ಆರೋಗ್ಯ ಅಧಿಕಾರಿ ಡಾ:ಸಂಗಾರೆಡ್ಡಿ ಮಾತನಾಡಿ, ಕುಷ್ಠ ರೋಗವು ಒಂದು ಸಾಂಕ್ರಾಮಿಕ ರೋಗವಾಗಿದ್ದು ತಮ್ಮ ದೇಹದ ಮೇಲೆ ತಿಳಿ ಬಿಳಿ ತಾಮ್ರ ಬಣ್ಣದ ನೋವು ನವೆ ಸ್ಪರ್ಶ ಜ್ಞಾನ ಇಲ್ಲದ ಮಚ್ಚೆಗಳು ಕಂಡುಬಂದಲ್ಲಿ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೊಳ್ಳಬೇಕು ಹಾಗೂ ಸಿಬ್ಬಂದಿಗಳು ರೋಗದ ಬಗ್ಗೆ ಸಾರ್ವಜನಿಕರಿಗೆ ಸೂಕ್ತ ತಿಳುವಳಿಕೆ ನೀಡಿ ಪ್ರಾರಂಭದ ಹಂತದಲ್ಲೆ ರೋಗ ಪತ್ತೆ ಮಾಡಿಬಹು ಔಷದಿ ಚಿಕಿತ್ಸೆ ಪಡೆಯುವುದರಿಂದ ಸಂಪೂರ್ಣವಾಗಿ ಗುಣ ಮುಖರಾಗುವುದಲ್ಲದೆ, ಮುಂದಾಗಬಹುದಾದ ವಿಕಲಾಂಗತೆಯನ್ನು ಕೂಡ ತಡೆಗಟ್ಟಬಹುದು, ಗಾಂಧೀಜಿಯವರ ಕನಸು "ಕುಷ್ಠರೋಗ ಮುಕ್ತ ಭಾರತವನ್ನು" ನಿರ್ಮಿಸಬಹುದಾಗಿದೆ ಎಂದು ಹೇಳಿದರು. ಓಂಕಾರ ಮಲ್ಲಿಗೆ ತಾಲೂ ಕಾಆರೋಗ್ಯ ಶಿಕ್ಷಣಾಧಿಕಾರಿಗಳು ರವರು ಮಕ್ಕಳಿಗೆ ಪ್ರತಿಜ್ಞೇ ಭೋಧಿಸಿದರು. ಈ ಕಾರ್ಯಾಕ್ರಮದಲ್ಲಿ ಸಂಗೀತಾ ಬಿರಾದರ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಅಂಬಿಕಾ ನಿಲಯ ಮೇಲ್ವಿಚಾರಕರು, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಅಬ್ರಾಹಂ ಧನರಾಜ ಮತ್ತು ವೀರಶೆಟ್ಟಿ ಚನ್ನಶೆಟ್ಟಿ, ಬಸವರಾಜ, ರಾಜಕುಮಾರ ಎ.ಎಸ್.ಓ ಹಾಗೂ ರೇವಣಪ್ಪಾ ತಿಮಗೊಂಡಿ, ಅಬ್ದುಲ ಹೈ, ಅಫಜಲೋದ್ದಿನ್, ಸೇರಿದಂತೆ ಮಕ್ಕಳು ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ದ.ರಾ. ಬೇಂದ್ರೆಯವರ ಜನ್ಮ ದಿನಾಚರಣೆ



**• ಮಲ್ಲಮ್ಮ ನುಡಿ ವಾರ್ತೆ ,ಬೀದರ:**

2ನೇ ಫ. 2026ರಂದು ಗೌರವಾನ್ವಿತ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಸಂಚಾಲಕರಾದ ಡಾ. ರಜನೀಶ್ ಎಸ್. ವಾಲಿಯವರ ಮಾರ್ಗದರ್ಶನದಲ್ಲಿ ನಗರದ ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯಲದಲ್ಲಿ ಕನ್ನಡ ವಿಭಾಗದಿಂದ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ದ.ರಾ. ಬೇಂದ್ರೇಯವರ ಜನ್ಮ ದಿನ ಆಚರಿಸಲಾಯಿತು, ಪ್ರಾಂಶುಪಾಲರಾದ ಡಾ. ದೀಪಾ ರಾಗಯವರು ಬೇಂದ್ರೆಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮುಖಾಂತರ ಮಾತನಾಡುತ್ತಾ ಬೇಂದ್ರೆಯವರು ಕನ್ನಡ ಸಾಹಿತ್ಯದ ಮೇರು ವ್ಯಕ್ತಿತ್ವ ಅವರ ಸಾಹಿತ್ಯ ಶ್ರೀಮಂತಿಕೆ ಕನ್ನಡ ನಾಡಿನ ಹೆಮ್ಮೆ, ಕನ್ನಡ ಕಾವ್ಯಕ್ಕೊಂದು ಹೊಸ ಶೋಭೆ ತಂದುಕೊಟ್ಟ ಶಬ್ದಗಾರುಡಿಗ, ನಮ್ಮ ಹಿರಿಯ ಸಾಹಿತಿಗಳ ಸಾಹಿತ್ಯ ನಮಗೆ ಪ್ರತಿ ಹೆಜ್ಜೆಗೂ ಮಾದರಿ, ರಸಋುಷಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಬೇಂದ್ರೆ ಅಜ್ಜನವರು ರಸವೇ ಜನನ, ವಿರಸವೇ ಮರಣ, ಸಮರಸವೇ ಜೀವನವೆಂದು ಜೀವನವನ್ನು ಪ್ರತಿಕ್ಷಣವು ಖುಷಿಯಿಂದ ಆಸ್ವಾದಿಸುವ ಪರಿಯನ್ನು ತಿಳಿಸಿದ ಅವರ ಸಾಹಿತ್ಯಕ್ಕೆ ಅವರೇ ಸಾಟಿ ಎಂದು ನುಡಿದರು.

ವಿಶೇಷ ಉಪನ್ಯಾಸ ನೀಡಿದ ಡಾ. ಬಿ.ಆರ್. ಅಂಬೇಡ್ಕರ ಪದವಿ ಮಹಾವಿದ್ಯಾಲಯ, ಹಳ್ಳಿಖೇಡ(ಬಿ)ನಿವೃತ್ತ ಪ್ರಾಂಶುಪಾಲರಾದ ಡಾ. ಗಣಪತಿ ನಾಯಕೋಡೆ ಮಾತನಾಡುತ್ತಾ ಅಂಬಿಕಾತನಯದತ್ತ ಕಾವ್ಯನಾಮದಿಂದ ಪ್ರಖ್ಯಾತರಾದ ಬೇಂದ್ರೇಯವರು ಕಾಲೇಜು ಹಂತದಲ್ಲಿಯೇ ಕವಿತೆಗಳನ್ನು ಬರೆಯುತ್ತಿದ್ದರು. ಅವರ ಸಾಹಿತ್ಯದಲ್ಲಿ ಉತ್ಸಾಹದ ಚಿಲುಮೆಯನುಕ್ಕಿಸಬಲ್ಲ, ನೊಂದಜೀವಕ್ಕೆ ಸಾಂತ್ವನ ನೀಡಬಲ್ಲ ಪ್ರೀತಿಪ್ರೇಮಗಳನ್ನು ಮೂಡಿಸಬಲ್ಲ ಕವಿತೆಗಳನ್ನು ರಚಿಸಿಕೊಟ್ಟ ಕನ್ನಡ ಸಾಹಿತ್ಯಕ್ಕೆ ವರವಾದ ವರಕವಿಯವರು ಸಾಹಿತಿ ಮಾತ್ರವಲ್ಲದೆ ಅಪ್ಪಟ ದೇಶಭಕ್ತರು ಅವರ ನರಬಲಿ ಕವನ ಸಂಕಲನದಿಂದ ಬ್ರೀಟಿಷ್‌ರ ಕೆಂಗಣ್ಣಿಗೆ ಗುರಿಯಾಗಿ ಸೆರೆಮನೆ ವಾಸುವು ಅನುಭವಿಸಿದರು ಎಂದು ನುಡಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಆಂತರಿಕ ಗುಣಮಟ್ಟ ಭರವಸೆಕೋಶದ ಅಧಿಕಾರಿಗಳಾದ ಡಾ.ಮಲ್ಲಿಕಾರ್ಜುನ ಕೋಟೆಯವರು ಹಾಜರಿದ್ದರು.

ಕನ್ನಡ ವಿಭಾಗದ ಮುಖ್ಯಸ್ಥೆಯಾದ ಶ್ರೀಮತಿ ರೇಣುಕಾದೇವಿ ಮಳ್ಳಿಸ್ವಾಮಿ ಪ್ರಾಸ್ತವಿಕವಾಗಿ ನುಡಿ ಹಾಗೂ ಪ್ರಾರ್ಥನೆ ಗೀತೆ ಹಾಡಿದರು

ಕಾರ್ಯಕ್ರಮವನ್ನು ಇತಿಹಾಸ ವಿಭಾಗದ ಉಪನ್ಯಾಸಕರಾದ ಶ್ರೀ ಬಸವರಾಜ ಬಿರಾದಾರ ನಿರೂಪಿಸಿದರೆ, ಕನ್ನಡ ವಿಭಾಗದ ಉಪನ್ಯಾಸಕಿಯಾದ ಶ್ರೀಮತಿ ಕಾವೇರಿ ಖಂಡ್ರೆಯವರು ಸ್ವಾಗತಿಸಿದರು ಹಾಗೂ ಕಾರ್ಯಕ್ರಮವನ್ನು ಶ್ರೀಮತಿ ರತಿದೇವಿ ವಂದಿಸಿದರು, ಮಹಾವಿದ್ಯಾಲಯದ ಎನ್.ಎಸ್. ಎಸ್. ಎನ್.ಸಿ.ಸಿ. ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಮಾನವ ಜನ್ಮ ಬಲು ದೊಡ್ಡದು ಹಾಳು ಮಾಡಿಕೊಳ್ಳದಿರಾ

## ಶಿವಲಿಂಗ ಶಿವಾಚಾರ್ಯರ ಆಶೀರ್ವಚನ




ಬೀದರ: ಔರಾದ ಕ್ಷೇತ್ರದ ಆರಾಧ್ಯ ದೇವರಾದ ಶ್ರೀ ಶ್ರೀ ಶ್ರೀ ದತ್ತದಿಗಂಬರ ಮಾಣಿಕೇಶ್ವರ ದೇವರ 46ನೇ ಜಾತ್ರಾ ಮಹೋತ್ಸವ ಲಾದಾ ಗ್ರಾಮದಲ್ಲಿ ಅದ್ದೂರಿಯಾಗಿ ಜರುಗಿತ್ತು. ಈ ಜಾತ್ರಾ ಮಹೋತ್ಸವದ ನಿಮಿತ್ಯ ಪಾಲಕಿ ಕಾರ್ಯಕ್ರಮವು ಧರ ಹನುಮಾನ ಕ್ಷೇತ್ರದ ಮಾಂಜ್ರಾ ನದಿಯವರೆಗೆ ತೀರದಲ್ಲಿ ಮಹಾದೇವನ ದೇವಸ್ಥಾನದವರೆಗೆ ಜರುಗಿತು. ನೂರಾರು ಹೆಣ್ಣುಮಕ್ಕಳು ತೆಲೆಯ ಮೇಲೆ ಕಳಸಾ ಹೊತ್ತು ಪುನೀತರಾದರು. ತದ ನಂತರ ಸನ್ಮಾನ ಕಾರ್ಯಕ್ರಮ ಜರುಗಿತು.

ಮಾನವ ಜನ್ಮ ಬಲು ದೊಡ್ಡದು ಹಾಳು ಮಾಡಿಕೊಳ್ಳದಿರಾ ಹುಚ್ಚಪ್ಪ ಗಳಿರ ಎಂದು ಮಹಾತ್ಮರು ಹೇಳುತ್ತಾರೆ. ಮನುಷ್ಯ ಜನ್ಮ ಸಾರ್ಥಕವಾಗಬೇಕಾದರೆ ಗುರುಗಳ ಸೇವೆ ತಂದೆ ತಾಯಿಯರ ಸೇವೆ ಮಾಡಬೇಕು. ಮಾಣಿಕೇಶ್ವರರು ಈ ಭಾಗದ ಭಕ್ತರ ಆರಾಧ್ಯ ದೇವರು ಮಾಣಿಕೇಶ್ವರರಿಂದ ಈ ನೆಲ ಪಾವನವಾಯಿತು. ಜಲ ತೀರ್ಥವಾಯಿತು. ಭಕ್ತರ ಬದುಕು ಉದ್ಧಾರವಾಯಿತು ಎಂದು ಹೆಡಗಾಪುರದ ನೂತನ ಪೀಠಾಧಿಪತಿಗಳಾದ ಶ್ರೀ ಷ ಬ್ರ ದಾರುಕ ಲಿಂಗ ಶಿವಾಚಾರ್ಯರು ಆಶೀರ್ವಚನ ನೀಡಿದರು. ಈ ಸಮಾರಂಭ ದ ಸಾನಿಧ್ಯ ವನ್ನು ಹೆಡಗಾಪುರದ ಹಿರಿಯ ಶ್ರೀಗಳಾದ ಷ ಬ್ರ ಶಿವಲಿಂಗ ಶಿವಾಚಾರ್ಯರು ವಹಿಸಿಕೊಂಡಿದ್ದರು ತಮ್ಮ ಆಶೀರ್ವಚನ ನೀಡಿದರು.

ಈ ಸುಕ್ಷೇತ್ರಕ್ಕೆ ವಿಧಾನ ಪರಿಷತ ಸದಸ್ಯರಾದ ಡಾ. ಎಂ ಜಿ ಮೂಳೆ, ತಮ್ಮ ಅನುದಾನದಡಿ ದೇವಸ್ಥಾನದ ಅಭಿವೃದ್ಧಿಗೆ 5 ಲಕ್ಷ ನೀಡುವ ಭರವಸೆ ನೀಡಿದರು. ಮಾಜಿ ಬುಡಾ ಅಧ್ಯಕ್ಷರಾದ ಬಾಬು ವಾಲಿ ಸೇರಿದಂತೆ ಇತರ ಪ್ರಮುಖರು ಮಾತನಾಡಿದರು.

ಈ ಹೆಸರಾಂತ ಜಾತ್ರಾ ಮಹೋತ್ಸವದ ನೇತೃತ್ವವನ್ನು ದಾರುಕಲಿಂಗ ಶಿವಾಚಾರ್ಯರು, ಚಾಂಬೋಳ ರುದ್ರಮುನೇಶ್ವರ ಮಠದ ಅಭಿನವ ರುದ್ರಮುನಿ ಶಿವಾಚಾರ್ಯರರು, ಗಂಗಾಧರ ಶಿವಚಾರ್ಯರರು, ಲಾಡಗೇರಿ, ಬೀದರ ಸಾಯಗಾಂವ್‌ನ ಶಿವಾನಂದ ಮಹಾಸ್ವಾಮಿಗಳು ವಹಿಸಿದರು.

ಜಾತ್ರಾ ಮಹೋತ್ಸವದ ಅಧ್ಯಕ್ಷತೆಯನ್ನು ಶ್ರೀ ಶ್ರೀ ಶ್ರೀ ಗುರುದೇವ ದತ್ತ ದಿಗಂಬರ ಮಾಣೀಕೇಶ್ವರ ವಂಶಸ್ಥರಾದ ವಿಜಯಕುಮಾರ ಪಾಟೀಲ ಯರನಳ್ಳಿ ಮತ್ತು ಧರಿ ಹನುಮಾನ ಕ್ಷೇತ್ರದ ಸಮಿತಿಯ ಸದಸ್ಯರು ವಹಿಸಿದರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರಾದ ಡಾ. ಎಮ್ ಜಿ ಮೂಳೆ, ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ, ಮಾಜಿ ಬುಡಾ ಅಧ್ಯಕ್ಷರಾದ ಬಾಬು ವಾಲಿ, ಕರ್ನಾಟಕ ಕಾರ್ಯನಿರತ ಜಿಲ್ಲಾದ್ಯಕ್ಷರಾದ ಆನಂದ ದೇವಪ್ಪ, ಉದ್ಯಮಿಗಳಿಗಾದ ಜೈರಾಜ್ ಖಂಡ್ರೆ, ಪ್ರಮುಖರಾದ ಬಾಬುರಾವ್ ಕಾರಬಾರಿ, ಬಸವರಾಜ ಉಂಡೆ ವೀರಶೆಟ್ಟಿ ಪಾಟೀಲ ಬಾಬಳಿ, ನೆಹರೂ ಪಾಟೀಲ ಬಾಬಳಿ, ಶೆಟ್ಟೆಪ್ಪಾ ಬಿರಾದರ ಬಾಬಳಿ, ಬಸವರಾಜ ಮಹಾನೂರೆ, ಶಿವಶಂಕರಯ್ಯ ಲಾದಾ ಸೇರಿದಂತೆ ಅನೇಕ ಭಕ್ತಾದಿಗಳು ಗ್ರಾಮಸ್ಥರು, ಭಕ್ತರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಭೋಜಾರೆಡ್ಡಿ, ಬರ್ದಾಪುರ, ಪ್ರಸ್ತಾವಿಕ ನುಡಿ ಸ್ವಾಗತವನ್ನು ವಿಜಯಕುಮಾರ ಪಾಟೀಲ ಯರನಳ್ಳೀ ನಡೆಸಿಕೊಟ್ಟರು. ವಂದನಾರ್ಪಣೆಯನ್ನು ಸುನೀಲ ಮಾಹಾನೂರೆ ಲಾದಾ ನಡೆಸಿಕೊಟ್ಟರು.

**ಶ್ರೀ ಶ್ರೀ ಶ್ರೀ ದತ್ತ ದಿಗಂಬರ ಮಾಣೀಕೇಶ್ವರ ಧರಿ ಹನುಮಾನ ಮಂದಿರದ 46ನೇ ಜಾತ್ರಾ ಮಹೋತ್ಸವ ನಿಮಿತ್ಯ ಸನ್ಮಾನ ಕಾರ್ಯಕ್ರಮ**

# ಹಲಬರ್ಗಾ ಶ್ರೀಗಳಿಗೆ ನಮ್ಮ ಕರ್ನಾಟಕ ಸೇನೆಯಿಂದ ಸನ್ಮಾನ



**• ಮಲ್ಲಮ್ಮ ನುಡಿ ವಾರ್ತೆ ,ಭಾಲ್ಕಿ;**

ಗ್ರಾಮೀಣ ಭಾಗದಲ್ಲಿ ಅಧ್ಯಾತ್ಮಿಕ ಮತ್ತು ಧಾರ್ಮಿಕ ಕ್ಷೇತ್ರಗಳಲ್ಲಿ ಸಲ್ಲಿಸುತ್ತಿರುವ ವಿಶಿಷ್ಟ ಸೇವೆಗೆ ಹಾವಗಿಲಿಂಗೇಶ್ವರ ಶಿವಾಚಾರ್ಯ ಅವರಿಗೆ ಗೌರವ ಡಾಕ್ಟರೇಟ್ ಸಂದಿರುವುದು ಸಂತಸ ತರಿಸಿದೆ ಎಂದು ನಮ್ಮ ಕರ್ನಾಟಕ ಸೇನೆಯ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಹೇಳಿದರು.ತಾಲೂಕಿನ ಹಲಬರ್ಗಾ ಗ್ರಾಮದ ರಾಚೋಟೇಶ್ವರ ಮಠದಲ್ಲಿ ನಮ್ಮ ಕರ್ನಾಟಕ ಸೇನೆ ವತಿಯಿಂದ ಸೋಮವಾರ ಆಯೋಜಿಸಿದ್ದಗೌರವ ಡಾಕ್ಟರೇಟ್ ಪುರಸ್ಕೃತ ಡಾ.ಹಾವಗಿಲಿಂಗೇಶ್ವರ ಶಿವಾಚಾರ್ಯ ಅವರ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಪೂಜ್ಯರನ್ನು ಸನ್ಮಾನಿಸಿ ಅವರು ಮಾತನಾಡಿದರು. ಗಡಿಯಲ್ಲಿ ಧರ್ಮ ಸೇವೆ ಜತೆಗೆ ಪೂಜ್ಯರು ಕನ್ನಡದ ಕಾರ್ಯಗಳಿಗೆ ಸದಾ ಪ್ರೋತ್ಸಾಹ ನೀಡುತ್ತ ಬಂದಿದ್ದಾರೆ. ಅವರ ಸೇವೆಗೆ ಇನ್ನಷ್ಟು ಗೌರವ ಸನ್ಮಾನ, ಪ್ರಶಸ್ತಿ ಹರಿದು ಬರಲಿ ಎಂದು ಪ್ರಾರ್ಥಿಸಿದರು.ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆಯ ಉಪಾಧ್ಯಕ್ಷ ರಾಜಕುಮಾರ ಪಾಟೀಲ್ ಖಾನಾಪೂರ, ಯುವ ಘಟಕದ ಅಧ್ಯಕ್ಷ ಸುದೀಪ ತೂಗಾವೆ, ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಪ್ರಮುಖರಾದ ಪ್ರಶಾಂತ ಹಣಮಶೆಟ್ಟಿ, ಗಿರೀಶ ಕುಲಕರ್ಣಿ, ರಮೇಶ, ರಾಜಕುಮಾರ ಚಲುವಾ, ಕಾಶಿನಾಥ ಚಳಕಾಪೂರೆ, ರಾಜಕುಮಾರ ಕುಂಬಾರ, ಸಂದೀಪ ಕೋಟೆ, ದತ್ತು ಪಾಟೀಲ್, ಸಂಗಮೇಶ ಪಟ್ನೆ, ಸಂಗಮೇಶ ಮಾರ್ಗೆ ಸೇರಿದಂತೆ ಹಲವರು ಇದ್ದರು.

# ಜೇಡರ ದಾಸಿಮಯ್ಯ ಜಯಂತಿ ಕಾರ್ಯಕ್ರಮ

## ಕಾಯಕದ ಮೂಲಕ ಅಧ್ಯಾತ್ಮಿಕ



**• ಮಲ್ಲಮ್ಮ ನುಡಿ ವಾರ್ತೆ ,ಭಾಲ್ಕಿ:**

ಶರಣ ಜೇಡರ ದಾಸಿಮಯ್ಯನವರು ನೇಕಾರನಾಗಿ(ನೇಯ್ಗೆಕಾಯಕ)ದುಡಿಯುತ್ತಲೇ ಆಧ್ಯಾತ್ಮಿಕ ಸಾಧನೆ ಮಾಡಬಹುದೆಂದು ತೋರಿಸಿಕೊಟ್ಟು, ಕಾಯಕವೇ ಕೈಲಾಸ ತತ್ವಕ್ಕೆ ಮಾದರಿಯಾದರು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಭಾನುವಾರ ಆಯೋಜಿಸಿದ್ದ ಜೇಡರ ದಾಸಿಮಯ್ಯನವರ ಜಯಂತಿ ಮತ್ತು ಮಾಸಿಕ 495ನೇ ಶಿವಾನುಭವ ಗೋಷ್ಠಿಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಸವಣ್ಣನವರು ತಮ್ಮ ಅನೇಕ ವಚನಗಳಲ್ಲಿ ಜೇಡರ ದಾಸಿಮಯ್ಯನವರನ್ನು ಅತ್ಯಂತ ಗೌರವದಿಂದ ಸ್ಮರಿಸಿದ್ದಾರೆ. ವಿದ್ವಾಂಸರು ಜೇಡರ ದಾಸಿಮಯ್ಯನವರಿಗೆ ಆದ್ಯ ವಚನಕಾರ ಎಂದು ಕರೆದಿದ್ದಾರೆ. ದಾಸಿಮಯ್ಯನವರ ವಚನಗಳು ಅತ್ಯಂತ ಸರಳ ಮತ್ತು ಸಹಜವಾಗಿ ತಿಳಿಯುತ್ತವೆ. ಲಿಂಗಾಯತ ಧರ್ಮ ಸಿದ್ಧಾಂತದ ಹಾಗೂ ಮೂಢನಂಬಿಕೆ, ಲಿಂಗಭೇದ, ಡಾಂಬಿಕತೆ ಕುರಿತು ಅವರು ಮಾತನಾಡುತ್ತಾರೆ.

ವಚನ ಸಾಹಿತ್ಯಕ್ಕೆ ಅವರು ನೀಡಿದ ಕೊಡುಗೆ ಅಪಾರವಾಗಿದೆ. ಅವರ ಜೀವನ ಗ್ರಹಸ್ಥರಿಗೆ ಅತ್ಯಂತ ಮಾದರಿಯಾಗಿದೆ. ದಾಂಪತ್ಯ ಜೀವನ ಹೇಗೆ ಇರಬೇಕೆಂದು ಅರ್ಥಪೂರ್ಣವಾಗಿ ಹೇಳಿ ಕೊಟ್ಟಿದ್ದಾರೆ. ಅವರ ಜೀವನ ಮತ್ತು ವಚನ ಸಂದೇಶ ಎಲ್ಲರೂ ತಮ್ಮ ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸೋಮಶೇಖರ ನಾಗಪ್ಪ ಅಮಲಾಪುರೆ ಕಾರ್ಯಕ್ರಮ ಉದ್ಘಾಟಿಸಿದರು. ಬಾಬುರಾವ ಖೇಡ ಅಧ್ಯಕ್ಷತೆ ವಹಿಸಿದರು. ತಾಲೂಕು ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ ಅನುಭಾವ ನೀಡಿದರು.

ಅರ್ಬನ್ ಬ್ಯಾಂಕ್ ನಿರ್ದೇಶಕಿ ಶೃತಿ ಸಂತೋಷ ಪಾಟೀಲ ಧರ್ಮ ಗ್ರಂಥ ಪಠಣ ಮಾಡಿದರು.

ಈ ಸಂದರ್ಭದಲ್ಲಿ ಶಶಿಕಲಾ ಅಮೃತಪ್ಪ ಚೊಂಡೆ, ಭಾಗ್ಯಶ್ರೀ ವಿಶ್ವನಾಥ ಮಹಾಗಾಂವೆ, ವಿಜಯಕುಮಾರ ಬಸವಣ್ಣಪ್ಪ ಗೌಡಗಾಂವೆ, ಸಂಗಮೇಶ ಪ್ರಭುರಾವ ಕಾರಾಮುಂಗೆ, ರಾಜಶೇಖರ ಗುರುಬಸಪ್ಪ ಪಾಟೀಲ್ ಸೇರಿದಂತೆ ಹಲವರು ಇದ್ದರು.

ಸಂತೋಷ ಬಿ.ಜಿ. ಪಾಟೀಲ್ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಮಂಗಲಾ ಗಣಪತಿ ಕಾಡಾದೆ, ಮಾಹಂತೇಶ, ಕಿರಣ ವಚನ ಗಾಯನ ನಡೆಸಿ ಕೊಟ್ಟರು. ಎಚ್. ಮರಿಯಪ್ಪ, ಶ್ರೀದೇವಿ ರಮೇಶ ಪಟ್ನೆ ಭಕ್ತಿ ದಾಸೋಹ ವಹಿಸಿ ಕೊಂಡಿದ್ದರು.



ಕಮಲನಗರ:ಮಲ್ಲಮ್ಮ ನುಡಿ ದಿನ ಪತ್ರಿಕೆ ಹೊರ ತಂದ ವಿಶಿಷ್ಟ ಕ್ಯಾಲೆಂಡರರನ್ನು ಪಟ್ಟಣದ ಶಾಂತಿವರ್ಧಕ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಶ್ರೀ ಶಿವಾಜಿ ಆರ್. ಎಚ್ ಸರ್ ಅವರಿಗೆ ಕ್ಯಾಲೆಂಡರ್ ನೀಡಿ ಹೊಸ ವರ್ಷದ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಕಮಲನಗರ ತಾಲೂಕ ವರದಿಗಾರ ಪರಮೇಶ ರಾಂಪುರೆ ಅವರು ಇದ್ದರು.

# ಮೀನು ವಿತರಣೆ



**• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:**

ತಾಲೂಕಿನ ದಾಬಕಾ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಏನ್. ಆರ್. ಎಮ್. ಎಲ್ ಯೋಜನೆಯಡಿ ಝಾನ್ಸಿ ರಾಣಿ ಲಕ್ಷ್ಮೀಬಾಯಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ವತಿಯಿಂದ ಮಹರ್ಷಿ ವಾಲ್ಮೀಕಿ ಮೀನುಗಾರಿಕೆ ಮಹಿಳಾ ಸ್ವ ಸಹಾಯ ಸಂಘದ ಸದಸ್ಯರಿಗೆ ಮತ್ಸ್ಯ ಸಂಜೀವಿನಿ ಯೋಜನೆಯಡಿ ಸುಮಾರು 5000 ಮೀನುಗಳು ವಿತರಿಸುವ ಕಾರ್ಯ ಜರುಗಿದೆ.

ದಾಬಕಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಪ್ರಶಾಂತ ಸುತಾರ ರವರು ಗಂಗನಬೀಡ ಕೆರೆಗೆ ಮೀನು ಬೀಡುವ ಮುಖಾಂತರ ಚಾಲನೆ ನೀಡಿದರು. ಇದು ಮಹಿಳೆಯರಿಗೆ ಒಳ್ಳೆಯ ಕಾರ್ಯಕ್ರಮವಾಗಿದೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಮತ್ತು ಅಭಿವೃದ್ಧಿ ಯಾಗಲು ತಿಳಿಸಿದರು.

ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರು ಕುಮಾರಿ ಕವಿತಾ ಬಿರಾದಾರ ಮಾತನಾಡಿ, ಮಹಿಳೆಯರು ಮೀನುಗಾರಿಕೆಗೆ ಒತ್ತುನೀಡಿ ಈ ಯೋಜನೆಯ ಲಾಭ ಪಡೆಯಬೇಕು ಎಂದು ಮಾಹಿತಿ ನೀಡಿದರು.ಸದರಿ ಕಾರ್ಯಕ್ರಮದಲ್ಲಿ ಸಂಘದ ಮಹಿಳೆಯರು ಪಂಚಾಯತ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಹಾವಗಿಲಿಂಗೇಶ್ವರ ಶಿವಾಚಾರ್ಯರಿಗೆ ಗೌರವ ಡಾಕ್ಟರೇಟ್ ಪದವಿ:ಭಕ್ತರಿಂದ ಸನ್ಮಾನ



**• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:**

ತಾಲೂಕಿನ ಯುವ ಮುಖಂಡ ಸಂತೋಷ ಬಿರಾದಾರ ಅವರ ಮನೆಯಲ್ಲಿ ಇತೀಚೆಗೆ ಹಲಬರ್ಗಾದ ರಾಚೋಟೇಶ್ವರ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಪರಮ ಪೂಜ್ಯ ಡಾ. ಹಾವಗಿಲಿಂಗೇಶ್ವರ ಶಿವಾಚಾರ್ಯರಿಗೆ ಗೌರವ ಡಾ-ಕ್ಟರೇಟ್ ಪದವಿ ಪ್ರದಾನ ನಿಮಿತ್ಯ ಬಿರಾದಾರ ಪರಿವಾರದಿಂದ ಅವರ ಮನೆಯಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ವೇಳೆ ಮಾತನಾಡಿದ ಸಂತೋಷ ಬಿರಾದಾರ, ಅಪ್ಪಾಜಿ ಅವರ ಸುದೀರ್ಘ ಆಧ್ಯಾತ್ಮಿಕ ಮತ್ತು ಸಮಾಜಿಕ-ಧಾರ್ಮಿಕ ಸೇವೆಯನ್ನು ಗುರುತಿಸಿ ಏಷ್ಯಾ ಇಂಟರ್ ನ್ಯಾಷನಲ್ ಕಲ್ಚರಲ್ ರಿಸರ್ಚ್ ವಿಶ್ವವಿದ್ಯಾಲಯವು ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಶ್ರೀಗಳು ಕಳೆದ ಎರಡು ದಶಕಗಳಿಂದ ಸಮಾಜದ ಏಳಿಗೆಗಾಗಿ, ಭಕ್ತರಲ್ಲಿ ಸನ್ಮಾರ್ಗ ಮತ್ತು ಆಧ್ಯಾತ್ಮಿಕ ಜಾಗೃತಿ ಮೂಡಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಶ್ರೀಗಳಿಗೆ ಈ ಗೌರವ ಲಭಿಸಿರುವುದಕ್ಕೆ ಹೆಮ್ಮೆ ಆಗುತ್ತಿದೆ ಎಂದು ಪ್ರಕಟಣೆಗೆ ತಿಳಿಸಿದರು. ತಾಲೂಕಿನದಂತ್ಯ ಗಣ್ಯರು, ಮಠದ ಭಕ್ತರು ಹಾಗೂ ಅಪಾರ ಅನುಯಾಯಿಗಳು ಸಂತಸ ವ್ಯಕ್ತಪಡಿಸಿದ್ದಾರೆ ಅದರಲ್ಲಿ ಶಿವಕುಮಾರ ಬಿರಾದಾರ, ಡಿಗ್ಗಿ ಗ್ರಾಮದ ಶಿವಲಿಂಗಯ್ಯ ಸ್ವಾಮಿ, ದೇವೇಂದ್ರ ಪಾಟೀಲ, ಮಡಿವಾಳಪ್ಪ ಮುರ್ಕೆ, ಶಿವಕುಮಾರ ರಾಂಪುರೆ ಸೇರಿದಂತೆ ಅನೇಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ವೈಭವದಿಂದ ನಡೆದ ಬೆಳ್ಳಿ ಪಲ್ಲಕ್ಕಿ ಮೆರವಣಿಗೆ



> ರಾಜೇಶ್ವರಶಿವಾಚಾರ್ಯ ಪೂಜ್ಯರಮಾರ್ಗದರ್ಶನದಲ್ಲಿ ಭಾವೈಕ್ಯತೆ ಹಾಗೂ ಅಂತರ್ಜಲ ಹೆಚ್ಚಿಸುವ ಕಾರ್ಯದಲ್ಲಿ ನಮ್ಮ ಗ್ರಾಮ ರಾಜ್ಯಕ್ಕೆಮಾದರಿಯಾಗಿರುವುದು ಹೆಮ್ಮೆ ತರಿಸಿದೆ
>
> **ಗಜಾನಂದ ಮೊಳಕೀರೆ**
> **ಸ್ಥಳೀಯ ನಿವಾಸಿ ಮೇಹಕರ**

**• ಮಲ್ಲಮ್ಮ ನುಡಿ ವಾರ್ತೆ,ಭಾಲ್ಕಿ**

ತಾಲೂಕಿನ ಗಡಿಭಾಗದ ಮೇಹಕರ ಗ್ರಾಮದಲ್ಲಿ ಭರತ ಹುಣ್ಣಿಮೆ ನಿಮಿತ್ತ ವೀರುಪಾಕ್ಷೇಶ್ವರ ದೇವರ ಜಾತ್ರಾ ಮಹೋತ್ಸವ ಭಕ್ತಿ ಭಾವದಿಂದ ತೆರೆ ಕಂಡಿತು.

ರಾಜೇಶ್ವರ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಕೊನೆಯ ದಿನ ಭಾನುವಾರ ವೀರುಪಾಕ್ಷೇಶ್ವರ ದೇವರ ಬೆಳ್ಳಿ ಪಲ್ಲಕ್ಕಿ ಮೆರವಣಿಗೆ ವೈಭವದಿಂದ ಜರುಗಿತು.

ಗ್ರಾಮದ ವಿವಿಧ ಪ್ರಮುಖ ರಸ್ತೆ, ಬೀದಿ, ವೃತ್ತಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಿ ರಂಗೋಲಿಯ ಚಿತ್ತಾರದ ಮೂಲಕ ಭಕ್ತರು ಶ್ರದ್ಧೆ, ಭಕ್ತಿಯಿಂದ ಪಲ್ಲಕ್ಕಿ ಉತ್ಸವನ್ನು ಬರಮಾಡಿಕೊಂಡರು.

ಮೆರವಣಿಗೆಯುದ್ದಕ್ಕೂ ಡೊಳ್ಳು ಕುಣಿತ, ವೀರಗಾಸೆ ಸೇರಿ ವಿವಿಧ ಸಾಂಸ್ಕೃತಿಕ ಪ್ರದರ್ಶನಗಳು ಮೆರವಣಿಗೆ ಕಳೆ ಹೆಚ್ಚಿಸಿದ್ದವು.

ಇದಕ್ಕೂ ಮುನ್ನ ನಡೆದ ಧರ್ಮ ಸಭೆಯಲ್ಲಿ ರಾಜೇಶ್ವರ ಶಿವಾಚಾರ್ಯ ಮಾತನಾಡಿ, ಜಾತ್ರಾ ಮಹೋತ್ಸವಗಳು ಕೇವಲ ಆಚರಣೆಗೆ ಸೀಮಿತವಾಗದೇ, ಗ್ರಾಮದ ಅಭಿವೃದ್ಧಿ ಚಿಂತನೆಗಳು, ಭಾವೈಕ್ಯತೆ ಮತ್ತು ಮಾನವ ಧರ್ಮವನ್ನು ಬಲಪಡಿಸುವ ವೇದಿಕೆಯಾಗಬೇಕು ಎಂದು ತಿಳಿಸಿದರು.

# ಆಹ್ವಾನ ಪತ್ರಿಕೆ ಬಿಡುಗಡೆ



• ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ

ಕನಕದಾಸ ಮತ್ತು ಸಂಗೊಳ್ಳಿ ರಾಯಣ್ಣ ಪುತ್ಥಳಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ರೈತ ಬಾಂಧವರು, ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಎಂದು ಕರ್ನಾಟಕ ಪ್ರದೇಶ ಕುರುಬ ಸಂಘದ ವಲಯಾಧ್ಯಕ್ಷ ರವಿಂದ್ರಕುಮಾರ ಕಡೇಚೂರು ಮನವಿ ಮಾಡಿದರು.

ಸೈದಾಪುರ ಪಟ್ಟಣದಲ್ಲಿ ಕುರುಬ ಸಮಾಜದವತಿಯಿಂದ ಕನಕದಾಸ ಮತ್ತು ಸಂಗೊಳ್ಳಿ ರಾಯಣ್ಣ ಮೂರ್ತಿ ಲೋಕಾರ್ಪಣೆ ಆಹ್ವಾನ ಪತ್ರಿಕೆ ಬಿಡುಗಡೆ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.

ಸಮೀಪದ ಬಾಲಛೇಡ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಕನಕದಾಸ ಮತ್ತು ಸಂಗೊಳ್ಳಿ ರಾಯಣ್ಣ ಪುತ್ಥಳಿ ಕಾರ್ಯಕ್ರಮವು ಫೆ-3 ಮಂಗಳವಾರ ಬೆಳಿಗ್ಗೆ 11 ಗಂ-ಟೆಗೆ ಲೋಕಾರ್ಪಣೆಗೊಳ್ಳಲಿದೆ. ಅಲ್ಲದೆ ಬೆಳಿಗ್ಗೆ ಗ್ರಾಮದ ಭೀರಪ್ಪ ಗುಡಿಯಿಂದ ಕನಕವೃತ್ತದವರೆಗೆ ಕಳಸ-ಕುಂಬದೊಂದಿಗೆ ಗಣ್ಯರು, ಬಾಲಛೇಡ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು, ಮೆರವಣಿಗೆ ಮೂಲಕ ಸಾಗಿ ಪುತ್ಥಳಿಯನ್ನು ಲೋಕಾರ್ಪಣೆಗೊಳಿಸುವುದು. ಈ ಕಾರ್ಯಕ್ರಮದಲ್ಲಿ ಅಗತೀರ್ಥ ಸರೂರ ಶಾಖಾಮಠದ ಹಾಲುಮತ ಗುರುಪೀಠದ ರೇವಣಸಿದ್ದೇಶ್ವರ ಸ್ವಾಮಿ, ಕ್ಷೀರಲಿಂಗೇಶ್ವರ ಸ್ವಾಮಿ ಚೇಗುಂಟಾ, ತಿಂತಣಿ ಬ್ರಿಜ್ ಕನಕ ಗುರುಪೀಠ ಕಾಗಿನೆಲೆ ಮಠದ ಲಿಂಗಭೀರದೇವರು, ಜಗಲಿಂಗೇಶ್ವರ ಸ್ವಾಮಿ, ಸೋಮೇಶ್ವರಾನಂದ ಸ್ವಾಮಿ, ಶಾಸಕ ಶರಣಗೌಡ ಕಂದಕೂರ, ಸಮಾಜದ ರಾಜ್ಯ ಉಪಾಧ್ಯಕ್ಷ ನಿಖಿಲ್.ವಿ ಶಂಕರ್ ಸೇರಿದಂತೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಆದ್ದರಿಂದ ಸೈದಾಪುರ, ಮುನಗಾಲ, ಸಂಗವಾರ, ಬಾಡಿಯಾಲ, ಗೂಡೂರು, ಜೋಳದೊಡಗಿ, ಗೊಂದೆಡಗಿ, ಬೆಳಗುಂದಿ, ಸಾವೂರು, ಮಲ್ಹಾರ, ಆನೂರು.ಕೆ,ಬಿ, ಬದ್ದೇಪಲ್ಲಿ, ದುಪ್ಪಲ್ಲಿ, ಕಡೇಚೂರು, ಶೆಟ್ಟಿಹಳ್ಳಿ, ಕೂಡ್ಲೂರು, ಗೌಡಗೇರಾ, ಕಿಲ್ಲನಕೇರಾ, ಬಳಿಚಕ್ರ, ಕಣೇಕಲ್, ನೀಲಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ರೈತರು, ಸಮಾಜದ ಸಮಸ್ತ ನಾಗರಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯ ಮುಖಂಡ ಭೀಮಶಪ್ಪ ಜೇಗರ್, ಕೈಲಾಸ್ ಆಸ್ಪಲ್ಲಿ, ಮಹಾದೇವ ಮುನಗಾಲ, ಸಿದ್ದು ಪೂಜಾರಿ, ವಿಜಯ ಕಂದಳ್ಳಿ, ಮಹೇಶ ಜೇಗರ್, ಪುಂಡಲಿಕ, ಬೀರಲಿಂಗ ಕಿಲ್ಲನಕೇರಾ, ಚಂದ್ರಶೇಖರ್ ಹೊಸಳ್ಳೋರ್, ತಾಯಪ್ಪಗಡದೋರ್, ಸಾಬಣ್ಣಗೌಡ್ರ ಬಾಲಛೇಡ್ ಸೇರಿದಂತೆ ಇತರರಿದ್ದರು.

# ಶರಣ ತತ್ವ ಚಿಂತನೆಯ ಮೇಲೆ ಬೆಳಕು ಚೆಲ್ಲುವ ಕಾರ್ಯ

• ಮಲ್ಲಮ್ಮ ನುಡಿ ವಾರ್ತೆ ,ಕೆಂಭಾವಿ:

ಸಾಹಿತ್ಯ, ಸಂಗೀತ, ಸಾಂಸ್ಕೃತಿಕ, ಪರಂಪರೆಯ ಬೇರು, ಸಂಸ್ಕೃತಿಯ ಬೀಜ, ಶಿವಾನುಭವದ ಬೆಳೆ, ಪೈರು, ತೆನೆ, ಇಂದಿಗೂ ಈ ನೆಲದಲ್ಲಿ ಹಸಿರಾಗಿ ಉಳಿದಿದೆ ಎಂದು ವಡಗೇರಿಯ ಮಲ್ಲಯ್ಯ ಸ್ವಾಮಿ ಹೇಳಿದರು.



ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶ್ರೀಗುರು ಕಾಂತೇಶ್ವರ ಜನ ಕಲ್ಯಾಣ ಸೇವಾ ಪ್ರತಿಷ್ಠಾನದ ವತಿಯಿಂದ ರವಿವಾರ ಸಂಜೆ ಹಮ್ಮಿಕೊಂಡಿದ್ದ ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಉಪನ್ಯಾಸ ನೀಡಿದ ಅವರು ಹಸಿರು ಹೊನ್ನು ಹುಡುಕಿಕೊಳ್ಳಲು ಸಹೃದಯ ಉಸಿರಿನ ಜ್ಞಾನ ಮತ್ತು ಜಾಣತನ ಎರಡನ್ನೂ ಮಾಸಿಕ ಹುಣ್ಣಿಮೆಯ ಸತ್ಸಂಗದಲ್ಲಿ ಸೂಫಿ ಸಂತರ, ತತ್ವಪದಕಾರರ, ಶರಣರ ತತ್ವಚಿಂತನೆಯ ಮೇಲೆ ಬೆಳಕು ಚೆಲ್ಲುತ್ತಾ, ಹೊಸ ಭಾಷೆ ಬರೆಯುವ ಸಹೃದಯದ ಸತ್ಕಾರ್ಯವೇ ಸತ್ಸಂಗವೆಂದವರು, ಮಾಸಿಕ ಹುಣ್ಣಿಮೆಯ ಮಹಾನ್ ಕಾರ್ಯದಲ್ಲಿ ಭಾಗಿಯಾಗುವುದು ನಮ್ಮೆಲ್ಲರ ಸೌಭಾಗ್ಯ ಎಂದರು .

ಷಬ್ರ ಚನ್ನಬಸವ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ಶ್ರೀಮಠದ ಸದ್ಭಕ್ತರು ಶ್ರೀಮಠದಲ್ಲಿ ಜರುಗುವ ಹುಣ್ಣಿಮೆಯ ಸತ್ಸಂಗದ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಜಿಲ್ಲಾ ಪಂಚಾಯತ್ ಯೋಜನಾ ಸಮಿತಿಯ ಸದಸ್ಯರಾಗಿ ಆಯ್ಕೆಯಾದ ಪುರಸಭೆ ಸದಸ್ಯರಾದ ರವಿಶಂಕರ ಸೊನ್ನದ ಹಾಗೂ ಆರೀಫ್ ಹುಸೇನ್ ಖಾಜಿ ಮತ್ತು ಕೊಟ್ಟುಣಟಿಜಜಜಿಟಿಜಜರು ಚಾರಿಟೇಬಲ್ ಟ್ರಸ್ಟ್ ಕೊಡ ಮಾಡುವ ಸಾಹಿತ್ಯ ರತ್ನ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಶರಣಯ್ಯಸ್ವಾಮಿ ಹಿರೇಮಠ ಇವರಿಗೆ ಶ್ರೀಮಠದಿಂದ ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಶರಣಕುಮಾರ ಯಾಳಗಿ ಹಾಗೂ ಸೋಮನಾಥ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು. ಡಾ ಯಂಕನಗೌಡ ಎಸ್ ಪಾಟೀಲ ನಿರೂಪಿಸಿ ವಂದಿಸಿದರು, ಸಾಹಿತಿ ನಿಂಗನಗೌಡ ದೇಸಾಯಿ, ಅಭಿಷೇಕ್ ಪಾಟೀಲ, ನಿಜಗುಣ ವಿಶ್ವಕರ್ಮ, ಮಾಳಪ್ಪ ಸುಂಕದ, ಅವ್ವಣ್ಣ ಸೇರಿದಂತೆ ಮಹಿಳೆಯರು ಮಕ್ಕಳು ಉಪಸ್ಥಿತರಿದ್ದರು.

# ಇದೇ ದಿನಾಂಕ 7 ರಂದು 9 ಮತ್ತು 11ನೇಯ ತರಗತಿಯ ಪ್ರವೇಶ ಪರೀಕ್ಷೆ.

• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :

ತಾಲೂಕಿನ ಜವಾಹರ್ ನವೋದಯ ವಿದ್ಯಾಲಯದಲ್ಲಿ 9 ಮತ್ತು 11ನೇ ತರಗತಿಯ ಖಾಲಿ ಇರುವ ಸ್ಥಾನಗಳಿಗಾಗಿ (2026-27 ಸಾಲಿನ) ಪ್ರವೇಶ ಪರೀಕ್ಷೆ ದಿನಾಂಕ 07.2.2026 ಶನಿವಾರದಂದು ನಿಗದಿಯಾಗಿದೆ. ಈಗಾಗಲೇ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಅರ್ಜಿ ವಿವರಗಳನ್ನು ಸಲ್ಲಿಸಿ ಪ್ರವೇಶ ಪತ್ರಗಳನ್ನು ಡೌನ್ಲೋಡ್ ಮಾಡಿಕೊಳ್ಳಲು ಸೂಚಿಸಲಾಗಿತ್ತು.

ಈ ಪ್ರವೇಶ ಪರೀಕ್ಷೆಯು ನೂರು ಅಂಕದ 100 ಪ್ರಶ್ನೆಗಳನ್ನು ಹೊಂದಿರುತ್ತದೆ. ಅವೆಲ್ಲವೂ ವಸ್ತುನಿಷ್ಠ ಪ್ರಶ್ನೆಗಳಾಗಿಲಿವೆ. ಪರೀಕ್ಷೆಯ ಅವಧಿ 2.30 ಗಂಟೆಗಳು. ಹಿಂದಿ , ಆಂಗ್ಲ ಭಾಷೆಗಳ ಸಾಮಾನ್ಯ ಜ್ಞಾನ, ಗಣಿತ ಮತ್ತು ಸಾಮಾನ್ಯ ವಿಜ್ಞಾನದ ವಿಷಯವನ್ನಾಧರಿಸಿ ಪ್ರಶ್ನೆಗಳಿರುತ್ತವೆ. ಪರೀಕ್ಷೆಯು ಬೆಳಗ್ಗೆ 11:30 ಗಂಟೆಗೆ ಆರಂಭವಾಗಿ 1.30 ಗಂಟೆಗೆ ಮುಕ್ತಾಯಗೊಳ್ಳುತ್ತದೆ. ಪರೀಕ್ಷಾರ್ಥಿಗಳು 10.30 ಗಂಟೆಗೆ ತಮಗೆ ನಿಗದಿಪಡಿಸಿದ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಲು ಸೂಚಿಸಲಾಗಿದೆ. ಪರೀಕ್ಷೆಗೆ ಬರುವಾಗ ಪ್ರವೇಶ ಪತ್ರ ಹಾಗೂ ಆಧಾರ್ ಕಾರ್ಡಿನ ಜೆರಾಕ್ಸ್ ಪ್ರತಿಯನ್ನು ತರಬೇಕು. ಪರೀಕ್ಷೆಯು ಬಸವಕಲ್ಯಾಣ ತಾಲೂಕಿನ ಮೂರು ಕೇಂದ್ರಗಳಲ್ಲಿ ಮತ್ತು ಬಾಲ್ಕೀಯ ಒಂದು ಕೇಂದ್ರದಲ್ಲಿ ನಡೆಸಲಾಗುತ್ತಿದೆ.

ಅರ್ಜಿ ಸಲ್ಲಿಸಿದ ಎಲ್ಲ ವಿದ್ಯಾರ್ಥಿಗಳು ಈ ಪ್ರವೇಶ ಪರೀಕ್ಷೆಯಲ್ಲಿ ಭಾಗಿಯಾಗಬೇಕೆಂದು ಜವಾಹರ್ ನವೋದಯ ವಿದ್ಯಾಲಯದ ಪ್ರಾಚಾರ್ಯರಾದ ಶ್ರೀಲತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :- ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಶ್ರೀ ಕರಬಸಯ್ಯಸ್ವಾಮಿ ಹಿರೇಮಠ ರವರ ಪುಣ್ಯ ಸ್ಮರಣೋತ್ಸವ ನಿಮಿತ್ಯ ಜರುಗಿದ ಕಲ್ಯಾಣ ಕರ್ನಾಟಕ ಸಂಗೀತ ದಶಮಾನೋತ್ಸವ ಸಮಾರಂಭದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು. ಬಾಗಲಕೋಟೆಯ ವಿಶ್ರಾಂತ ಸಂಗೀತ ಪ್ರಾಧ್ಯಾಪಕರಾದ ಡಾ. ಸಿದ್ರಾಮಯ್ಯ ಸ್ವಾಮೀ ಗೋರ್ಟಾ. ನಾಗಲಿಂಗಯ್ಯ ವಸ್ತ್ರದಮಠ ಆಕಾಶವಾಣಿ ಮತ್ತು ದೂರದರ್ಶನ ಕಲಾವಿದರು, ಬೆಂಗಳೂರು, ರಾಮಯ್ಯ ಸ್ವಾಮಿ ಐನೋಲಿ ಹಿರಿಯ ಸಂಗೀತ ಕಲಾವಿದರು ಹಾಗೂ ರಾಜಕುಮಾರ ಧೂಳಪ್ಪ ಮುಡಬಿ, ಬೆಂಗಳೂರು ಮತ್ತು ಪಂಡಿತ ಜಡೇಶ ಹೂಗಾರ ದೇಸಾಯಿಕಲ್ಲೂರ, ಆಕಾಶವಾಣಿ ಹಾಗೂ ದೂರದರ್ಶನ 'ಎ ಟಾಪ್ ಗ್ರೇಡ್' ಕಲಾವಿದರು ಈ ಐವರು ಮಹನೀಯರಿಗೆ ಕಲ್ಯಾಣ ಕರ್ನಾಟಕ ಸಂಗೀತ ರತ್ನ ಪ್ರಶಸ್ತಿ ಪತ್ರ ಹಾಗೂ ತಲಾ 10 ಸಾವಿರ ರೂಪಾಯಿ ನಗದು ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಉಪ್ಪಿನ ಬೆಟಗೇ-ರಿಯ ಕುಮಾರ್ ವಿರೂಪಾಕ್ಷ ಮಹಾಸ್ವಾಮಿಗಳು. ಪಂಚಾಕ್ಷರಿ ಹಿರೇಮಠ. ಮಲ್ಲಿನಾಥ ಹಿರೇಮಠ. ಅಲ್ಲಮಪ್ರಭು ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಸ್ಪರ್ಶ ಕುಷ್ಠರೋಗ ಅರಿವು ಆಂದೋಲನ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಕುಷ್ಠರೋಗ ನಿರ್ಮೂಲನಾ ವಿಭಾಗ, ಗ್ರಾಮ ಪಂಚಾಯತಿ ಕಾರ್ಯಾಲಯ ಗುಲಸರಮ ವತಿಯಿಂದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಗುಲಸರಮ ನಡೆದ ಡಾ.ಸಂಜೀವ ಕುಮಾರ ರಾಯಚೂರಕರ್ ನೇತೃತ್ವದಲ್ಲಿ

ಸ್ಪರ್ಶ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮವನ್ನು ಘೋಷವಾಕ್ಯವಾದ ತಾರತಮ್ಯವನ್ನು ಕೊನೆಗೂಳಿಸುವುದು, ಘನತೆಯನ್ನು ಕಾಪಾಡುವುದು' ಎಂಬ ಘೋಷವಾಕ್ಯದೊಂದಿಗೆ ಕುಷ್ಠರೋಗವು ಹೇಗೆ ಹರಡುತ್ತದೆ ಅದರ ಲಕ್ಷಣಗಳು ಹೇಗೆ ಕಂಡುಬರುತ್ತವೆ ಎಂಬ ಮಾಹಿತಿಯನ್ನು ಸಂಪೂರ್ಣವಾಗಿದೆ, ಈ ಒಂದು

ಈ ಸಂದರ್ಭದಲ್ಲಿ ಬಸ್ಸಯ್ಯ ಗುತ್ತೇದಾರ, ಆರೋಗ್ಯ ಇಲಾಖೆಯ ಸಿಬ್ಬಂದಿಯಾದ ಸಂತೋಷ ಕುಮಾರ ಹಾಗೂ ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಗಳು, ಕರಾವಸಾಲಿಗರರು ಮತ್ತು ಸದಸ್ಯರು, ಊರಿನ ಮುಖಂಡರು ಮತ್ತು ಶಾಲೆಯ ಮುಖ್ಯಗುರುಗಳಾದ ಚಂದಪ್ಪ ನಾಯ್ಕೋಡಿ ಹಾಗೂ ಸಹ ಸಹಶಿಕ್ಷಕರು ಭಾಗವಹಿಸಿದರು.

# ಸಂಧ್ಕಣಿಗ್ರಾಮದಲ್ಲಿ ನಾಗವರ್ಮರಸನಕಾಲದ ವೀರಗಲ್ಲು ಪತ್ತೆ

ಮಲ್ಲಮ್ಮ ನುಡಿ ವಾರ್ತೆ

ಅಂಕೋಲಾ:



ತಾಲೂಕಿನ ಅಗಸೂರು ಗ್ರಾ. ಪಂ. ವ್ಯಾಪ್ತಿಯ ಸಂಧ್ಕಣಿಗ್ರಾಮದಲ್ಲಿ ಜಿಲ್ಲೆಯ ಇತಿಹಾಸ ಸಂಶೋಧಕ ಶ್ಯಾಮಸುಂದರಗೌಡ, ಮಾರುಗದ್ದೆ ಶಾಲೆಯ ಶಿಕ್ಷಕರಾದ ದಿವಾಕರದೇವನ್ನನೆ, ನೀಲಕಂಠಗೌಡ ಹಾಗೂ ಸ್ಥಳೀಯರಾದ ಕೇಶವ ಭಂಡಾರಿ ಅವರುಗಳು ಕೈಗೊಂಡ ಕ್ಷೇತ್ರಕಾರ್ಯದಲ್ಲಿ ಅಲ್ಲಿನ ನಿರ್ಜನ ಅರಣ್ಯಪ್ರದೇಶದಲ್ಲಿ ಹನ್ನೆರಡನೇ ಶತಮಾನದ ಆರಂಭದ ಅವಧಿಗೆ ಸೇರಿದ ನಾಗವರ್ಮರಸನಕಾಲದ ವೀರಗಲ್ಲೊಂದನ್ನು ಪತ್ತೆ ಮಾಡಿದ್ದಾರೆ.

ಈ ಕುರಿತು ಮಾಧ್ಯಮಗಳಿಗೆ ಶ್ಯಾಮಸುಂದರಗೌಡ ಮಾತನಾಡಿ,- ಸಂಧ್ಕಣಿಯಲ್ಲಿ ದೊರೆತ ವೀರಗಲ್ಲು ಐದು ಅಡಿ ಎತ್ತರವಿದ್ದು 22 ಅಂಗುಲ ಅಗಲವಾಗಿದೆ. ಒಟ್ಟು ಏಳು ಪಟ್ಟಿಕೆಗಳಲ್ಲಿ ಇದನ್ನು ಚಿತ್ರಿಸಲಾಗಿದ್ದು ಇದರಲ್ಲಿ ಯಾವುದೇ ಬರವಣಿಗೆ ಇಲ್ಲ ಇದೊಂದು ಶಾಸನ ರಹಿತ ವೀರಗಲ್ಲಾಗಿದೆ. ನೆಲದ ಕಡೆಯಿಂದ ಮೊದಲನೇ ಪಟ್ಟಿಕೆಯಲ್ಲಿ ಖಡ್ಗಂ ಯುದ್ಧದ ಚಿತ್ರವನ್ನು, ಎರಡನೇ ಪಟ್ಟಿಕೆಯಲ್ಲಿ ತಾಳ, ಜಾಗಟೆ ಮೃದಂಗ ಇತ್ಯಾದಿಗಳನ್ನು ಬಾರಿಸುತ್ತಿರುವ ವಾದ್ಯವೃಂದದವರನ್ನು, ಮೂರನೇ ಪಟ್ಟಿಕೆಯಲ್ಲಿ ಬಿಲ್ಲುಯುದ್ಧದ ಚಿತ್ರವನು ತೋರಿಸಲಾಗಿದೆ.

ನಾಲ್ಕನೇ ಪಟ್ಟಿಕೆಯಲ್ಲಿ ವಾನರ ಮತ್ತು ದಾನವರ ನಡುವೆ ಯುದ್ಧ ನಡೆಯುತ್ತಿರುವಂತೆ ಚಿತ್ರಿಸಲಾಗಿದೆ. ಐದನೆಯ ಪಟ್ಟಿಯ ಅರ್ಧಭಾಗದಲ್ಲಿ ರತಿಕ್ರೀಡಾ ನಿರತ ದಂಪತಿ ಶಿಲ್ಪವನ್ನು ಇನ್ನರ್ಧ ಭಾಗದಲ್ಲಿ ಮಂಟಪ ಒಂದರಲ್ಲಿ ವಾನರ ದಂಪತಿಗಳಿಬ್ಬರು ಶಿವಲಿಂಗಕ್ಕೆ ಅಭಿಷೇಕ ಮಾಡುತ್ತಿರುವಂತೆಂ ಯು ಚಿತ್ರಿಸಲಾಗಿದೆ. ವೀರಗಲ್ಲೊಂದರಲ್ಲಿ ವಾನರರು ಶಿವಲಿಂಗಕ್ಕೆ ಅಭಿಷೇಕ ಮಾಡುವ ಶಿಲ್ಪ ಈ ಹಿಂದೆ ಬೇರೆಲ್ಲಿಯೂ ದೊರೆತ ಉದಾಹರಣೆಗಳಿಲ್ಲ. ಇದೊಂದು ಅಪರೂಪದ ಶಿಲ್ಪವಾಗಿದೆ. ಅದರ ಮೇಲಿನ ಆರನೆಯ ಪಟ್ಟಿಯಲ್ಲಿ ವೀರನೊಬ್ಬ ಕುದುರೆ ಸವಾರರು ಮತ್ತು ಕಾಲಾಳುಗಳೊಂದಿಗೆ ಏಕಕಾಲದಲ್ಲಿ ಹೋರಾಡುತ್ತಿದ್ದು ವೀರನ ಕಾಲ ಕೆಳಗೆ ಒಂದಿಷ್ಟು ಜನ ಸೈನಿಕರು ಸತ್ತು ಬಿದ್ದಂತೆ ಚಿತ್ರಿಸಲಾಗಿದೆ.

ಎಲ್ಲಕ್ಕಿಂತ ಮೇಲಿನ 7ನೇ ಪಟ್ಟಿಕೆಯಲ್ಲಿ ಆನೆಗಳಿಂದ ಅಭಿಷೇಕಗೊಳ್ಳುತ್ತಿರುವ ಲಕ್ಷ್ಮಿಯ ಉಬ್ಬುಚಿತ್ರವಿದೆ. ಅಭಿಷೇಕ ಲಕ್ಷ್ಮೀಯ ಮೇಲ್ಭಾಗದಲ್ಲಿ ಕೀರ್ತಿ ಮುಖವನ್ನು ಚಿತ್ರಿಸಲಾಗಿದೆ. ಮಕರ ಪಟ್ಟಿಕೆಗಳಿಂದ ಅಲಂಕೃತವಾದ ಲಲಾಟದ ಪ್ರಭಾವಳಿಯಲ್ಲಿ ಕದಂಬರ ಲಾಂಛನದ ಮಾದರಿಯ ಸಿಂಹ ಚಿತ್ರವನ್ನು ಚಿತ್ರಿಸಲಾಗಿದ್ದು, ಇದು ಆ ಕಾಲದಲ್ಲಿ ಕದಂಬರ ಆಡಳಿತ ಇಲ್ಲದೇ ಇದ್ದರೂ ಆ ವಂಶಕ್ಕೆ ಸೇರಿದ ಅಧಿಕಾರಿವರ್ಗ ಇಲ್ಲಿತ್ತು ಅನ್ನುವುದನ್ನು ಸೂಚ್ಯವಾಗಿ ತಿಳಿಸುತ್ತದೆ. ಎಂದು ಶ್ಯಾಮಸುಂದರಗೌಡ ವಿವರಿಸಿದರು.

ನಾಗವರ್ಮರಸ ಸಾಮಾನ್ಯ ಶಕ 1070 ರಿಂದ 1113 ರವರೆಗೆ ಸುಮಾರು 43 ವರ್ಷಗಳವರೆಗೆ .ಗೋಕರ್ಣಪುರಾಧೀಶ್ವರ. ಎಂಬಬಿರುದನ್ನು ಧರಿಸಿ ಅಂಕೋಲಾ, ಕುಮಟಾ, ಹೊನ್ನಾವರ, ಸಿದ್ದಾಪುರ ತಾಲೂಕಿನ ಭಾಗಗಳನ್ನು ಅಂದರೆ ಪ್ರಾಚೀನ ಸಂಪೂರ್ಣ ಹೈವೆಐನೂರು ಮತ್ತು ಕೊಂಕಣ ಒಂಭೈನೂರರ ದಕ್ಷಿಣ ಭಾಗಗಳನ್ನು ಆಳಿದ ಒಬ್ಬ ಅರಸ. ಈ ಅರಸನಿಗೆ ಸೇರಿದ 12 ಶಾಸನಗಳು ಈವರೆಗೂ ಲಭ್ಯವಾಗಿವೆ. ಅಂಕೋಲಾ ತಾಲೂಕಿನ ಬಡಗೇರಿ- ಅಲಗೇರಿಯ ಉತ್ತರ ಭಾಗದಲ್ಲಿ ನಾಗವರ್ಮರಸನಿಗೆ ಸೇರಿದ ವೀರಗಲ್ಲೊಂದು ಪತ್ತೆಯಾಗಿರುವುದು ಇದೇ ಮೊದಲನೆಯದಾಗಿದೆ ಎಂದು ಶ್ಯಾಮಸುಂದರಗೌಡ ಮಾಹಿತಿ ನೀಡಿದರು.

# ರಸ್ತೆ ಬದಿ ಆಹಾರಗಳಲ್ಲಿ ನಿಷೇಧಿತ ವಸ್ತು, ಕೃತಕ ಬಣ್ಣ ಬಳಸದಂತೆ ಎಚ್ಚರಿಕೆ ವಹಿಸಿ: ಡಾ.ಸುರೇಶ ಬಿ.ಇಟ್ನಾಳ

ಮಲ್ಲಮ್ಮನುಡಿ ವಾರ್ತೆ

ಕೊಪ್ಪಳ :



ರಸ್ತೆ ಬದಿ ದೊರೆಯುವ ಗೋಬಿ ಮಂಚೂರಿ, ಪಾನಿಪೂರಿ ಮುಂತದಾ ಚಾಟ್ಸ್‌ಗಳಲ್ಲಿ ಕೃತಕ ಬಣ್ಣ ಹಾಗೂ ನಿಷೇಧಿತ ವಸ್ತುಗಳನ್ನು ಬೆರೆಸದಂತೆ ಸರ್ಕಾರ ಆದೇಶಿಸಿದೆ. ಅದರಂತೆ ಸರ್ಕಾರದ ಆದೇಶ ಪಾಲನೆಯಾಗುತ್ತಿರುವ ಬಗ್ಗೆ ಇಲಾಖೆ ಎಚ್ಚರಿಕೆ ವಹಿಸಿ, ಖಾತ್ರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಪ್ರಾಧಿಕಾರದ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅಧ್ಯಕ್ಷರಾದ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಎಲ್ಲ ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ತಯಾರಾಗುವ ಆಹಾರ ಹಾಗೂ ರಸ್ತೆ ಬದಿ ಮಾರಾಟ ಮಾಡುವ ಗೋಬಿ ಮಂಚೂರಿ, ಪಾನಿ ಪೂರಿಯಂತಹ ಚಾಟ್ಸ್, ಫಾಸ್ಟ್ ಫುಡ್‌ಗಳಲ್ಲಿ ಕೃತಕ ಬಣ್ಣಗಳನ್ನು ಹಾಗೂ ಆಹಾರದ ರುಚಿ ಹೆಚ್ಚಿಸುವ ನಿಷೇಧಿತ ವಸ್ತುಗಳನ್ನು ಬಳಸದಂತೆ ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಆದಾಗ್ಯೂ ಕೆಲ ಅಂಗಡಿಗಳಲ್ಲಿ ನಿಷೇಧಿತ ವಸ್ತುಗಳು ಹಾಗೂ ಕೃತಕ ಬಣ್ಣಗಳ ಬಳಕೆ ನಡೆ-ಯುತ್ತಿದೆ. ಇಂತಹ ಹೋಟೆಲ್, ರಸ್ತೆ ಬದಿ ಅಂಗಡಿಗಳನ್ನು ಗುರುತಿಸಿ, ಅದರ ಮಾಲೀಕರ ವಿರುದ್ಧ ಅಗತ್ಯಕ್ರಮ ಕೈಗೊಳ್ಳಿ. ರುಚಿ ಹೆಚ್ಚಿಸುವ ನಿಷೇಧಿತ ವಸ್ತುಗಳು ಆರೋಗ್ಯಕ್ಕೆ ತುಂಬಾ ಹಾನಿಕಾರಕ. ಆದ್ದರಿಂದ ಯಾವುದೇ ಹೋಟೆಲ್, ರಸ್ತೆ ಬದಿ ಅಂಗಡಿಗಳಲ್ಲಿ ಇಂತಹ ನಿಷೇಧಿತ ವಸ್ತುಗಳ ಬಳಕೆ ಮಾಡುತ್ತಿಲ್ಲ ಎಂಬುದನ್ನು ಖಾತ್ರಿಪಡಿಸಿಕೊಂಡು, ಸರ್ಕಾರದ ಆದೇಶದ ಕಟ್ಟುನಿಟ್ಟಿನ ಪಾಲನೆಗೆ ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಪ್ರಾಧಿಕಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲ ವಸತಿ ಶಾಲೆಗಳಲ್ಲಿ, ಅಂಗನವಾಡಿಗಳಲ್ಲಿ ಹಾಗೂ ಶಾಲೆಗಳಲ್ಲಿ ನೀಡುವ ಆಹಾರಗಳಲ್ಲಿ ಬಳಸುವ ದಿನಸಿ ವಸ್ತುಗಳ ಗುಣಮಟ್ಟ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಬೇಕು. ಹಾಗೂ ಆಹಾರ ಸಾಮಗ್ರಿ ಶೇಖರಿಸುವ ಗೋದಾಮುಗಳಲ್ಲಿ ನಿಯಮಾನುಸಾರ ಸ್ವಚ್ಚತೆ ಹಾಗೂ ಸುರಕ್ಷತೆ ನಿರ್ವಹಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಹಳ್ಳಿಗಳಲ್ಲಿ ಹಾಲು ಸಂಗ್ರಹಣಾ ಕೇಂದ್ರಗಳಿಗೆ ಗುಣಮಟ್ಟ ಪರೀಕ್ಷೆಯ ಮಾನದಂಡಗಳನ್ನು ನೀಡಲಾಗಿದೆ. ಆ ಮಾನದಂಡಗಳನ್ವಯ ಗುಣಮಟ್ಟದ ಹಾಲನ್ನು ಮಾತ್ರ ಹಾಲು ಮಾರಾಟಗಾರರಿಂದ ಸಂಗ್ರಹಿಸಬೇಕು.

# CITATION

**IN THE COURT OF THE PRL. CIVIL JUDGE AND JMFC., AT HUMNABAD.**
**CRL. MISC. No.14/2026.**

**Petitioners:**

**1. Shivkant Mallappa Bathgeri S/o Mallappa,** Age : 61-year, Occu : Coolie.

**2. Shanthabayi W/o Mallappa**. Age: 75-year, Occu: House hold. Both R/o Village Duablgundi. Tq. Humnabad.

**3. Gurunath So Mallappa Betgeri.** Age: 65-year, Occu: Agriculture. R/o Degree College Shiva Nagar Humnabad.

**4. Ravindra So Mallappa**. Age : 59-year, Occu : Agriculture. R/o H. No.23/360, Basava Nagar Humnabad.

**5. Nagamma D/o Mallappa W/o Kumar Ekhande.** Age: 56-year, Occu: Household. R/o Jijau Colony Nilanga Latur-MS.

**Respondent:**

The Registrar of Birth and Death through The Tahasildar Humnabad.

**Sub:- Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner No.1, 3 to 5 and Husband of petitioner No.2 by namely LATE. MALLAPPA S/O ROMANNA BETGERI, who was died on 05.03.1992 at Village Dubalgundi. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 02.03.2026 at 11.00 AM in person or any authorized pleader to answer such claim otherwise the matter will be heard and determined in your absence as per law.

**Given under my hand and seal of he court, this the 28-01-2026**
**//By order of the court//**
**Chief Ministerial Officer,**
**Prl. Civil Judge & JMFC Court, Humnabad.**

# ಶರಣರ ಆದರ್ಶಗಳಿಂದ ಜೀವನ ಸಾರ್ಥಕ

## ಅಖಂಡೇಶ್ವರ ಹಿರೇಮಠ.



• ಮಲ್ಲಮ್ಮ ನುಡಿ ವಾರ್ತೆ: ಗುರುಮಠಕಲ್

ಗುರುಮಠಕಲ್, ಫೆಬ್ರುವರಿ 2: ಪಟ್ಟಣದ ಖಾಸಮಠದಲ್ಲಿ ರವಿವಾರ 14ನೇ ಮಾಸಿಕ ಶರಣ ಸಂಗಮ ಕಾರ್ಯಕ್ರಮ ಭಕ್ತಿಭಾವದಿಂದ ರವಿವಾರ ನೆರವೇರಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಅಖಂಡೇಶ್ವರ ಹಿರೇಮಠ ಮಾತನಾಡಿ, "ಬಸವಾದಿ ಶರಣರ ಜೀವನ ಚರಿತ್ರೆ ಹಾಗೂ ಆದರ್ಶಗಳು ಇಂದಿನ ಪೀಳಿಗೆಗೆ ದಾರಿದೀಪವಾಗಿವೆ. ಆದರೆ ಆ ಆದರ್ಶಗಳನ್ನು ಆಚರಣೆಯಲ್ಲಿ ತರುವಲ್ಲಿ ನಾವು ಹಿಂದೆ ಬೀಳುತ್ತಿರುವುದು ವಿಷಾದಕರ ಸಂಗತಿ" ಎಂದು ಹೇಳಿದರು. ಅಂತರಂಗಕ್ಕಿಂತ ಬಹಿರಂಗದ ಶುಚಿತ್ವಕ್ಕೆ ಪ್ರಾಮುಖ್ಯತೆ ನೀಡಿದ ಶಿವಶರಣ ಮಡಿವಾಳ ಮಾಚಯ್ಯ ಹಾಗೂ ವೈರಾಗ್ಯ ನಿಧಿ ನಾಗಭೂಷಣ ಶಿವಯೋಗಿಗಳ ಬಸವ ತತ್ವ ಪ್ರಚಾರ, ಜಂಗಮ ಮತ್ತು ವೈರಾಗ್ಯ ವಿಧಗಳ ಕುರಿತು ಸವಿಸ್ತಾರವಾಗಿ ವಿವರಿಸಿ, "ಕಾಯಕದ ಮೂಲಕ ಶಿವಧ್ಯಾನ ಮಾಡಿ ಜೀವನವನ್ನು ಸಾರ್ಥಕಗೊಳಿಸೋಣ" ಎಂದು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ವೀರಶೈವ ಲಿಂಗಾಯತ ಸಮಾಜದ ನಿಕಟಪೂರ್ವ ಅಧ್ಯಕ್ಷರಾದ ನಾಗಭೂಷಣ ಅವಂಟಿ, ನರಸರೆಡ್ಡಿ ಪೊಲೀಸ್ ಪಾಟೀಲ ಗಡ್ಡೆಸುಗೂರು, ಮಠದ ಕಾರ್ಯದರ್ಶಿ ಮಲ್ಲಯ್ಯ ಸ್ವಾಮಿ ಬೆನಕನಹಳ್ಳಿ, ಧರ್ಮವೀರ ವಾರದ, ವೀರಣ್ಣ ಬೇಲಿ, ಸಿದ್ದಣ್ಣ ಜಾಡರ, ರಾಜೇಂದ್ರ ಕಲಾಲ್, ಮಲ್ಲಿಕಾರ್ಜುನ ಸ್ವಾಮಿ ವಸ್ತ್ರದ, ಜಗದೀಶ್ ಕುಮಾರ್ ಭೂಮಾ ಸೇರಿದಂತೆ ಮಠದ ಭಕ್ತರು ಪಾಲ್ಗೊಂಡಿದ್ದರು.

# ಉತ್ಸವದ ಅದ್ಭುತ ಮಕ್ಕಳ ಹಬ್ಬಕ್ಕೆ ಅದ್ದೂರಿ ಚಾಲನೆ







• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ನಿಮಿತ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಮಹಾನಗರ ಪಾಲಿಕೆಯ ಆಶ್ರಯದದಲ್ಲಿಹಮ್ಮಿಕೊಂಡಿರುವಅದ್ದೂರಿ ಮಕ್ಕಳ ಹಬ್ಬಕ್ಕೆಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಫೆ.2ರಂದು ಚಾಲನೆ ನೀಡಿದರು.ಈ ಹಬ್ಬಕ್ಕಾಗಿ ನಗರದ ಮಹಾತ್ಮಗಾಂಧೀಜಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲೆಯ ಬೇರೆ ಬೇರೆ ಶಾಲೆಯ ಮಕ್ಕಳು ಕಿಕ್ಕಿರಿದು ಸೇರಿದ್ದರು.

ಜಿಲ್ಲಾಧಿಕಾರಿಗಳು ಕಾರ್ಯಕ್ರಮ ಉದ್ಘಾಟಿಸಿಮಾತನಾಡಿ,ಸಾರ್ವಜನಿಕರ ಸಲಹೆ ಮತ್ತು ಮಕ್ಕಳಿಗಾಗಿಯೇ ನಾವು ರಾಯಚೂರು ಉತ್ಸವದಲ್ಲಿ ಮಕ್ಕಳಕಾರ್ಯಕ್ರಮಗಳಿಗೆಏರ್ಪಾಡು ಮಾಡಿದ್ದೇವೆ.ಸಾರ್ವಜನಿಕರ,ಸಂಘ ಸಂಸ್ಥೆಗಳ,ಶಿಕ್ಷಣ ಸಂಸ್ಥೆಗಳ ಸಹಕಾರ, ಪರಿಶ್ರಮದಿಂದ ಈ ಮಕ್ಕಳ ಹಬ್ಬ ನಡೆಯುತ್ತಿದೆ.ಮನರಂಜನೆ ಜೊತೆಗೆ ಜ್ಞಾನಸಂಪಾದನೆಗೆಸಹ ಇಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಮಕ್ಕಳನ್ನು ಕರೆತಂದು ಸಹಕರಿಸಿದ ರಾಯಚೂರು ಜಿಲ್ಲೆಯ ಎಲ್ಲ ಖಾಸಗಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳಿಗೆ ಅಭಿನಂದನೆಗಳ ತಿಳಿಸುವೆ. ಮಕ್ಕಳನ್ನು ಸುರಕ್ಷಿತವಾಗಿ ನೋಡಿಕೊಳ್ಳಬೇಕು ಎಂದು ಎಲ್ಲ ಶಾಲೆಗಳ ಶಿಕ್ಷಕ ಶಿಕ್ಷಕಿಯರಲ್ಲಿ ಮನವಿ ಮಾಡಿವೆ ಎಂದರು.

ಜಿಲ್ಲಾ ಪಂಚಾಯ್ ಸಿಇಓ ಈಶ್ವರ ಕಾಂದೂ ಅವರು ಮಾತನಾಡಿ, ಈ ಮಕ್ಕಳ ಹಬ್ಬವು ಜಿಲ್ಲೆಯಲ್ಲಿ ವಿನೂತನವಾಗಿ ನಡೆಯುತ್ತಿರುವುದು ನಮಗೆ ಸ್ಫೂರ್ತಿ ತಂದಿದೆ ಎಂದು ತಿಳಿಸಿದರು.ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಮಕ್ಕಳು ಈ ಲೋಕದ ಆಸ್ತಿ. ಮಕ್ಕಳನ್ನು ರಂಜಿಸಲು, ಅವರ ಸ್ಮೃತಿಪಟಲದಲ್ಲಿ ಉಳಿಯುವಂತಹ ಕಾರ್ಯಕ್ರಮಕ್ಕೆ ಈ ಮಕ್ಕಳ ಹಬ್ಬ ಆಯೋಜಿಸಲಾಗಿದೆ ಎಂದು ತಿಳಿಸಿದರು.

ರೇಸ್ ಕಾನ್ಸೆಪ್ಟ್ ಶಾಲೆಯ ತನ್ವಿ ನಾಯಕ ಅವರ ಗೀತೆಯ ಮೂಲಕ ಮಕ್ಕಳ ಹಬ್ಬದ ಕಾರ್ಯಕ್ರಮ ಆರಂಭಗೊಂಡಿತು.ಡಿ.ಸಿ., ಸಿಇಓ, ಪಾಲಿಕೆ ಆಯುಕ್ತರಿಂದ ಹಬ್ಬದ ವೀಕ್ಷಣೆ: ಕಾರ್ಯದೊತ್ತಡದ ಮಧ್ಯೆಯೂ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ ಮತ್ತು ಮಹಾ ನಗರ ಪಾಲಿಕೆಯ ಅಧಿಕಾರಿಗಳು ವೇದಿಕೆ ಎದುರುಗಡೆ ಕುಳಿತು ಮಕ್ಕಳ ಕಾರ್ಯಕ್ರಮದ ವೀಕ್ಷಣೆ ನಡೆಸಿದರು. ಕೋಳಿ ನೃತ್ಯಕ್ಕೆ ಕಿರುಚಿದ ಮಕ್ಕಳು: ಖ್ಯಾತ ಕಲಾವಿದ ಅಶೋಕ ಕೊಳಲಿ ಅವರು ಪ್ರಸ್ತುತಪಡಿಸಿದ ಕೋಳಿ ನೃತ್ಯಕ್ಕೆ ಮಕ್ಕಳು ಜೋರಾಗಿ ಕಿರುಚಿ ಸಂತಷ ವ್ಯಕ್ತಪಡಿಸಿದರು.

ಕುದ್ರೋಳಿ ಗಣೇಶರ ಜಾದೂಗೆ ಮರುಳಾದ ಮಕ್ಕಳು: ಸಮಾರಂಭದಲ್ಲಿ ಮಕ್ಕಳು ಮರಳಾಗುವಂತೆ ಮಾಡಿದ್ದು ಕುದ್ರೋಳಿ ಗಣೇಶ ಅವರ ಜಾದೂ. ತಮ್ಮ ಕೈಚಳಕದಿಂದ ಬಗೆಬಗೆಯ ಜಾದೂ ಮಾಡುತ್ತಿದ್ದಂತೆ ಮಕ್ಕಳು ಚಪ್ಪಾಳೆ ತಟ್ಟಿದರು.ಡೊಳ್ಳು ಭಾರಿಸಿದ ಅಪರ ಜಿಲ್ಲಾಧಿಕಾರಿಗಳು: ಮಕ್ಕಳ ಹಬ್ಬದಲ್ಲಿ ಭಾಗಿಯಾಗಿದ್ದ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಡೊಳ್ಳು ಭಾರಿಸಿ ಮಕ್ಕಳ ಸಂತಷದಲ್ಲಿ ಭಾಗಿಯಾದರು.ಸಮಾರಂಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ತಹಸೀಲ್ದಾರ ಸುರೇಶ ವರ್ಮಾ, ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ಅಧ್ಯಕ್ಷರಾದ ಕೇಶವರಾವ್ ರೆಡ್ಡಿ, ಕಾರ್ಯದರ್ಶಿಗಳಾದ ಮುರಳೀಧರ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣಶಾವಂತಗೇರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ ಸೇರಿದಂತೆ ಇತರರ ಇದ್ದರು. ವೈ. ಕೆ.ಯಶೋಧಾ ಅವರು ನಿರೂಪಿಸಿದರು.

# ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮ



• **ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:**

ತಾಲೂಕಿನ ಐದನಾಳ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ ಅವರು ಶಾಲಾ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಉದ್ದೇಶಿಸಿ ಮಾತನಾಡಿ, ಆರಂಭಿಕ ಹಂತದಲ್ಲೇ ಕುಷ್ಠರೋಗ ಲಕ್ಷಣ ಆಧರಿಸಿ ವೈದ್ಯರ ಸಲಹೆ ಸಂಪೂರ್ಣ ಚಿಕಿತ್ಸೆ ಪಡೆದು ರೋಗದಿಂದ ಮುಕ್ತವಾಗಿ ಅಂಗವಿಕಲತೆ ಆಗದಂತೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು.

ಕುಷ್ಠರೋಗದ ಪ್ರಮುಖ ಲಕ್ಷಣಗಳಲ್ಲಿ ಚರ್ಮದ ಮೇಲೆ ಸ್ಪರ್ಶ ವಿರದ ಮಚ್ಚೆ ಅಥವಾ ಕಲೆಗಳಂತೆ ಹೊಳಪಿನ ಚರ್ಮ ಅಲ್ಲದೇ ನರಗಳ ತೊಂದರೆಯಿಂದ ಜೋಮು,ನರಗಳಲ್ಲಿ ಬಾವು,ಶಾಖದ ಅನುಭವ ಆಗದಿರುವುದು ಕಂಡಲ್ಲಿ ಹತ್ತಿರದ ಆರೋಗ್ಯ ಕೇಂದ್ರ ಅಥವಾ ಆಶಾ ಕಾರ್ಯಕರ್ತೆಯರ ಸಲಹೆ ಪಡೆಯಬೇಕು . ಪ್ರಸ್ತುತ ತಾಲೂಕಿನಲ್ಲಿ 13 ಸಕ್ರಿಯ ಪ್ರಕರಣಗಳಿವೆ ಎಂದು ಮಾಹಿತಿ ನೀಡಿ ಮಹಾತ್ಮಗಾಂಧೀಜಿಯವರ ಕುಷ್ಠರೋಗಮುಕ್ತಭಾರತ ಮಾಡಲು ನಾಗರಿಕರ ಸಹಕಾರಕೋರಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಕರಣಕುಮಾರ.ಶಿಕ್ಷಕರಾದ ಸುಜಾತಾ.ಜಯಶ್ರೀ. ದ್ರಾಕ್ಷಿಯಣಿ,ಸುಲೋಚನಾ,ಶಿವರಾಜ, ಬಸಲಿಂಗಪ್ಪ. ಕಾರ್ಯಕರ್ತೆ ಉಮಾ.ಸಾವಿತ್ರಿ,ನಿರ್ಮಲಾ ಹಾಜರಿದ್ದರು.

# ಧ್ವನಿ ಬೆಳಕು ಕಾರ್ಯಕ್ರಮಕ್ಕೆ ಫೆ.4 ರಂದು ಕಲಾವಿದರ ಆಯ್ಕೆ

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ)**

ಕೇಂದ್ರ ಸಂವಹನ ಇಲಾಖೆಯ ಸಂಗೀತ ಮತ್ತು ನಾಟಕ ವಿಭಾಗ, ಪ್ರವಾಸೋದ್ಯಮ ಇಲಾಖೆ, ಕನ್ನಡ ಮತ್ತುಸಂಸ್ಕೃತಿ ಇಲಾಖೆ,ಭಾರತೀಯ ಪುರಾತತ್ವಸರ್ವೇಕ್ಷಣಾಲಯ,ಹಂಪಿ ಹಾಗೂಜಿಲ್ಲಾಡಳಿತದಸಹಯೋಗದಲ್ಲಿ ಹಂಪಿ ಉತ್ಸವ–2026 ರ ನಿಮಿತ್ತ "ವಿಜಯನಗರವೈಭವ"ಬೃಹತ್‌ಧ್ವನಿ ಮತ್ತುಬೆಳಕು. ಕಾರ್ಯಕ್ರಮವನ್ನು ಹಂಪಿಯಆನೆಲಾಯದಆವರಣದಲ್ಲಿ ಫೆ.13 ರಿಂದ 19 ರ ವರೆಗೆ ಆಯೋಜಿಸಲಾಗಿದೆ.

ಧ್ವನಿ ಮತ್ತು ಬೆಳಕು ಕಾರ್ಯಕ್ರಮ ಆಯೋಜಿಸುವ ನಿಟ್ಟಿನಲ್ಲಿ ಫೆ.04 ರಂದು ಬೆಳ್ಳಿಗೆ 10 ಗಂಟೆಗೆ ನಗರದ ಸಂಡೂರು ರಸ್ತೆಯಲ್ಲಿನ ನೌಕರರ ಭವನದಲ್ಲಿ ಕಲಾವಿದರ ಆಯ್ಕೆ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದೆ. ಆಸಕ್ತ ಕಲಾವಿದರು ಮತ್ತು ಭರತ ನಾಟ್ಯ ಪರಿಣಿತರು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು 2 ಸ್ಟ್ಯಾಂಪ್ ಸೈಜ್ ಭಾವಚಿತ್ರ, ಆಧಾರ ಕಾರ್ಡ ಅಥವಾ ಓಟರ್ ಐ.ಡಿ, ಗೆಜೆಟೆಡ್ ಅಧಿಕಾರಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ, ಈ ಹಿಂದೆ ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ದಾಖಲಾತಿ, ಸರ್ಕಾರಿಮತ್ತುಅನುದಾನಿತಸಂಸ್ಥೆಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ನೌಕರರು ತಮ್ಮನೇಮಕಾತಿ ಪ್ರಾಧಿಕಾರದಿಂದ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ ಸ್ಪಷ್ಟವಾದ ಅನುಮತಿ ಪತ್ರ ಹಾಗೂ ಜಿಲ್ಲಾಧಿಕಾರಿಗಳಿಂದ ಪತ್ರಕ್ಕೆ ಅನುಮೋದನೆ ಪಡೆದು ಆಯ್ಕೆ ಪ್ರಕ್ರಿಯೆಯಲ್ಲಿಭಾಗವಹಿಸಬಹುದಾಗಿದೆ.

ಆಯ್ಕೆಯಾದ ಕಲಾವಿದರು 7 ದಿನಗಳ ಕಾಲ ಪೂರ್ವ ಸಿದ್ದತಾ ತರಬೇತಿಯಲ್ಲಿ ಗೈರು ಹಾಜರಾತಿ ಇಲ್ಲದೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

# ಸಾವಯವ ಕೃಷಿಯಿಂದ ರೈತರ ಆರ್ಥಿಕ ಅಭಿವೃದ್ಧಿ ಸಾಧ್ಯವಿದೆ:ಶರಣಪ್ಪ ಹಿರೇ ಉಪ್ಪೇರಿ




• **ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರ :**

ಸಾವಯವ ಕೃಷಿಯಿಂದ ರೈತರ ಆರ್ಥಿಕಅಭಿವೃದ್ಧಿ ಸಾಧ್ಯವಿದೆ ಎಂದು ಹಿರಿಯ ಕೃಷಿ ವಿಜ್ಞಾನಿ ಶರಣಪ್ಪ ಹಿರೇ ಉಪ್ಪೇರಿ ಹೇಳಿದರು.

ತಾಲುಕಿನ ಈಚನಾಳ ಗ್ರಾಮದಲ್ಲಿ ನಡೆದ ಜಿಲ್ಲಾ ಪಂಚಾಯತ ಹಾಗೂ ಕೃಷಿ ಇಲಾಖೆ ರಾಯಚೂರು ,20256–26 ನೇ ಸಾಲಿನ ರಾಷ್ಟ್ರೀಯ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆಯಡಿ ಕ್ಷೇತ್ರೋತ್ಸವ ಕಾರ್ಯಕ್ರಮವನ್ನ ಉದ್ದೇಶಿಸಿ ಮಾತನಾಡಿದ ಅವರು ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಬದಲು ಎರೆ ಹುಳು ಗೊಬ್ಬರ, ತಿಪ್ಪೆಗೊಬ್ಬರ,ಕುರಿ ಗೊಬ್ಬರ,ಬೇವಿನ ಎಣ್ಣೆ,ಪಂಚಗವ್ಯ,ಜೀವಾಮೃತಗಳನ್ನು ಬಳಸಿ ಸಾವಯವ ಕೃಷಿ ಕೈಗೊಂಡಲ್ಲಿ ರೈತರು ಕಡಿಮೆ ಖರ್ಚಿನಲ್ಲಿ ಅಧಿಕ ಇಳುವರಿ ಪಡೆಯಬಹುದು.

ಎಣ್ಣೆ ಬೆಳೆಗಳಿಗೆ ರೈತರು ಹೆಚ್ಚಿನ ಆದ್ಯತೆ ನೀಡಿ ಸರ್ಕಾರದಿಂದ ಹಲವು ಸೌಲಭ್ಯಗಳ ಪಡೆದು ರೈತರೇ ಸ್ವತಃ ಎಣ್ಣೆ ಗಾಣದ ಮೂಲಕ ಎಣ್ಣೆ ಉತ್ಪಾದನೆ ಮಾಡಿ ಆಹಾರಕ್ಕೆ ಬಳಕೆ ಮಾಡಲು ಮುಂದಾಗಬೇಕು, ಜೊತೆಗೆ ಆಹಾರ ಸೇವನೆ ಯಲ್ಲಿ ಸಕ್ಕರೆ,ಬಿಳಿ ಅಕ್ಕಿ ಬದಲು,ಬೆಲ್ಲ, ಕೆಂಪು ಅಕ್ಕಿಯ ಬಳಕೆ ಆರೋಗ್ಯ ಕ್ಕೆ ಸೂಕ್ತ ಎಂದು ಸಲಹೆ ನೀಡಿದರು.ಈ ಕಾರ್ಯಕ್ರಮವನ್ನು ಉದ್ದೇಶಿಸಿ ಕೃಷಿ ಅಧಿಕಾರಿ ಸತೀಶ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ತಾ.ಪಂ. ಎನ್.ಆರ್.ಎಲ್.ಎಂ. ಬಸವರಾಜ ಕಟ್ಟಿಮನಿ, ಗ್ರಾಮಸ್ಥರಾದ ಮುದುಕಪ್ಪ ಗೌಡ ಮೂಲಿಮನಿ, ಸಿದ್ದಲಿಂಗಪ್ಪ ರಕ್ಕಸಗಿ,ನಾಗಪ್ಪಚಿತ್ತವಾಡಗಿ, ಭೀಮಣ್ಣ ಕುಂಬಾರ,ಕುಪ್ಪಣ್ಣ ಹಳ್ಳಿ, ಲಿಂಗಪ್ಪ ಪೂಜಾರಿ,ಯಂಕಣ್ಣಗಡ್ಡಿ,ದೊಸಿಗದ್ದೆಪ್ಪ, ಸಂಜೀವಿನಿ ಮಹಿಳಾ ಒಕ್ಕೂಟದ ಬಸಮ್ಮ,ಜ್ಯೋತಿ,ಗದ್ದೆಮ್ಮ,ಅಂಬಿಕಾ, ಸೇರಿದಂತೆ ಇತರರಿದ್ದರು.

# ಮಾಚಿದೇವ ಜನರ ಮನಸ್ಸಿನ ಕೊಳೆಯನ್ನು ತೊಳೆದಿದ್ದಾರೆ:ಎಂ ಪ್ರತಿಭಾ




• **ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು:**

ತಾಲೂಕು ಕಛೇರಿಯ ಮಹಾತ್ಮ ಗಾಂಧೀಜಿಸಭಾಂಗಣದಲ್ಲಿತಾಲೂಕಿನ ಮಡಿವಾಳ ಸಮಾಜದವರ ಮನವಿ ಮೇರೆಗೆ ಇಂದು ಶರಣ "ಮಡಿವಾಳ ಮಾಚಿದೇವರ ಜಯಂತಿ" ಕಾರ್ಯಕ್ರಮವನ್ನು ಆಚರಿಸಲಾಯಿತು. ಮಾಚಿದೇವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ಗ್ರೇಡ್–2 ತಹಶೀಲ್ದಾರರಾದ ಎಂ ಪ್ರತಿಭಾ ಇವರು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದ ನಂತರ 12 ನೇ ಶತಮಾದಲ್ಲಿದ್ದ ವಚನಕಾರರಲ್ಲಿ ಮಡಿವಾಳ ಮಾಚಿದೇವರು ಸಹಾ ಒಬ್ಬ ಪ್ರಮುಖರು. ವೃತ್ತಿಯಲ್ಲಿ ಮಡಿವಾಳ ಇವರು ಬಟ್ಟೆಯ ಶುದ್ದತೆಗಿಂತ ಮನಸ್ಸಿನ ಶುದ್ದತೆಯೇ ಮುಖ್ಯ. ಅವರ ವಚನಗಳು ಇಂದಿಗೂ ಶೋಷಿತ ವರ್ಗಗಳಿಗೆ ಮತ್ತು ಸಮಾನತೆಯ ಕನಸು ಕಾಣುವ ಎಲ್ಲರಿಗೂ ಪ್ರೇರಣೆ–ಯಾಗಿದೆ. ಕಲ್ಯಾಣ ಕ್ರಾಂತಿಯ ನಂತರ ವಚನಗಳನ್ನು ಸಂರಕ್ಷಿಸುವಲ್ಲಿ ಇವರ ಪಾತ್ರ ಮಹತ್ವವಾಗಿದೆ. ಇವರು ಬರೀ ಶರಣರ ಬಟ್ಟೆಗಳನ್ನು ಮಾತ್ರ ತೊಳೆಯಲಿಲ್ಲ. ಸಮಾಜದ ಜನರಲ್ಲಿನ ಮನಸ್ಸಿನ ಕೊಳೆಯನ್ನು ಸಹಾ ತಮ್ಮ ವಚನಗಳ ಮೂಲಕ ತೊಳೆದಿದ್ದಾರೆ. ಹೀಗೆ ಅವರು ಮನುಕುಲಕ್ಕೆ ನೀಡಿದ ಸಂತೇಶಗಳನ್ನು ಅರಿತು ನಡೆದರೆ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದರು,

ಕಾರ್ಯಕ್ರಮದಲ್ಲಿ ತಾಲೂಕು ಮಡಿವಾಳ ಸಮಾಜದ ಅಧ್ಯಕ್ಷ ಭೀಮಪ್ಪ, ಮುಖಂಡರಾದ ಗುರುಬಸವರಾಜ, ಸುರೇಶ, ಸಿದ್ದಪ್ಪ, ನಾಗಪ್ಪ, ಬಸವರಾಜ, ಪ್ರಕಾಶ, ಎಂ ಗುರುಬಸವರಾಜ, ಶಂಕರ, ಶಿರಸ್ತೇದಾರ್ ಕೊಟ್ರಮ್ಮ, ಚಂದ್ರನಾಯ್ಕ, ಕಂದಾಯ ನಿರೀಕ್ಷಕ ಹರೀಶ್, ಸಿಬ್ಬಂದಿಯಾದ ಮಂಜುನಾಥ, ಗೌರಮ್ಮ ಹಾಗೂ ಇತರರು ಇದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿ ನಿರ್ವಹಿಸಿದರು.

# ಅಧಿಕಾರ ಬೇಡ ಎಂದು ಹೇಳಿದ ಏಕೈಕ ವ್ಯಕ್ತಿ ಎಚ್ ಪಿ ಮಂಜಣ್ಣ: ರಾಮಪ್ರಸಾದ್



• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು:**

ಕಾಂಗ್ರೆಸ್ ಸರ್ಕಾರದಲ್ಲಿ ಮೀಸಲಿಟ್ಟಿದ ಸ್ಥಾನವನ್ನೇ ತ್ಯಾಗ ಮಾಡಿದ ಮಾಜಿ ಶಾಸಕ ಎಚ್ ಪಿ ಮಂಜಣ್ಣ ರವರ ಬೆಂಬಲದಿಂದ ನನಗೆ ನಮ್ಮ ರಾಜ್ಯದ ನಿಗಮ ಮಂಡಳಿಗೆ ಸಮುದಾಯದಲ್ಲಿ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದ ತಾರೆ ಏಕೈಕ ವ್ಯಕ್ತಿ ಎಂದು ಕರ್ನಾಟಕ ರಾಜ್ಯ ಆರ್ಯವೈಶ್ಯ ಅಭಿವೃದ್ಧಿ ನಿಗಮ. ಮಂಡಳಿ ಅಧ್ಯಕ್ಷರಾದ ಕೆ ವಿ ರಾಮಪ್ರಸಾದ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ

ನಗರದ ಸಾಯಿಬಾಬಾ ಮಂದಿರಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ನಂತರ ಸುದ್ದಿಗಾರೊಂದಿಗೆ ಮಾತನಾಡಿ ಸರ್ಕಾರದಲ್ಲಿ ಮೀಸಲಿಟ್ಟ ಸ್ಥಾನವನ್ನೇ ಕಲ್ಪಿಸಿಕೊಟ್ಟ ಏಕೈಕ ವ್ಯಕ್ತಿ ಮಂಜಣ್ಣ ರವರನ್ನು ನಾನು ಎಂದೆಂದಿಗೂ ಮರೆಯಲಾರೆ ಸರ್ಕಾರದಲ್ಲಿ ಅಧಿಕಾರ ಸಿಗುತ್ತೆ ಅಂ–ದರೆ ಯಾರು ಕೂಡ ಬಿಡಕ್ಕೆ ತಯಾರಿಲ್ಲ ಆದರೂ ಕೂಡ ನನ್ನನ್ನು ಗುರುತಿಸಿ ಈ ಸ್ಥಾನಕ್ಕೆ ಕಲ್ಪಿಸಿಕೊಟ್ಟ ಅವರಿಗೆ ನಾನು ಚಿರಋಣಿಯಾಗಿರುತ್ತೇನೆ ಮುಂದಿನ ದಿನಗಳಲ್ಲಿ ನಾವೆಲ್ಲ ಸೇರಿ ಸಮುದಾಯದ ಕೆಲಸಗಳ ಕಾರ್ಯಗಳನ್ನು ಒಗ್ಗಟ್ಟಾಗಿ ಅಭಿವೃದ್ಧಿ ಪಡಿಸೋಣ ಎಂದರು

ಮಾಜಿ ಶಾಸಕ ಎಚ್ ಪಿ ಮಂಜಣ್ಣ ರವರಿಗೆ ವಿಶೇಷವಾಗಿ ಸರ್ಕಾರ ಮಟ್ಟದಲ್ಲಿ ನಿಗಮದ ಸ್ಥಾನಕ್ಕೆ ಮೀಸಲಿಟ್ಟಿದ್ದ ಸ್ಥಾನವನ್ನೇ ನನಗೆ ಅವಶ್ಯಕತೆ ಇಲ್ಲ ಅಂತ ಹೇಳಿ ಇನ್ನಿತರಿಗೆ ನಮ್ಮ ಸಮುದಾಯದಲ್ಲಿ ಅವಕಾಶ ಮಾಡಿಕೊಡ ಮಾಡಿಕೊಟ್ಟಿದ್ದಾರೆ ಹಾಗೂತಾಲೂಕಿನ ಜನತೆ ನನಗೆ ಮತ್ತೊಮ್ಮೆ ನನ್ನನ್ನು ಆಯ್ಕೆ ಮಾಡಿ ಕಳಿಸುತ್ತಾರೆ. ಅದರಿಂದ ನನಗೆ ಯಾವ ಅಧಿಕಾರ ಬೇಡ ಎಂದು ಹೇಳಿದ ಏಕೈಕ ವ್ಯಕ್ತಿ ಅಂದರೆ ಎಚ್ ಪಿ ಮಂಜಣ್ಣ ಅಂತ ಹೇಳಿದರು

ನಮ್ಮ ಮಂಜಣ್ಣ ಶಾಸಕರಾಗಿದ್ದರು ಆದರೂ ಕೂಡ ಈಗಲೂ ಕೂಡ ಅವರು ಶಾಸಕರಾಗಿ ಇರಬೇಕು ಹಾಗೂ ಎಲ್ಲಾ ಸಮುದಾಯಗಳ ಒಗ್ಗೂಡಿ ತಾಲೂಕಿನ ಅಭಿವೃದ್ಧಿ ಕಾರ್ಯಗಳು ಮಾಡಿ ರಾಜ್ಯಮಟ್ಟದಲ್ಲಿ ರಾಜ್ಯಮಟ್ಟದಲ್ಲಿ ಹೆಸರು ಮಾಡಿರುವ ನಮ್ಮ ಸಮುದಾಯದಲ್ಲಿ ನಮ್ಮ ಮಂಜಣ್ಣ ಎಂದು ಹೇಳಿದರು

ಆರ್ಯವೈಶ್ಯ ರಾಜ್ಯ ನಿಗಮ ಮಂಡಳಿಯ ಅಧ್ಯಕ್ಷರಾದ ಕೆ ವಿ ರಾಮಪ್ರಸಾದ್ ರವರನ್ನು ಆರ್ಯವೈಶ್ಯ ಸಮುದಾಯದ ಮುಖಂಡರ ವತಿಯಿಂದ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು

ಈ ಸಂದರ್ಭದಲ್ಲಿ ರಾಜ್ಯ ಮಹಾಸಭಾ ಅಧ್ಯಕ್ಷರಾದ ರವಿಶಂಕರ್ ಜಿಲ್ಲಾ ಸಹಕಾರಿ ಬ್ಯಾಂಕಿನ ಮಾಜಿ ನಿರ್ದೇಶಕರು ನಾಗಪ್ರಸಾದ್ ವಸಂಬ ಸಹಕಾರ ಸಂಘದ ಅಧ್ಯಕ್ಷರಾದ ರಾಜೇಶ್ವರಿ ಸದಸ್ಯರು ಸುನೀತ್ ಕಾರ್ಯದರ್ಶಿಯಾದ ಅಜಯ್ ಗುಪ್ತ ಹಾಗೂ ಇನ್ನಿತರ ಹಾಜರಿದ್ದರು

# ಸೂಪರ್ ಸೀಡ್ ಗೆ ಇಬ್ರಾಹಿಂ ಬಾಬು ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಇಲ್ಲಿನ ಮಹಾನಗರ ಪಾಲಿಕೆ ಕಳೆದ 9 ತಿಂಗಳಿಂದ ಸಾಮಾನ್ಯ ಸಭೆಯನ್ನೇ ನಡೆಸಿಲ್ಲ, ತನ್ನ ಕರ್ತವ್ಯವನ್ನು ಮರೆತ ಈ ಪಾಲಿಕೆಯನ್ನು ಸರ್ಕಾರ ಕೂಡಲೇ ಸೂಪರ್ ಸೀಡ್ ಮಾಡಬೇಕು ಎಂದು ಪಾಲಿಕೆ ಸದಸ್ಯ ಸಿ.ಇಬ್ರಾಹಿಂ ಬಾಬು ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು. ಯಾವುದೇ ಪಾಲಿಕೆ 6 ತಿಂಗಳಲ್ಲಿ ಸಾಮಾನ್ಯ ಸಭೆ ನಡೆಸದೇ ಹೋದರೆ, ಅಂತಹ ಪಾಲಿಕೆಯನ್ನು ಸೂಪರ್ ಸೀಡ್ ಮಾಡಲು ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ ಕಾಯ್ದೆ–1976ರ ಕಾಯ್ದೆ ಅಡಿ ಸರ್ಕಾರಕ್ಕೆ ಅಧಿಕಾರವಿದೆ. ಜನರ ಹಿತ ಮರೆತಿರುವ ಪಾಲಿಕೆಯ ಆಡಳಿತವನ್ನು ಸರ್ಕಾರ ಸೂಪರ್ ಸೀಡ್ ಮಾಡಿ, ಹೊಸ ಆಡಳಿತಕ್ಕೆ ಚುನಾವಣೆ ನಡೆಸಲು ಅವಕಾಶ ಮಾಡಿಕೊಡಬೇಕು.



2025–26ರ ಬಜೆಟ್ ಮಂಡನೆ ವೇಳೆ ನಡೆದ ಸಾಮಾನ್ಯಸಭೆಯೇಕೊನೆ. ಅಲ್ಲಿಂದ ಇಲ್ಲಿಯವರೆಗೆ ಯಾವುದೇ ಸಾಮಾನ್ಯ ಸಭೆಗಳು ಪಾಲಿಕೆಯಲ್ಲಿ ನಡೆದಿಲ್ಲ.ಹೀಗಾಗಿ ಇದು ಕೇವಲ ಅಧಿಕಾರಿಗಳ ಆಡಳಿತವಿರುವಪಾಲಿಕೆಯೋ ಅಥವಾ ಚುನಾಯಿತ ಜನಪ್ರತಿನಿಧಿಗಳುಇದ್ದಾ–ರೋ ಇಲ್ಲವೋ ಎಂಬ ಪ್ರಶ್ನೆ ಎದುರಾಗಿದೆ.

ಸಾಮಾನ್ಯ ಸಭೆ ನಡೆಸದೇ, ನಗರದ ಸಮಸ್ಯೆಗಳ ಕುರಿತು ಚರ್ಚೆ ಮಾಡದೇ, ಪಾಲಿಕೆಯನ್ನು ಹೀಗೆ ನಡೆಸಿದರೆ ಚುನಾಯಿತ ಕಾರ್ಪೊರೇಟರ್‌ಗಳು ತಮ್ಮ ವಾರ್ಡ್‌ಗಳನಾಗರಿಕರಸಮಸ್ಯೆಗಳ ಪರಿಹಾರಕ್ಕೆ ಏನು ಉತ್ತರ ನೀಡಬೇಕು ಎಂಬುದೇ ತಿಳಿಯದಾಗಿದೆ.

ಜನರಿಗೆ ಅನುಕೂಲವಾಗಲಿ ಎಂದೇ ಸ್ಥಳೀಯ ಸಂಸ್ಥೆಗಳನ್ನು ಸಂವಿಧಾನದ ಆಶಯದಂತೆ ರಚಿಸಿದೆ. ಆದರೆ ಬಳ್ಳಾರಿಯಲ್ಲಿ ಸಂವಿಧಾನದ ಆಶಯಗಳಿಗೇ ಧಕ್ಕೆಯಾಗಿದೆ. ಚುನಾಯಿತ ಪ್ರತಿನಿಧಿಗಳಿದ್ದು, ಜನರ ಸಮಸ್ಯೆ ಚರ್ಚಿಸಲು ಒಂದು ಕಡೆ ಸಭೆ ಸೇರಿಸಲೂ ಆಗದ ಈ ಪರಿಸ್ಥಿತಿಯು ಜನ ವಿರೋಧಿ, ಅಷ್ಟೇ ಅಲ್ಲ, ಇದು ಪ್ರಜಾಪ್ರಭುತ್ವದ ಕಗ್ಗೊಲೆಯೂ ಹೌದು,

ಬಳ್ಳಾರಿ ಮಹಾನಗರ ಪಾಲಿಕೆ ಜನರ ಬಗ್ಗೆ ಇಷ್ಟು ನಿರ್ಲಕ್ಷ್ಯ ತಾಳಲು, ಬಳ್ಳಾರಿ ನಗರದ ಶಾಸಕ ನಾರಾ ಭರತ್ ರೆಡ್ಡಿ ಮತ್ತು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ನಾಗೇಂದ್ರ ಅವರ ನಿರ್ಲಕ್ಷ್ಯವೂ ಎದ್ದು ಕಾಣುತ್ತಿದೆ.

ಬಳ್ಳಾರಿ ನಗರ ಪಾಲಿಕೆಯ ಈಗಿನ ಸ್ಥಿತಿಯನ್ನು ಗಮನಿಸುತ್ತಿದ್ದರೆ 'ಮನೆಯೊಳಗೆ ಮನೆಯೊಡೆಯನಿದ್ದಾನೋ ಇಲ್ಲವೋ' ಎಂಬ ಬಸವಣ್ಣನರವರ ವಚನವೊಂದು ನೆನಪಾಗುತ್ತಿದೆ. ಬಳ್ಳಾರಿ ಮಹಾನಗರ ಪಾಲಿಕೆಯನ್ನು ಹೇಳುವವರು ಕೇಳುವವರು ಇಲ್ಲ ಎಂಬಂತಾಗಿದೆ.

ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಸ್ಥಾನ ಒಲಿದಿದ್ದೇ ಬಳ್ಳಾರಿಯ ಕಾರಣಕ್ಕೆ ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರ. ಅವರಿಗೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಿಗೆ, ನಗರಾಭಿವೃದ್ಧಿ ಸಚಿವರಿಗೆ ಇಲ್ಲಿನ ಪಾಲಿಕೆ ಮತ್ತು ಆಡಳಿತದ ರೀತಿ ತಿಳಿಯದೇ ಇರುವುದು ಅಚ್ಚರಿಯ ಸಂಗತಿ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಕೂಡಲೇ ಇಲ್ಲಿನ ಆಡಳಿತಕ್ಕೆ ಚಾಟಿ ಬೀಸಿ ಸರಿದಾರಿಗೆ ತರಬೇಕು.

ಇಲ್ಲವೇ ಸೂಪರ್ ಸೀಡ್ ಮಾಡಿ ಹೊಸ ಆಡಳಿತ ಬರುವಂತೆ ಮಾಡಬೇಕು ಎಂದಿದ್ದಾರೆ.

# ಕೂಲಿಕಾರರೊಂದಿಗೆ ನರೇಗಾ ದಿವಸ ಆಚರಣೆ ಕೇಕ್ ಕತ್ತರಿಸಿ ಸಂಭ್ರಮ




• **ಮಲ್ಲಮ್ಮ ನುಡಿ ವಾರ್ತೆ ಮಸ್ಕಿ :**

ತಾಲೂಕಿನ ಕೊಳಬಾಳ ಗ್ರಾಮದ ತುಂಗಭದ್ರಾ ಎಡದಂಡೆ ನಾಲೆ ಹೂಳು ಎತ್ತುವ ಕಾಮಗಾರಿ ಸ್ಥಳದಲ್ಲಿ ಸೋಮವಾರ ನರೇಗಾ ದಿವಸ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಸ್ಕಿ ತಾಪಂ ಸಹಾಯಕ ನಿರ್ದೇಶಕರಾದ (ಗ್ರಾ.ಉ) ಶಿವಾನಂದರಡ್ಡಿ ಮಾತನಾಡಿ, ಗ್ರಾಮೀಣ ಜನರ ಗುಳೆ ತಡೆಯುವಲ್ಲಿ ನಿರ್ಣಾಯಕವಾಗಿರುವ ನರೇಗಾ ಯೋಜನೆ ಫೆ.2 2006 ರಂದು ಜಾರಿಗೆ ಬಂದಿದ್ದು, ಸಮಾನ ಕೆಲಸಕ್ಕೆ ಸಮಾನ ವೇತನ ತತ್ವದಡಿ ಸರ್ವರನ್ನೂ ಸಮನಾಗಿ ಕಾಣುತ್ತಿದೆ. ಈ ಯೋಜನೆ ಜಾರಿ ನಂತರ ಗ್ರಾಮೀಣ ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಕುಟುಂಬದ ಖರ್ಚು ವೆಚ್ಚಗಳನ್ನು ನಿರ್ವಹಿಸುತ್ತಿದ್ದಾರೆ. ಜಲ ಮೂಲಗಳ ಸಂರಕ್ಷಣೆಯಲ್ಲಿಯೂ ನರೇಗಾ ಯೋಜನೆ ಮಹತ್ವದ್ದಾಗಿದೆ. ಕಾಲುವೆ ಹೂಳು ತೆರವುಗೊಳಿಸುವುದರಿಂದ ರೈತರ ಜಮೀನುಗಳಿಗೆ ನೀರು ಸರಾಗವಾಗಿ ಹರಿಯಲಿದೆ. ಕೂಲಿಕಾರರು ಆಳತೆ ಪ್ರಕಾರ ಕೆಲಸ ನಿರ್ವಹಿಸಿದಾಗ ಸಂಪೂರ್ಣ ಕೂಲಿ ಪಾವತಿಗೆ ಅನುಕೂಲವಾಗಲಿದೆ. ಸರ್ಕಾರದ ಆದೇಶದಂತೆ ಎಂಎಸ್ ತಂತ್ರಾಂಶದಲ್ಲಿ ಎರಡು ಬಾರಿ ಹಾಜರಾತಿ ದಾಖಲಿಸಬೇಕು. ಹಿರಿಯ ನಾಗರಿಕರು, ವಿಶೇಷ ಚೇತನರು, ಗರ್ಭಿಣಿಯರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯಿತಿಯಿದ್ದು, ಸದ್ಬಳಕೆ ಮಾಡಿಕೊಳ್ಳಬೇಕು. ನರೇಗಾದಡಿ ಸರ್ಕಾರಿ ಶಾಲೆಗಳಲ್ಲಿ ಹೈಟೆಕ್ ಶೌಚಾಲಯ, ಕಂಪೌಂಡ್, ಅಡುಗೆ ಕೋಣೆ, ಅಂಗನವಾಡಿ ಕೇಂದ್ರ ನಿರ್ಮಿಸಿ ಶಾಲೆ ಶಿಕ್ಷಕರು, ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲಾಗುತ್ತಿದೆ. ಹಳ್ಳಿಗಳಲ್ಲಿ ಸಿಸಿ ರಸ್ತೆ, ಮೆಟ್ಲಿಂಗ್ ರಸ್ತೆ, ಹಳ್ಳಗಳಿಗೆ ಕಿರು ಸೇತುವೆ ನಿರ್ಮಿಸಿ, ರೈತರ ಸಂಚಾರ, ಕೃಷಿ ಉತ್ಪನ್ನಗಳ ಸಾಗಣೆಗೆ ಅನುಕೂಲ ಮಾಡಿಕೊಡಲಾಗಿದೆ ಎಂದರು.

ಮಸ್ಕಿ ತಾಪಂ ನರೇಗಾ ತಾಂತ್ರಿಕ ಸಂಯೋಜ–ಕರಾದ ಅಶೋಕ್ ಮಾತನಾಡಿದರು. ಹಿರಿಯ ಮಹಿಳಾ ಕೂಲಿಕಾರರು ಕೇಕ್ ಕತ್ತರಿಸುವ ಮೂಲಕ ಸಂಭ್ರಮಿಸಿದರು. ಈ ವೇಳೆ ಮಸ್ಕಿ ತಾಪಂ ಐಇಸಿ ಸಂಯೋಜಕರಾದ ಸತೀಶ್, ಬಿಎಫ್ಟಿ ಅನಂತ್, ಮೇಟಿಗಳು ಉಪಸ್ಥಿತರಿದ್ದರು.

# ಮಗುವಿನ ಚಿಕಿತ್ಸೆಗೆ ಎಂ.ಜಿ. ಕನಕ ನೆರವು



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಥಲಸ್ಸೆಮಿಯಾ ಕಾಯಿಲೆಯಿಂದ ಬಳಲುತ್ತಿರುವ ಇಲ್ಲಿನ ಗುಡಾರ ನಗರದ ಐದು ವರ್ಷದ ಪುಷ್ಪಾ ಎಂಬ ಮಗುವಿನ ಚಿಕಿತ್ಸೆಗೆ ಧ್ರುವ ಆಸರೆ ಫೌಂಡೇಶನ್ ಅಧ್ಯಕ್ಷ ಎಂ.ಜಿ ಕನ ಹತ್ತು ಸಾವಿರ ಗಳನ್ನು ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಪುಷ್ಪಾ ತಂದೆ ಕುಮಾರ ಬಾದಗಿ ತಾಯಿ ಅಂಬಿಕಾ ಅವರಿಗೆ ಹಣ ನೀಡಿ, ನನ್ನ ಕೈಲಾದ ಸಹಾಯವನ್ನು ಮಾಡಿದ್ದೇನೆ ಹಾಗೂ ನನ್ನ ಸ್ನೇಹಿತರಿಗೆ, ಎಲ್ಲಾ ಧ್ರುವ ಸರ್ಜಾ ಅವರ ಅಭಿಮಾನಿಗಳಿಗೆ ಹೇಳಿ ಅವರ ಕಡೆಯಿಂದ ಸಹಾಯ ಮಾಡಿಸುತ್ತೇನೆ ಎಂದು ಹೇಳಿದ್ದಾರೆ.

ಈ ಸಂದರ್ಭದಲ್ಲಿ ಬಂಡಿಹಟ್ಟಿ ಮಂಜು, ಮಾಸುಮ್ ಗುಡಾರನಗರ ಅಯ್ಯಪ್ಪ, ಹನುಮಂತ ಮೊದಲಾದವರು ಇದ್ದರು.

# ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಬಳ್ಳಾರಿ:ನಗರದ ಕೌಲ್ ಬಜಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಓಟಿ ಕಾಂಪ್ಲೆಕ್ಸ್ ಆವರಣದಲ್ಲಿ ಸುಮಾರು 40 ವರ್ಷದ ಅನಾಮಧೇಯ ವ್ಯಕ್ತಿಯು ಯಾವುದೇ ಖಾಯಿಲೆಯಿಂದ ಬಳಲಿ ಜ.31 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ಮಾಹಿತಿ ಇರುವುದಿಲ್ಲ. ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5.8 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ತಲೆಯಲ್ಲಿ ಕಪ್ಪು ಕೂದಲು ಹೊಂದಿದ್ದು, ಮೈಮೇಲೆ ಬಿಳಿ ಮತ್ತು ಕಪ್ಪು ಗೆರೆಯುಳ್ಳ ಬೂದಿಬಣ್ಣದ ತುಂಬು ತೋಳಿನ ಅಂಗಿ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ಸ್, ಗುಲಾಬಿ ಬಣ್ಣದ ಒಳಉಡುಪು, ನೀಲಿ ಬಣ್ಣದ ಬನಿಯನ್, ಕೆಂಪು ಬಣ್ಣದ ಉಡುದಾರ ಧರಿಸಿರುತ್ತಾನೆ.

ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, ಪಿಐ ಮೊ.9480803047, ಪಿಎಸ್‌ಐ ಮೊ.9480803084 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

# ನಿಷೇಧಿತ ವಸ್ತು ಕೃತಕ ಬಣ್ಣ ಬಳಸದಂತೆ ಎಚ್ಚರಿಕೆ ವಹಿಸಿ: ಡಾ. ಇಟ್ನಾಳ



• **ಮಲ್ಲಮ್ಮನುಡಿ ವಾರ್ತೆ ಕೊಪ್ಪಳ:**

ರಸ್ತೆ ಬದಿ ದೊರೆಯುವ ಗೋಬಿ ಮಂಚೂರಿ, ಪಾನಿಪೂರಿ ಮುಂತದಾ ಚಾಟ್ಸಗಳಲ್ಲಿ ಕೃತಕ ಬಣ್ಣ ಹಾಗೂ ನಿಷೇಧಿತ ವಸ್ತುಗಳನ್ನು ಬೆರೆಸದಂತೆ ಸರ್ಕಾರ ಆದೇಶಿಸಿದೆ. ಅದರಂತೆ ಸರ್ಕಾರದಆದೇಶಪಾಲನೆಯಾಗುತ್ತಿರುವ ಬಗ್ಗೆ ಇಲಾಖೆ ಎಚ್ಚರಿಕೆ ವಹಿಸಿ, ಖಾತ್ರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಪ್ರಾಧಿಕಾರದ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅಧ್ಯಕ್ಷರಾದ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ತಯಾರಾಗುವ ಆಹಾರ ಹಾಗೂ ರಸ್ತೆಬದಿ ಮಾರಾಟ ಮಾಡುವ ಗೋಬಿ ಮಂಚೂರಿ, ಪಾನಿ ಪೂರಿಯಂತಹ ಚಾಟ್ಸ್, ಫಾಸ್ಟ್ ಫುಡ್‌ಗಳಲ್ಲಿ ಕೃತಕ ಬಣ್ಣಗಳನ್ನು ಹಾಗೂ ಆಹಾರದ ರುಚಿ ಹೆಚ್ಚಿಸುವ ನಿಷೇಧಿತ ವಸ್ತುಗಳನ್ನು ಬಳಸದಂತೆ ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಆದಾಗ್ಯೂ ಕೆಲ ಅಂಗಡಿಗಳಲ್ಲಿ ನಿಷೇಧಿತ ವಸ್ತುಗಳು ಹಾಗೂ ಕೃತಕ ಬಣ್ಣಗಳ ಬಳಕೆ ನಡೆಯುತ್ತಿದೆ. ಇಂತಹ ಹೋಟೆಲ್, ರಸ್ತೆಬದಿ ಅಂಗಡಿಗಳನ್ನು ಗುರುತಿಸಿ, ಅದರ ಮಾಲೀಕರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಿ. ರುಚಿ ಹೆಚ್ಚಿಸುವ ನಿಷೇಧಿತ ವಸ್ತುಗಳು ಆರೋಗ್ಯಕ್ಕೆ ತುಂಬಾ ಹಾನಿಕಾರಕ. ಆದ್ದರಿಂದ ಯಾವುದೇ ಹೋಟೆಲ್, ರಸ್ತೆ ಬದಿ ಅಂಗಡಿಗಳಲ್ಲಿ ಇಂತಹ ನಿಷೇಧಿತ ವಸ್ತುಗಳ ಬಳಕೆ ಮಾಡುತ್ತಿಲ್ಲ ಎಂಬುದನ್ನು ಖಾತ್ರಿಪಡಿಸಿಕೊಂಡು, ಸರ್ಕಾರದ ಆದೇಶದ ಕಟ್ಟುನಿಟ್ಟಿನ ಪಾಲನೆಗೆ ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಪ್ರಾಧಿಕಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲ ವಸತಿ ಶಾಲೆಗಳಲ್ಲಿ, ಅಂಗನವಾಡಿಗಳಲ್ಲಿ ಹಾಗೂ ಶಾಲೆಗಳಲ್ಲಿ ನೀಡುವ ಆಹಾರಗಳಲ್ಲಿ ಬಳಸುವ ದಿನಸಿ ವಸ್ತುಗಳ ಗುಣಮಟ್ಟ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಬೇಕು. ಹಾಗೂ ಆಹಾರ ಸಾಮಗ್ರಿ ಶೇಖರಿಸುವ ಗೋದಾಮುಗಳಲ್ಲಿ ನಿಯಮಾನುಸಾರ ಸ್ವಚ್ಛತೆ ಹಾಗೂ ಸುರಕ್ಷತೆ ನಿರ್ವಹಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಹಳ್ಳಿಗಳಲ್ಲಿ ಹಾಲು ಸಂಗ್ರಹಣಾ ಕೇಂದ್ರಗಳಿಗೆ ಗುಣಮಟ್ಟಪರೀಕ್ಷೆಯಮಾನದಂಡಗಳನ್ನು ನೀಡಲಾಗಿದೆ. ಆ ಮಾನದಂಡಗಳನ್ವಯ ಗುಣಮಟ್ಟದ ಹಾಲನ್ನು ಮಾತ್ರ ಹಾಲು ಮಾರಾಟಗಾರರಿಂದ ಸಂಗ್ರಹಿಸಬೇಕು. ಇಂತಹ ಹಾಲು ಸಂಗ್ರಹಣಾ ಕೇಂದ್ರಗಳಲ್ಲಿ ದೊರೆಯುವ ಹಾಲನ್ನು ಪರೀಕ್ಷೆಗೊಳಪಡಿಸಿ. ಯೂರಿಯಾ ಬಳಸಿ ನಕಲಿ ಹಾಲು ಹಾಗೂ ಹಾಲಿನ ಉತ್ಪನ್ನಗಳಾದ ಪನೀರ್, ಚೀಸ್ ಮುಂತಾದವುಗಳನ್ನು ತಯಾರಿಸಲಾಗುತ್ತದೆ. ಅಂತಹವುಗಳನ್ನು ಗುರುತಿಸಿ ಮಾರಾಟವಾಗದಂತೆ ಎಚ್ಚರಿಕೆ ವಹಿಸಬೇಕು. ಬೇಕರಿ ಹಾಗೂ ಎಗ್‌ರೈಸ್ ಅಂಗಡಿಗಳಲ್ಲಿ ಒಡೆದ ಹಾಗೂ ಕೆಟ್ಟ ಮೊಟ್ಟೆಗಳನ್ನು ಬಳಸುತ್ತಿರುವ ಕುರಿತು ದೂರುಗಳಿವೆ. ಈ ಬಗ್ಗೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಮಾದರಿ ಪರೀಕ್ಷೆ ಮಾಡಿ, ತಪ್ಪು ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ನ್ಯಾಯಬೆಲೆ ಅಂಗಡಿಗಳಲ್ಲಿಯೂ ಇಲಾಖೆಯಿಂದ ಮಾದರಿ ಪರೀಕ್ಷೆ ನಡೆಸಬೇಕು. ಸರ್ಕಾರದಿಂದ ಜನರಿಗೆ ನೀಡುವ ಯಾವುದೇ ಆಹಾರ ಸಾಮಗ್ರಿ, ದಿನಸಿ ಮುಂತಾದವು ಗುಣಮಟ್ಟದಿಂದ ಕೂಡಿರಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಮಾತನಾಡಿ, ಸಾರ್ವಜನಿಕರು ಹೋಟೆಲ್ ಹಾಗೂ ರಸ್ತೆ ಬದಿ ಅಂಗಡಿಗಳಲ್ಲಿ ದೊರೆಯುವ ಆಹಾರ ಸೇವಿಸುವ ಮುನ್ನ ಎಚ್ಚರಿಕೆ ವಹಿಸಬೇಕು. ಗುಣಮಟ್ಟದ ಆಹಾರ ಸೇವನೆಗೆ ಆದ್ಯತೆ ನೀಡಬೇಕು. ಕಿರಾಣಿ ಹಾಗೂ ಮಾರ್ಟ್‌ಗಳಲ್ಲಿ ದೊರೆಯುವ ದಿನಸಿ ಸಾಮಗ್ರಿಗಳ ಮೇಲೆ ಕಡ್ಡಾಯವಾಗಿ ಸುರಕ್ಷಿತ ಬಳಕೆಯ ಅವಧಿಯನ್ನು ನಮೂದಿಸಬೇಕು. ಗ್ರಾಹಕರು ಅವಧಿ ನಮೂದಿಸಿದ ಬಗ್ಗೆ ಖಾತ್ರಿಪಡಿಸಿಕೊಂಡು ಸರಕು ಕೊಳ್ಳಬೇಕು. ಮಕ್ಕಳಿಗೆ ನೀಡುವ ಸಿಹಿತಿಂಡಿ, ಐಸ್‌ಕ್ರೀಮ್ ಮುಂತಾದ ತಿನಿಸುಗಳಲ್ಲಿ ಬಳಸಲಾದ ಅನುಮತಿಸಲಾದ ವಸ್ತುಗಳ ವಿವರಣೆ ನಂತರವೇ ಮಕ್ಕಳಿಗೆ ತಿನಿಸುಗಳನ್ನು ನೀಡಬೇಕು. ಕುರುಕಲು ತಿಂಡಿಗಳಲ್ಲಿ ಬಳಸುವ ಎಣ್ಣೆ ಕಳಪೆಯಾಗಿರುವ ಸಾಧ್ಯತೆ ಇರುತ್ತದೆ. ಆದ್ದರಿಂದ ಅಂತಹ ತಿನಿಸುಗಳ ಬಗ್ಗೆ ಜಾಗ್ರತೆ ವಹಿಸಬೇಕು. ಈ ಬಗ್ಗೆ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ನೀಡಿ, ಜಾಗೃತಿ ಮೂಡಿಸಬೇಕು ಎಂದು ಅವರು ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಂಕಿತ ಅಧಿಕಾರಿ ಡಾ.ಅಲಕನಂದಾ ಮಳಗಿ ಇಲಾಖೆ ಕೈಗೊಂಡ ಕ್ರಮಗಳು, ಆಹಾರ ಸುರಕ್ಷತಾ ಮಾನದಂಡಗಳು ಕುರಿತು ವಿವರವಾದ ಮಾಹಿತಿ ನೀಡಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಆಹಾರ ಇಲಾಖೆ ಉಪನಿರ್ದೇಶಕ ವಿಶ್ವನಾಥ, ಅಬಕಾರಿ ಇಲಾಖೆ ಡಿವೈಎಸ್‌ಪಿ ಬಿ.ಆಂಜನೇಯ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೋದಿ ಸರ್ಕಾರ ಜನಸಾಮಾನ್ಯರ ಬಗ್ಗೆ ಯಾವುದೇ ಗಮನ ಹರಿಸಿಲ್ಲ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯನ್ನು ಮೂಲೆಗುಂಪು ಮಾಡಿ, ಗ್ರಾಮೀಣ ಭಾಗದ ಅಭಿವೃದ್ಧಿಗೆ ಮಾರಕವಾಗಿದ್ದ ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ಇದೀಗ ಗ್ರಾಮೀಣಾಭಿವೃದ್ಧಿಗೆ ಕೇವಲ 1.6 ಲಕ್ಷ ಕೋಟಿ ಅನುದಾನ ನೀಡಿ ಗ್ರಾಮೀಣ ಜನರನ್ನು ಇನ್ನಷ್ಟು ಅದೋಗತಿಗೆ ತಳ್ಳಲು ಸಿದ್ಧವಾಗಿದೆ.

ಒಂದು ಕಡೆ ಬಜೆಟ್ ಮಂಡನೆ ಆಗುತ್ತಿರುವಾಗಲೇ ಭಾರತದ ಷೇರುಮಾರುಕಟ್ಟೆ ಪ್ರಪಾತಕ್ಕೆ ಕುಸಿದಿದ್ದು, ಈ ಬಾರಿಯ ಬಜೆಟ್ ಎಷ್ಟರ ಮಟ್ಟಿಗೆ ಜನ ಉಪಯೋಗಿ ಎಂಬುದನ್ನು ಮನಗಾಣಬಹುದು.

ಇನ್ನು ಮುಂದೆ ಚುನಾವಣೆ ಇರುವ ಪಶ್ಚಿಮ ಬಂಗಾಲ, ಕೇರಳ ಮುಂತಾದ ರಾಜ್ಯಗಳಿಗೆ ಕೊಡುಗೆ ನೀಡುವ ಸುಳ್ಳು ಘೋಷಣೆಗಳನ್ನು ನೀಡಿರುವ ಕೇಂದ್ರದ ಮೋದಿ ಸರ್ಕಾರ ಜನಸಾಮಾನ್ಯರ ಬಗ್ಗೆ ಯಾವುದೇ ಗಮನ ಹರಿಸಿಲ್ಲ.

ಐದು ಜಲಮಾರ್ಗ ಘೋಷಣೆ ಮಾಡುವ ಮೂಲಕ ತಮಿಳುನಾಡು, ಪಶ್ಚಿಮ ಬಂಗಾಳ, ಕೇರಳ ಸೇರಿದಂತೆ ದೇಶದ 20 ಕಡೆ ಹೊಸ ಜಲಮಾರ್ಗ ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಇದರ ಜೊತೆಗೆ ಮೀನುಗಾರರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಜಲಾಶಯ ನಿರ್ಮಾಣ ಮಾಡುವುದಾಗಿ ಘೋಷಣೆ ಮಾಡಿ, ಅಲ್ಲಿರುವ ಮೀನುಗಾರರನ್ನು ಮುಂದಿನ ಚುನಾವಣೆಯಲ್ಲಿ ಅವರ ಮತಗಳಿಸುವ ಹುನ್ನಾರ ಇದೆ ಹೊರತು ಇದು ನಿಜಕ್ಕೂ ಜಾರಿಯಾಗುವ ಯೋಜನೆ ಅಲ್ಲ. ಐದು ಹೊಸ ರೈಲ್ವೆ ಕಾರಿಡಾರ್ ಘೋಷಣೆ ಮಾಡಿರುವುದು ಇವರು ಅದೆಷ್ಟು ಕಾರ್ಪೋರೇಟ್ ಪರ ಇದ್ದಾರೆ ಎಂಬುದನ್ನು ಸ್ಪಷ್ಟವಾಗಿ ತೋರಿಸಿಕೊಟ್ಟಿದ್ದಾರೆ. ತೆರಿಗೆ ಇಳಿಕೆ ಮಾಡಿರುವ ಉತ್ಪನ್ನಗಳನ್ನು ಗಮನಿಸಿದರೆ ಎಲ್ಲವೂ ಕಾರ್ಪೋರೇಟ್ ಪರವಾಗಿಯೇ ಇವೆ. ವಿಮಾನದ ಬಿಡಿ ಭಾಗಗಳ ಮೇಲಿನ ತೆರಿಗೆ ಇಳಿಸಿರುವುದು ಭಾರತೀಯ ವಿಮಾನ ಯಾನ ರಂಗಕ್ಕೆ ಅದಾನಿಯವರು ಕಾಲಿಡುತ್ತಿರುವ ಸಂಬಂಧ ಅವರ ಮನವೊಲಿಕೆಗೆ ಕೈಗೊಂಡ ತೀರ್ಮಾನದಂತೆ ಇದೆ. ಇನ್ನು ಜಿಡಿಪಿ ಬೆಳವಣಿಗೆ ಕುರಿತು ಕೇಂದ್ರ ವಿತ್ತ ಸಚಿವೆ ಲೋಕಸಭೆಯಲ್ಲಿ ಪ್ರಸ್ತಾಪ ಮಾಡಿ ದೊಡ್ಡ ಸಾಧನೆ ಮಾಡಿದವರ ಹಾಗೆ ಬಿಂಬಿಸಿಕೊಂಡಿದ್ದಾರೆ. ಆದರೆ, ಇಡೀ ದೇಶದ ಜಿಡಿಪಿಯ ಆದಾಯ ಯಾರ ಜೇಬಿಗೆ ಸೇರುತ್ತಿದೆ ಎಂಬುದನ್ನು ಅವರು ಹೇಳಲು ಸಿದ್ಧರಿಲ್ಲ. ಜನಸಾಮಾನ್ಯರಿಗೆ ಯಾವುದೇ ರೀತಿಯ ಕೊಡುಗೆ ಈ ಜಿಡಿಪಿ ಬೆಳವಣಿಗೆಯಿಂದ ಸಿಗುವುದಿಲ್ಲ ಎಂಬುದನ್ನು ಅವರು ಮರೆಮಾಚಿದ್ದಾರೆ.

ಜನಸಾಮಾನ್ಯರಿಗೆ ಭಾರೀ ಕೊಡುಗೆಗಳು ಸಿಗಬಹುದು ಎಂಬ ನಿರೀಕ್ಷೆಯಲ್ಲಿದ್ದವರಿಗೆ ದೊಡ್ಡ ನಿರಾಶೆ ಆಗಿದೆ. ಈ ಬಾರಿಯ ಬಜೆಟ್ ಸತ್ತ ಹೆಣಕ್ಕೆ ಸಿಂಗಾರ ಮಾಡಿದಂತೆ ಆಗಿದೆ.

# ಸಿಲ್ವರ್ ಜುಬಿಲಿ ಸಂಭ್ರಮಕ್ಕೆ ಭವ್ಯ ಆರಂಭ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

2026ಬಳ್ಳಾರಿಅನುದಾನರಹಿತ ಶಾಲಾ ನಿರ್ವಹಣಾ ಸಂಘ (ರಿ.) ಃಗಖಒಂ ಇದರ 25 ವರ್ಷಗಳ ಸಿಲ್ವರ್ ಜುಬಿಲಿ ಸಂಭ್ರಮದ ಮೊದಲ ದಿನದ ಕಾರ್ಯಕ್ರಮ ಇಂದು ಬಳ್ಳಾ-ರಿಯ ಬಸವ ಭವನದಲ್ಲಿ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಈ ಕಾರ್ಯಕ್ರಮವನ್ನು **ಕರ್ನಾಟಕ ಅನುದಾನರಹಿತ ಶಾಲಾ ನಿರ್ವಹಣಾ ಸಂಘ (ಏಂಒಖ)**ನ ಮಾನ್ಯ ಗೌರವಾಧ್ಯಕ್ಷರಾದ ಶ್ರೀ ಎಂ.ಎ. ಆನಂದ, ಪ್ರಧಾನ ಕಾರ್ಯದರ್ಶಿಗಳಾದ ಡಿ. ಶಶಿಕುಮಾರ್, ಮಾಜಿ ಃಗಆಂ ಅಧ್ಯಕ್ಷರಾದ ಎನ್. ಪ್ರತಾಪ್ ರೆಡ್ಡಿ ಅವರು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಃಗಖಒಂ ಅಧ್ಯಕ್ಷರಾದ ಎನ್. ಮರಿಸ್ವಾಮಿ ರೆಡ್ಡಿ, ಉಪಾಧ್ಯಕ್ಷರಾದ ಎಂ. ಶ್ರೀನಿವಾಸುಲು, ಖಜಾಂಚಿ ಪಿ. ರಮ್ಜಾನ್, ಕಾರ್ಯದರ್ಶಿ ರಿಯಾಜ್ ಎಸ್.ಕೆ., ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸಂಘದ ಮುಖಂಡರು, ಬಳ್ಳಾರಿ ತಾಲ್ಲೂಕು ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು, ಚೈತನ್ಯ ಪಿಯು ಕಾಲೇಜಿನ ಅಧ್ಯಕ್ಷರಾದ ವಿಷ್ಣು, ಹಾಗೂ ಃಗಖಒಂ ಸಂಘದ ಎಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಗಣ್ಯರು ಃಗಖಒಂ ಸಂಘದ 25 ವರ್ಷಗಳ ಸೇವಾ ಪಯಣವನ್ನು ಸ್ಮರಿಸಿ, ಖಾಸಗಿ ಅನುದಾನರಹಿತ ಮತ್ತು ಬಜೆಟ್ ಶಾಲೆಗಳ ಹಿತಕ್ಕಾಗಿ ಸಂಘ ವಹಿಸಿರುವ ಪಾತ್ರವನ್ನು ಶ್ಲಾಘಿಸಿದರು. ಶಾಲಾ ನಿರ್ವಹಣೆ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಚರ್ಚಿಸಿ, ಸರ್ಕಾರ ಹಾಗೂ ಜನಪ್ರತಿನಿಧಿಗಳಿಗೆ ಸಲ್ಲಿಸಬೇಕಾದ ಪ್ರಮುಖ ಬೇಡಿಕೆಗಳು ಮತ್ತು ಪ್ರತಿನಿಧಿಗಳನ್ನು ಸಂಘದ ವತಿಯಿಂದ ಸಲ್ಲಿಸಲಾಯಿತು.

ಕಾರ್ಯಕ್ರಮವು ಏಕತೆ, ಬದ್ಧತೆ ಮತ್ತು ಶಿಕ್ಷಣ ನ್ಯಾಯಕ್ಕಾಗಿ ನಿರಂತರ ಹೋರಾಟ ಎಂಬ ಸಂದೇಶದೊಂದಿಗೆ ಸಮಾರೋಪಗೊಂಡಿತು. ಎರಡು ದಿನಗಳ ಸಿಲ್ವರ್ ಜುಬಿಲಿ ಸಂಭ್ರಮಕ್ಕೆ ಇದು ಅರ್ಥಪೂರ್ಣ ಮತ್ತು ಶಕ್ತಿದಾಯಕ ಆರಂಭವಾಗಿತ್ತು.

## ವಿಶೇಷ ಪ್ರೋತ್ಸಾಹ ನೀಡಿ



ಬಳ್ಳಾರಿ. ಎಂಎಸ್ ಎಂಇಗಳಿಗೆ ವಿಶೇಷ ಪ್ರೋತ್ಸಾಹ ನೀಡಿ ಉತ್ಪಾದನಾ ವಲಯಕ್ಕೆ ಆದ್ಯತೆ ನೀಡಿ ಉದ್ಯೋಗ ಸೃಷ್ಟಿಸಲು ಹೆಚ್ಚಿನ ಗಮನ ನೀಡಲಾಗಿದೆ. ಕ್ರೀಡೆ, ಔಷಧೀಯ, ವಿಜ್ಞಾನ, ಶಿಕ್ಷಣ, ಸಂಶೋಧನಾ ಕ್ಷೇತ್ರದಲ್ಲಿ ಗಮನ ನೀಡಿರುವ ಬ್ಯಾಲೆನ್ಸ್ ಬಜೆಟ್ ಇದಾಗಿದೆ. ವಿಶ್ವವೇ ಆರ್ಥಿಕ ಮತ್ತು ರಾಜಕೀಯ ಅನಿಶ್ಚಿತತೆಯಲ್ಲಿದೆ. ಈ ದಿನಗಳಲ್ಲಿ ಭಾರತದಲ್ಲಿ ಸ್ಥಿರತೆಯ ಬಜೆಟ್ ನೀಡಲು ಪ್ರಯತ್ನ ಮಾಡಿರುವುದು ಹರಸಾಹಕ್ಕೆ ಸಾಕ್ಷಿ.

**ಕೆ.ಸಿ. ಸುರೇಶಬಾಬು ಗೌರವ ಕಾರ್ಯದರ್ಶಿಗಳು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ, ಬಳ್ಳಾರಿ**

## ಶಿಕ್ಷೆಯನ್ನು ರದ್ದು ಮಾಡಿ



ಬಳ್ಳಾರಿ . ಸಣ್ಣ ಪ್ರಮಾಣದ ಆದಾಯ ತೆರಿಗೆ ಪಾವತಿಯಲ್ಲಿ ಶಿಕ್ಷೆಯನ್ನು ರದ್ದು ಮಾಡಿ, ದಂಡ ವಿಧಿಸುತ್ತಿರುವುದು ಸೂಕ್ತವಾದ ನಿರ್ಧಾರ. ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ಪ್ರೋತ್ಸಾಹ ನೀಡಿರುವುದು, ಕೆಲ ವಿಮೆಗಳಿಗೆ ತೆರಿಗೆ ವಿನಾಯಿತಿ ನೀಡಿರುವುದು ಬಡ, ಮಧ್ಯಮ ವರ್ಗದವರ ಹಿತಾಸಕ್ತಿಗಳನ್ನು ಕಾಪಾಡಲಿದೆ. ಜಾಗತಿಕ ಆರ್ಥಿಕ ಸಂಕಷ್ಟದ ದಿನಗಳಲ್ಲಿ ಮಂಡನೆ ಆಗಿರುವ ಸ್ವಾಗತಾರ್ಹ ಬಜೆಟ್.

**ಅವ್ವಾರು ಮಂಜುನಾಥ್**
**ಅಧ್ಯಕ್ಷರು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ, ಬಳ್ಳಾರಿ**

# ಉತ್ಸವ: ಫೆಬ್ರವರಿ 4ರಿಂದ ಹೆಲಿಕ್ಯಾಪ್ಟರ್ ರೈಡ್

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಫೆಬ್ರವರಿ 4ರಿಂದ 9ರವರೆಗೆ ರಾಯಚೂರು ಜಿಲ್ಲೆಯ ನಾಗರೀಕರಿಗೆ ಬಾನಂಗಳದಿಂದ ರಾಯಚೂರು ವೀಕ್ಷಣೆಗೆ ರಾಯಚೂರು ಬೈಸ್ಕಯ್ ಎಂಬ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮವನ್ನು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮವು ಫೆಬ್ರವರಿ 4ರಿಂದ 9ರವರೆಗೆ ಪ್ರತಿ ದಿನ ಬೆಳಗ್ಗೆ 8 ರಿಂದ ಮಧ್ಯಾಹ್ನ 12 ಗಂಟೆವರೆಗೆ ಹಾಗೂ ಮಧ್ಯಾಹ್ನ12.30 ರಿಂದ ಸಂಜೆ 4.30ರವರೆಗೆ ಇರುತ್ತದೆ. ಪ್ರತಿಯೊಬ್ಬರಿಗೆ 3,500 ರೂ. ಶುಲ್ಕ ಇರುತ್ತದೆ. 2 ವರ್ಷದೊಳಗಿನ ಮಕ್ಕಳಿಗೆ ಉಚಿತವಾಗಿರುತ್ತದೆ. ಆನ್‌ಲೈನ್ ಟಿಕೇಟ್ ಬುಕ್ಕಿಂಗ್‌ಗೆ ವೆಬ್‌ಸೈಟ್ ವಿಳಾಸ: www.helitaxii.com ಅಥವಾ https://share.google/cEDrwhwrhJdOvBFYK ಮೂಲಕ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಫ್‌ಲೈನ್ ಟಿಕೇಟ್‌ಗಾಗಿ ಮೊಬೈಲ್ ಸಂಖ್ಯೆ: 9482565016, 9448527188, 9611112356, 7676522104, 6362238100ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧ್ಯಕ್ಷರಾಗಿ ಹಿರಿಯ ಪತ್ರಕರ್ತ ರಘುರಾಮ್ ಪೆಂಡಕೂರ್ ಆಯ್ಕೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆನೇಕಲ್ ತಾಲೂಕಿನ ಚಂದಾಪುರದಲ್ಲಿರುವ ಸೂರ್ಯಾ ಎಲಿಗೆನ್ಸ್ ಅಪಾರ್ಟ್‌ಮೆಂಟ್‌ನಲ್ಲಿ ಶ್ರೀ ಭುವನೇಶ್ವರಿ ಕನ್ನಡ ಸಂಘ ಅಧಿಕೃತವಾಗಿ ಅಸ್ತಿತ್ವಕ್ಕೆ ಬಂದಿದೆ.

ಇಂದು (ಫೆ.01) ಸೂರ್ಯಾ ಎಲಿಗೆನ್ಸ್ ಅಪಾರ್ಟ್‌ಮೆಂಟ್ ಬಡಾವಣೆಯಲ್ಲಿ ನಡೆದ ಸಂಘದ ಮೊದಲ ಸರ್ವಸಾಧಾರಣ ಸಭೆಯಲ್ಲಿ ಸಂಘದ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಸಭೆಯಲ್ಲಿ ಹಿರಿಯ ಪತ್ರಕರ್ತ ರಘುರಾಮ್ ಪೆಂಡಕೂರ್ ಅವರನ್ನು ಆನೇಕಲ್ ತಾಲೂಕು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಸಂಘದ ಇತರ ಪದಾಧಿಕಾರಿಗಳನ್ನು ಕೂಡ ಏಕಮತದಿಂದ ಆಯ್ಕೆ ಮಾಡಲಾಯಿತು. ಕಾರ್ಯಧ್ಯಕ್ಷರಾಗಿ ಬಾಬುರಾವ್ ಡಾಯ್ಗುಡೇ, ಉಪಾಧ್ಯಕ್ಷರಾಗಿ ಬಿ.ಎಂ. ರವಿ ಹಾಗೂ ದೀಪಾ ವಿಜಯಕುಮಾರ್, ಕಾರ್ಯದರ್ಶಿಗಳಾಗಿ ನರಸಿಂಹಮೂರ್ತಿ, ಸಹ ಕಾರ್ಯದರ್ಶಿಯಾಗಿ ಸುರೇಶ್ ಮೂಲಿಮನಿ, ಖಜಾಂಚಿಯಾಗಿ ಗುರುನಾಥ್ ಎಸ್. ನಿಂಬಾಳ, ಸಹ ಖಜಾಂಚಿಯಾಗಿ ವೆಂಕಟೇಶ್ ಗಾದಾ ಅವರನ್ನು ಆಯ್ಕೆ ಮಾಡಲಾಯಿತು.

ಅದರಂತೆ ಸಂಘಟನೆ ಮತ್ತು ಕಾರ್ಯಕ್ರಮಗಳ ವ್ಯವಸ್ಥಾಪಕ ಹಾಗೂ ಉಸ್ತುವಾರಿ ಮೇಲ್ವಿಚಾರಕರಾಗಿ ಶ್ರೀರಾಮ್ ಪಟವಾರಿ, ಜಂಟಿ ಕಾರ್ಯದರ್ಶಿಯಾಗಿ ನಾಗೇಂದ್ರ, ಸಂಘಟನಾ ಕಾರ್ಯದರ್ಶಿಯಾಗಿ ಗಿರೀಶ್ ಅವರನ್ನು ನೇಮಕ ಮಾಡಲಾಯಿತು. ಇದಲ್ಲದೆ ಸಂಘದ ನಿರ್ದೇಶಕರಾಗಿ ನಾಗಭೂಷಣ್, ಶಂಕರೇ ಗೌಡ, ಸಮೀರ್ ಕುಲಕರ್ಣಿ ಹಾಗೂ ದಿಲ್‌ಶಾದ್ ಬೇಗಂ ಅವರನ್ನು ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ಮಾತನಾಡಿದ ಪದಾಧಿಕಾರಿಗಳು, ಕನ್ನಡ ಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯವನ್ನು ಉತ್ತೇಜಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಾಗಿ ತಿಳಿಸಿದರು. ಸಂಘದ ಮೂಲಕ ಕನ್ನಡದ ಏಕತೆಯನ್ನು ಬಲಪಡಿಸುವ ಸಂಕಲ್ಪವನ್ನು ಅವರು ವ್ಯಕ್ತಪಡಿಸಿದರು.

# ಕಿಕ್ಕಿರಿದು ತುಂಬಿದ ಸ್ಟೇಡಿಯಂ, ಚಿಣ್ಣರ ಸಂಭ್ರಮ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಆಚರಣೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಫೆ.2 ಮತ್ತು ಫೆ.3ರಂದು ಎರಡು ದಿನಗಳ ಕಾಲ ಆಯೋಜನೆ ಮಾಡಿದ ಮಕ್ಕಳ ಹಬ್ಬಕ್ಕೆ ಮೊದಲನೇ ದಿನ ಫೆ.2ರಂದು ಯಶಸ್ವಿಯಾಗಿ ಚಾಲನೆ ಸಿಕ್ಕಿತು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಮಕ್ಕಳ ಹಬ್ಬದ ನಿಮಿತ್ತ ಹಾಕಿದ್ದ ಬೇರೆ ಬೇರೆ ಬಗೆಯ ಪ್ರದರ್ಶನ ಕಾರ್ಯಕ್ರಮಕ್ಕೆ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ಅಧ್ಯಕ್ಷರಾದ ಕೇಶವರೆಡ್ಡಿ ಅವರು ಚಾಲನೆ ನೀಡಿದರು.

ರಾಯಚೂರಿನ ಕವಿ ಲೇಖಕ ಈರಣ್ಣ ಬೆಂಗಾಲಿ ಅವರ ಫೋಟೊಗ್ರಫಿಯ ನಾನಾ ಹಕ್ಕಿಗಳ ಚಿತ್ರಗಳ ಮಳಿಗೆ, ವಿವಿಧ ಗಣ್ಯ ವ್ಯಕ್ತಿಗಳ ಕಾರ್ಟೂನ್ ಪ್ರದರ್ಶನ ಮಳಿಗೆ, ಮುಖವಾಡ ತಯಾರಿ ಮಳಿಗೆ, ಗೂಡುದೀಪ ತಯಾರಿ ಮಳಿಗೆ, ಗಾಳಿಪಟ ಮಳಿಗೆ, ಆರೋಗ್ಯಕರವಾಗಿ ತಿನ್ನಿರಿ, ಆರೋಗ್ಯವಾಗಿರಿ ಎಂಬ ಸಂದೇಶದ ನಾನಾ ಮಳಿಗಳಿಗೆ ಮತ್ತು ರೋಬ್ಯಾಟಿಕ್ ಚಿಟ್ಟೆಗಳ ಪ್ರದರ್ಶನದ ವೀಕ್ಷಣೆ ನಡೆಸಿ ಮಕ್ಕಳು ಖುಷಿ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ನೋಂದಣಿ: ಈ ಕಾರ್ಯಕ್ರಮದಲ್ಲಿ ರಾಯಚೂರು ಸಿಟಿ ಸೇರಿದಂತೆ ಬೇರೆ ಬೇರೆ ಕಡೆಯ ಸರ್ಕಾರಿ ಹಾಗೂ ಖಾಸಗಿ ಶಾಲೆಯ ಮಕ್ಕಳು ಭಾಗಿಯಾಗಿದ್ದರು. ಮೊದಲನೇ ದಿನ ಸುಮಾರು 3 ಸಾವಿರಕ್ಕೂ ಹೆಚ್ಚು ಮಕ್ಕಳನ್ನು ನೋಂದಣಿ ಮಾಡಿಕೊಳ್ಳಲಾಯಿತು.

ಬೆಳಿಗ್ಗೆ 9 ಗಂಟೆ ವೇಳೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಕಿಕ್ಕಿರಿದು ಸೇರಿದ್ದ ಜಿಲ್ಲೆಯ ವಿವಿಧ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ವಿದ್ಯಾರ್ಥಿಗಳು ಕ್ರೀಡಾಂಗಣದಲ್ಲಿ ವರದಿ ಮಾಡಿಕೊಂಡು ರೋಬೋಟಿಕ್ ಪ್ರಾಣಿಗಳು, ರೋಬೋಟ್ ಪ್ರದರ್ಶನ, ಗೊಂಬೆ ನೃತ್ಯ, ಗಾಳಿಪಟ, ಮುಖವಾಡ ತಯಾರಿಕೆ, ಜೇಡಿಮಣ್ಣು ಸೇರಿದಂತೆ ವಿವಿಧ ಮಳಿಗೆಗಳಿಗೆ ಭೇಟಿ ನೀಡಿ ಸಂಭ್ರಮಿಸಿದರು.

ಕುಮಾರಿ ತನ್ವಿ ನಾಯಕ ಅವರು ಮೊದಲಿಗೆ ಭರತನಾಟ್ಯ ನೃತ್ಯ ಗೈದಳು. ಕೋಳಿ ನೃತ್ಯ, ಜಾದೂ ಪ್ರದರ್ಶನ ನಂತರ ಮಾಣಿಕ ಪ್ರಭು ಅಕಾಡೆಮಿ ಫಾರ್ ದಿ ಬ್ಲೈಂಡ್ ರಾಯಚೂರು ವತಿಯಿಂದ ಸಮೂಹ ಗಾಯನ, ಕುಮಾರಿ ಭಕ್ತಿ ತಂದೆ ರಾಜಶೇಖರ ಅವರಿಂದ ವಚನ ಸಂಗೀತ, ಕುಮಾರ ವೆಂಕಟೇಶ ನಂಜಲದಿನ್ನಿ ಅವರಿಂದ ಹೆಜ್ಜೆಮೇಳ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

ಮಧ್ಯಾಹ್ನ ವೇಳೆಯಲ್ಲಿ ರಾಘವ ನಾಟ್ಯಾಮೃತ ಶಾಲೆಯಿಂದ ಭರತನಾಟ್ಯ, ಸೇಂಟ್ ಮೇರಿ ಕಾನ್ವೆಂಟ್ ಶಾಲೆ ರಾಯಚೂರು ವತಿಯಿಂದ ಜಾನಪದ ನೃತ್ಯ, ಗಬ್ಬೂರಿನ ವಿದ್ಯಾಜ್ಯೋತಿ ಶಿಕ್ಷಣ ಸಂಸ್ಥೆಯಿಂದ ಜಂಪ್ ರೋಪ್ ಮತ್ತು ಮಲ್ಲಕಂಬ, ಮಲ್ಲಟ ಕೆ.ಜಿ.ಬಿ.ವಿ. ಶಾಲೆಯಿಂದ ಕರಾಟೆ ಪೀರಾಮೀಡ್, ರಾಯಚೂರಿನ ಜ್ಞಾನಗಂಗಾ ಶಾಲೆಯಿಂದ ಜಾನಪದ ನೃತ್ಯ, ರಾಯಚೂರಿನ ಮ್ಯಾಕ್ವೆಲ್ ಶಾಲೆ ಇಂಟರ್ ನ್ಯಾಷನಲ್ ಸ್ಕೂಲ್‌ನಿಂದ ಭರತನಾಟ್ಯ, ರಾಯಚೂರಿನ ಸೇಂಟ್ ಜೇವಿಯರ್ ಶಾಲೆಯಿಂದ ಸಾಂಸ್ಕೃತಿಕ ಕಾರ್ಯಕ್ರಮ, ರಾಯಚೂರಿನ ಲಯನ್ಸ್ ಪ್ರೌಢಶಾಲೆಯಿಂದ ಸಾಮೂಹಿಕ ನೃತ್ಯ, ರಾಯಚೂರಿನ ಸೇಂಟ್ ಜೇವಿಯರ್ ಶಾಲೆಯಿಂದ ಸಿಂಧೂರ ಕಾರ್ಯಚರಣೆ ಕುರಿತು ಕಾರ್ಯಕ್ರಮಗಳು ನಡೆದವು.

ಶಿಕ್ಷಕರಲ್ಲಿ ಉತ್ಸಾಹ: ಮಕ್ಕಳ ಉತ್ಸವಕ್ಕೆ ತಮ್ಮ ತಮ್ಮ ಶಾಲಾ ಮಕ್ಕಳನ್ನು ಕರೆ ತಂದಿದ್ದ ಬೇರೆ ಬೇರೆ ಶಾಲೆಗಳ ಗುರುಗಳು ಮತ್ತು ಗುರುಮಾತೆಯರು ಸಹ ಮಕ್ಕಳ ಹಬ್ಬದ ಸವಿಯನ್ನು ಕಣ್ತುಂಬಿಕೊಂಡರು.

# ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾದ ಕೆಪಿಸಿಸಿ ಮಾಧ್ಯಮ ವಕ್ತಾರ ವೆಂಕಟೇಶ್ ಹೆಗಡೆ ಮತ್ತು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಅಲ್ಲಿಪುರ ವೆಂಕಟಸ್ವಾಮಿ ಇವರಿಗೆ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಡಿಸಿಸಿ ಅಧ್ಯಕ್ಷ ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಲಾಯ್ತು.

# ವಸ್ತು ಪ್ರದರ್ಶನ ಮಾರಾಟ ಮೇಳಕ್ಕೆ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀ ಕೋಟೆ ಮಲ್ಲೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಅಂಗವಾಗಿ ದೇವಸ್ಥಾನ ಆವರಣದಲ್ಲಿ ಆಯೋಜಿಸಲಾಗಿದ್ದ ಮೂರು ದಿನಗಳ (ಫೆ.01 ರಿಂದ 03 ರವರೆಗೆ) ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಭಾನುವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು, ಅವರಿಗೆ ಬೆಂಬಲ ಮತ್ತು ಪ್ರೋತ್ಸಾಹ ನೀಡಲಾಗುತ್ತಿದೆ. ಸಾರ್ವಜನಿಕರು ಭೇಟಿ ನೀಡಿ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಮೇಳದಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ತಯಾರಿಸಿದ ವಿವಿಧ ಬಗೆಯ ಉತ್ಪನ್ನಗಳನ್ನು ಪ್ರದರ್ಶನಕ್ಕಿರಿಸಲಾಗಿತ್ತು.

ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ.ರವಿಕುಮಾರ್, ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಜಿಪಂ ಯೋಜನಾ ನಿರ್ದೇಶಕ ಬಸವರಾಜ ಹಿರೇಮಠ, ಜಿಪಂ ಮುಖ್ಯ ಲೆಕ್ಕಾಧಿಕಾರಿ ವಿನೋದ್ ಕುಮಾರ್ ಸೇರಿದಂತೆ ಎನ್‌ಆರ್‌ಎಲ್‌ಎಂ ಯೋಜನೆಯ ಸಿಬ್ಬಂದಿಗಳು, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರುಗಳು ಇದ್ದರು.

# ಸೈನಿಕ ರೈತ ದೇಶದ ಎರಡು ಕಣ್ಣು: ಸ್ವಾಮೀಜಿ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ದೇಶ ಕಾಯುವ ಸೈನಿಕರು ಹಾಗೂ ಅನ್ನ ನೀಡುವ ರೈತರು ದೇಶದ ಎರಡು ಕಣ್ಣುಗಳು ಎಂದು ಬಿಲ್ ಕೆರೂರಿನ ಸಿದ್ಧಲಿಂಗ ಶಿವಾಚಾರ್ಯಸ್ವಾಮೀಜಿ ಹೇಳಿದರು. ಭಾರತೀಯ ಸೇನಾ ಪಡೆಯಲ್ಲಿ 21 ವರ್ಷ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿ ರವಿವಾರ ಸ್ವಗ್ರಾಮ ಹಳ್ಳೂರಿಗೆ ಆಗಮಿಸಿದ ಯೋಧ ಹವಾಲ್ದಾರ್ ರಮೇಶ ಬಸನಗೌಡ ಪಾಟೀಲ ಅವರನ್ನು ಸನ್ಮಾನಿಸಿ ಶ್ರೀಗಳು ಮಾತನಾಡಿದರು.

ಸೈನಿಕರು ದೇಶದ ರಕ್ಷಕರಾಗಿದ್ದು, ಗಡಿಯಲ್ಲಿ ಅವರು ನಿರಂತರ ರಕ್ಷಣಾ ಕಾರ್ಯ ಮಾಡುತ್ತಿರುವುದರಿಂದಲೇ ದೇಶದ ನಾಗರಿಕರು ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗಿದೆ ಎಂದರು.

ರೈತರು ಹಾಗೂ ಸೈನಿಕರು ದೇಶದ ಎರಡು ಕಣ್ಣುಗಳೇ ಸರಿ.ಅವರು ತಮ್ಮ ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸದೇ ಹೋದರೆ ಜನರ ಬದುಕು ದುಸ್ತರವಾಗುತ್ತದೆ ಎಂದು ಹೇಳಿದ ಶ್ರೀಗಳು, ಸೈನಿಕರು ಹಾಗೂ ರೈತರನ್ನು ಸಮಾಜ ಗೌರವದಿಂದ ಕಾಣಬೇಕು ಎಂದು ಹೇಳಿದರು.

ಅತಿಥಿಗಳಾಗಿ ಮಾತನಾಡಿದ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಅರ್ಜುನ ಕೋರಿ, ದೇಶ ಸೇವೆ ಮಾಡುತ್ತಿರುವ ಸೈನಿಕರಿಗೆ ಕುಟುಂಬದವರ ಸಹಕಾರ, ದೇಶದ ನಾಗರಿಕರ ನೈತಿಕ ಬೆಂಬಲ ಇರಬೇಕು ಎಂದು ಹೇಳಿದರು. ಇನ್ನೋರ್ವ ಅತಿಥಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷ ಗದಿಗೆಪ್ಪ ಅರಕೇರಿ ಮಾತನಾಡಿ, ಸೈನಿಕರಿಗೆ ದೇಶ ರಕ್ಷಣೆ ಮಾಡುವುದೇ ಪ್ರಮುಖ ಧ್ಯೇಯವಾಗಿದೆ. ಇಂದು ಯುವಕರು ಸೈನ್ಯಕ್ಕೆ ಸೇರಿ ದೇಶ ಸೇವೆ ಮಾಡಲು ಮುಂದಾಗಬೇಕು ಎಂದರು.

ಸ್ಥಳೀಯ ಬಸವೇಶ್ವರ ಪ್ರೌಢಶಾಲೆಯ ಅಧ್ಯಕ್ಷ ಎನ್.ಸಿ.ದೊಡ್ಡನಗೌಡ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭದಲ್ಲಿ ಗ್ರಾಮದ ಹಿರಿಯರಾದ ಬಿ.ಜಿ.ಹಳ್ಳೂರ, ಸಿ.ಎಂ.ಮೇಟಿ, ಬಿ.ಟಿ.ಮೇಟಿ, ಮಾಜಿ ಸೈನಿಕರಾದ ಶರಣಪ್ಪ ರಕರೆಡ್ಡಿ, ವೆಂಕಣ್ಣ ಮೇಟಿ, ಮಹಾಂತಗೌಡ ಪಾಟೀಲ, ಲಕ್ಷ್ಮಣ ಭಜಂತ್ರಿ, ಬಿ.ಎಂ. ಹೊಸಗೌಡರ, ಆರ್.ಬಿ.ಪಾಟೀಲ, ಎಸ್.ಎಸ್.ಸುನಗದ ಅತಿಥಿಗಳಾಗಿದ್ದರು. ಗ್ರಾಮದ ಹಿರಿಯರು, ವಿವಿಧ ಸಂಘಟನೆಗಳು, ಶಿಕ್ಷಕರು ಹಾಗೂ ರಮೇಶ ಪಾಟೀಲ ಕುಟುಂಬದವರು, ಬಂಧುಗಳು ಸನ್ಮಾನಿಸಿದರು. ಕಾರ್ಯಕ್ರಮಕ್ಕೂ ಮೊದಲು

ಗ್ರಾಮಕ್ಕೆ ಆಗಮಿಸಿದ ರಮೇಶ ಬಸನಗೌಡ ಪಾಟೀಲ ಅವರನ್ನು ಕುಟುಂಬದ ಮಹಿಳೆಯರು ಆರತಿ ಬೆಳಗಿ ಸ್ವಾಗತಿಸಿದ ನಂತರ ಬಸವೇಶ್ವರ ಮಹಾದ್ವಾರದಿಂದ ಮೆರವಣಿಗೆಯ ಮುಖಾಂತರ ವಿಜಯ ಮಹಾಂತೇಶ್ವರ ಮಠದ ವೇದಿಕೆಗೆ ಕರೆತರಲಾಯಿತು. ಅತಿಥಿಗಳಾಗಿ ಆಗಮಿಸಿದ್ದ ಮಾಜಿ ಸೈನಿಕರನ್ನೂ ಸಹ ಸನ್ಮಾನಿಸಲಾಯಿತು.

# ಅನುಮಾನಾಸ್ಪದಗಳಿಗೆ ಅವಕಾಶ ನೀಡದೇ ಉಪ ಚುನಾವಣೆ ನಡೆಸಿ ರಾಮಪ್ರಶಾಂತ ಮನೋಹರ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:



ಯಾವುದೇ ಅನುಮಾನಾಸ್ಪದಗಳಿಗೆ ಅವಕಾಶ ನೀಡದೇ ಪಾರದರ್ಶಕ ಹಾಗೂ ನಿಷಪಕ್ಷಪಾತವಾಗಿ ಮುಂಬರುವ ಬಾಗಲಕೋಟ ಮತಕ್ಷೇತ್ರದ ಉಪಚುನಾಣೆಯನ್ನು ನಡೆಸುವಂತೆ ಬಾಗಲಕೋಟ ವಿಧಾನಸಭೆ ಉಪಚುನಾವಣೆ ಸಂಬಂಧ ರೋಲ್ ಅಬ್ಜರವರ್ ಆಗಿರುವ ರಾಮಪ್ರಶಾಂತ ಮನೋಹರ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ರವಿವಾರ ಸಂಜೆ ಬಾಗಲಕೋಟೆ ವಿಧಾನಸಭೆ ಉಪ ಚುನಾವಣೆಯ ಮತದಾರರ ಪಟ್ಟಿ ವಿಶೇಷ ಪರಿಸ್ಕರಣೆಗೆ ಸಂಬಂಧಪಟ್ಟಂತೆ ಪೂರ್ವ ಸಿದ್ದತೆ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಯಾವುದೇ ಚುನಾವಣೆ ನಡೆದರೂ ಸಹ ಚುನಾವಣಾ ಪ್ರಕ್ರಿಯೆಗಳನ್ನು ಜಾಗೃತೆಯಿಂದ ನಿರ್ವಹಿಸಬೇಕಾಗುತ್ತದೆ. ಮತದಾರರ ಪಟ್ಟಿಯನ್ನು ತಯಾರಿಸುವದರಿಂದಲೇ ಚುನಾವಣಾ ಪ್ರಕ್ರೀಯೆ ಪ್ರಾರಂಭವಾದಂತೆ. ಪ್ರಾರಂಭದಲ್ಲಿಯೇ ಲೋಪದೋಷಗಳಿದ್ದಲ್ಲಿ ರಾಜಕೀಯ ಪಕ್ಷಗಳು ಗಮನಕ್ಕೆ ತರುವ ಕೆಲಸ ಮಾಡಿದಲ್ಲಿ ಅಂತಹ ದೋಷಗಳನ್ನು ಸರಿಪಡಿಸಿ ಚುನಾವಣೆಯನ್ನು ಸುಗಮವಾಗಿ ಮುಗಿಸಲು ಸಾಧ್ಯವಾಗುತ್ತದೆ. ಅಂತಹ ಯಾವುದೇ ಲೋಪಗಳಿದ್ದಲ್ಲಿ ತಕ್ಷಣ ಸೂಚಿಸುವ ಕಾರ್ಯ ಮಾಡಿರಿ ಎಂದು ಅವರು ಹೇಳಿದರು.

2026 ಜನೇವರಿ 3 ರಿಂದ 31 ರವರೆಗೆ ಫಾರ್ಮ್ 6 ಸಂಬಂಧಿಸಿದಂತೆ 4703, ಫಾರ್ಮ 7ರಡಿ 1821, ಫಾರ್ಮ 8ರ ತಿದ್ದುಪಡಿಗೆ ಸಂಬಂಧಿಸಿದಂತೆ 5700 ಹಾಗೂ ಪಾರ್ಮ್ 8 ರಡಿಯ ವರ್ಗಾವಣೆಗೆ ಸಂಬಂಧಿಸಿದಂತೆ 313 ಸೇರಿ ಒಟ್ಟಾರೆಯಾಗಿ 12537 ಫಾರ್ಮಗಳು ಸ್ವೀಕೃತವಾಗಿರುತ್ತವೆ. ಮತದಾರರ ಪಟ್ಟಿಗೆ ಸಂಬಂಧಿಸಿದ ಹಕ್ಕು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿ ಮಾಡಲು ಫೆ. 7ರವರೆಗೆ ಕಾಲಾವಕಾಶವಿದೆ. ಈಗಾಗಲೇ ಬಿಎಲ್ಓ ಗಳಿಗೆ ತರಬೇತಿ ನೀಡಲಾಗಿದ್ದು, . ಎಲ್ಲವೂ ಅಚ್ಚುಕಟ್ಟಾಗಿ ನಡೆಯುತ್ತಿದೆ. ಫಾರ್ಮ 6 ಮತ್ತು 7 ಕ್ಕೆ ಸಂಬಂಧಿಸಿದ ಆಕ್ಷೇಪಣೆಗಳೆನಾದರೂ ಅಥವಾ ಬೇರೆ ಮತಕ್ಷೇತ್ರದವರು ಇಲ್ಲಿಗೆ ಬರುವ ಸಂಭವನೀಯತೆ ಇದ್ದಲ್ಲಿ ರಾಜಕೀಯ ಪಕ್ಷಗಳು ತಿಳಿಸಬೇಕು. ಎಲ್ಲವನ್ನೂ ಸರಿಪಡಿಸಿ ಫೆ.14 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಈ ಸಂಧರ್ಭದಲ್ಲಿ ಎಲ್ಲ ರಾಜಕೀಯ ಪಕ್ಷಗಳ ಮುಖಂಡರು, ಪ್ರತಿನಿಧಿಗಳ ಸಹಕಾರ ಮುಖ್ಯವಾಗಿದ್ದು ಎಲ್ಲರೂ ಸಹಕರಿಸಬೇಕು ಎಂದು ಅವರು ಕೋರಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬಾಗಲಕೋಟ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಬಜೆಟ್ ಪ್ರತಿಕ್ರಿಯೆ:
# ಜನರ ಆಶೋತ್ತರಗಳಿಗೆ ತಿಲಾಂಜಲಿ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ಕೇಂದ್ರ ಸರ್ಕಾರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಪ್ರಸಕ್ತ ಸಾಲಿನ ಬಜೆಟ್ ಯಾವುದೇ ವಿಶೇಷತೆ, ಕೊಡುಗೆಗಳಿಂದ ಕೂಡಿಲ್ಲ. ಭಾರತೀಯರ ಆಶೋತ್ತರಗಳಿಗೆ ತಿಲಾಂಜಲಿ ಇಟ್ಟಿದೆ. ಮಧ್ಯಮ ವರ್ಗ, ದುಡಿಮೆ ವರ್ಗದವರ ಆರ್ಥಿಕ, ಸಾಮಾಜಿಕ ಶಕ್ತಿ ತುಂಬವ ಕೆಲಸ ಮಾಡಿಲ್ಲ ಎಂದು ಕೆಪಿಸಿಸಿ ಸದಸ್ಯೆ ರಕ್ಷಿತಾ ಭರತಕುಮಾರ ಈಟಿ ಟೀಕಿಸಿದ್ದಾರೆ.

ಬಜೆಟ್ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಹಲವಾರು ವರ್ಷಗಳಿಂದ ನಿರಂತರ ಬೆಲೆ ಏರಿಕೆಯಿಂದ ಜನ ಜೀವನ ತತ್ತರಿಸಿ ಹೋಗಿದೆ. ಚಿನ್ನ, ಬೆಳ್ಳಿ, ಆಹಾರ ಧಾನ್ಯ , ಕೃಷಿ ಉಪಕರಣ ಸೇರಿದಂತೆ ಹಲವು ವಿಭಾಗಗಳು ಬೆಲೆ ಏರಿಕೆಯಾಗಿವೆ. ಈ ಬಜೆಟ್ ನಲ್ಲಿ ಬೆಲೆ ಇಳಿಕೆಯ ಆಶಯ ಸುಳ್ಳಾಗಿಸಿದೆ. ತೆರಿಗೆ ಭಾರ ಇಳಿಸುವ ಪ್ರಯತ್ನ ಮಾಡಿಲ್ಲ. ಶಿಕ್ಷಣ, ಆರೋಗ್ಯ, ಕೃಷಿ, ಉದ್ಯಮ ವಲಯಕ್ಕೆ ಯಾವುದೇ ದೊಡ್ಡಮಟ್ಟದ ಕೊಡುಗೆ ನೀಡಿಲ್ಲ ಎಂದಿದ್ದಾರೆ.

ಹಿಂದಿನ ಬಜೆಟ್ ನಂತೆ ಇದು ಜನ ಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸಿಲ್ಲ. ವಿಮೆ, ಆರೋಗ್ಯ, ಆದಾಯ ತೆರಿಗೆ ವಿಷಯದಲ್ಲಿ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಲಾಗಿದೆ ಹೊರತು ಒಳ ಮರ್ಮವು ಆಘಾತ ಉಂಟು ಮಾಡಿದೆ. ಡಾಲರ್ ಎದುರು ಕುಸಿದಿರುವ ರೂಪಾಯಿ ಮೌಲ್ಯ ಮೇಲಕ್ಕೆ ಎತ್ತುವ ಹಾಗೂ ದೇಶದ ಆರ್ಥಿಕತೆ ಚೇತರಿಸಿಕೊಳ್ಳುವ ಒಂದೇ ಒಂದು ನಿರ್ಧಾರ, ಯೋಜನೆ ಇಲ್ಲ. ಒಟ್ಟಾರೆ ಜನರ ಆಶೋತ್ತರಗಳಿಗೆ ಕೊಡಲಿ ಪೆಟ್ಟು ಬಿದ್ದಿದೆ ಎಂದು ತಿಳಿಸಿದ್ದಾರೆ.

# ರಾಂಪ್ರಸಾದ್ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬೆಂಗಳೂರನಲ್ಲಿನ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ನೂತನ ಆಡಳಿತ ಮಂಡಳಿಗೆ ನಿನ್ನೆ ನಡೆದ ಚುನಾವಣೆಯಲ್ಲಿ ಪ್ರೊಡ್ಯೂಸರ್ಸ್ ಸೆಕ್ಟರ್ ಕೌನ್ಸಿಲ್ ಸದಸ್ಯರಾಗಿ ನಗರದ ಕಾಂಗ್ರೆಸ್ ಮುಖಂಡ ಬಿ.ರಾಂಪ್ರಸಾದ್ ಆಯ್ಕೆಯಾಗಿದ್ದಾರೆ.

ರಾಜ್ಯದ ಚಲನ ಚಿತ್ರ ಮಂಡಳಿಗೆ ಬಳ್ಳಾರಿಯಿಂದ ಆಯ್ಕೆಯಾದ ಪ್ರಥಮ ವ್ಯಕ್ತಿ ಇವರಾಗಿದ್ದಾರೆ.

ಸೆಕ್ಟರ್ ಕೌನ್ಸಿಲ್ ಪ್ರೊಡ್ಯೂಸರ್ಸ್ ವಿಭಾಗದ 10 ಸ್ಥಾನಗಳಿಗೆ ಚುನಾವಣೆ ನಡೆದಿತ್ತು. 19 ಜನ ಸ್ಪರ್ಧಾ ಕಣದಲ್ಲಿದ್ದರು. 536 ಜನ ಮತ ಚಲಾಯಿಸಿದ್ದರು ಅದರಲ್ಲಿ 303 ಮತಗಳನ್ನು ಪಡೆದು ಆಯ್ಕೆಯಾಗಿದ್ದಾರೆ.

# ದಿನ್ನಿಯವರ ಮಧು ಬಟ್ಟಲಿನ ಗುಟುಕು ಕೃತಿಗೆ ದತ್ತಿ ಪ್ರಶಸ್ತಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:



ಕನ್ನಡ ಸಾಹಿತ್ಯ ಪರಿಷತ್ತು ನೀಡುವ 2024 ನೇ ಸಾಲಿನ 'ಪಂಪಮ್ಮ ಶರಣೇಗೌಡ ವಿರುಪಾಪುರ ದತ್ತಿ ' ಪ್ರಶಸ್ತಿಗೆ ದಸ್ತಗೀರಸಾಬ್ ದಿನ್ನಿ ಅವರ 'ಮಧು ಬಟ್ಟಲಿನ ಗುಟುಕು ' ಗಜಲ್ ಸಂಕಲನ ಆಯ್ಕೆಯಾಗಿದೆ.

ದಿನ್ನಿಯವರು ಸರಳಾದೇವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಸಹ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಸಾಹಿತಿ ಕೆ.ಮರುಳಸಿದ್ದಪ್ಪ ಅವರ ಅಧ್ಯಕ್ಷತೆಯ ಸಮಿತಿ ವಿವಿಧ ಪ್ರಕಾರಗಳಲ್ಲಿ ಕೃತಿಗಳನ್ನು ಆಯ್ಕೆ ಮಾಡಿದೆ. ಶೀಘ್ರದಲ್ಲೇ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ಪರಿಷತ್ತಿನ

ಆಡಳಿತಾಧಿಕಾರಿ ಕೆ.ಎಂ. ಗಾಯತ್ರಿ ತಿಳಿಸಿದ್ದಾರೆ.

## ಪತ್ರಕರ್ತ ಕುಟುಂಬದವರಿಗೆ ನೇತ್ರ ತಪಾಸಣಾ ಶಿಬಿರ
# ಪತ್ರಕರ್ತರಿಂದ ನೇತ್ರದಾನದ ವಾಗ್ದಾನ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ:

ಪ್ರತಿಷ್ಠಿತ ಎಂ.ಎಂ.ಜೋಶಿ ಕಣ್ಣಿನ ಆಸ್ಪತ್ರೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಆಶ್ರಯದಲ್ಲಿ ಪತ್ರಿಕಾ ಭವನದಲ್ಲಿ ಜಿಲ್ಲೆಯ ಪತ್ರಕರ್ತರು ಹಾಗೂ ಅವರ ಕುಟುಂಬದ ಸದಸ್ಯರಿಗೆ ಏರ್ಪಡಿಸಿದ್ದ ಉಚಿತ ನೇತ್ರತಪಾಸಣಾ ಶಿಬಿರದಲ್ಲಿ ಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಹೇಶ ಅಂಗಡಿ ಹಾಗೂ ಅಮೀನಗಡದ ಪತ್ರಕರ್ತ ನರಸಿಂಹಮೂರ್ತಿ ಮರಣಾನಂತರ ತಮ್ಮ ನೇತ್ರಗಳನ್ನು ದಾನ ಮಾಡುವುದಾಗಿ ವಾಗ್ದಾನ ಮಾಡಿದರು.

ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹೇಶ ಅಂಗಡಿ, ನೇತ್ರದಾನ ಮಹಾದಾನವಾಗಿದ್ದು ನಮ್ಮ ಮರಣಾನಂತರ ಮತ್ತೊಬ್ಬರಿಗೆ ನಮ್ಮ ಕಣ್ಣುಗಳು ಬೆಳಕಾಗಲಿ ಎಂಬ ಉದ್ದೇಶದಿಂದ ತಾವು ನೇತ್ರದಾನ ಮಾಡುವುದಾಗಿ ಹೇಳಿದರು.

ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆಯ ಡಾ.ಸಂಜೀವ್ ಕುಲಕರ್ಣಿ ಮಾತನಾಡಿ, ಪತ್ರಕರ್ತರು ಸಮಾಜಕ್ಕೆ ನೀಡುವ ಸೇವೆಯನ್ನು ಗುರುತಿಸಿ ಬೆಂಬಲಿಸುವ ಉದ್ದೇಶದಿಂದ ಕಣ್ಣಿನ ತಪಾಸಣಾ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. ಶಿಬಿರದಲ್ಲಿ ತಪಾಸಣೆ ಮಾಡಿಸಿಕೊಂಡವರಿಗೆ ಸರ್ಚ್ ಸಂಸ್ಥೆಯ ಮೂಲಕ ಉಚಿತವಾಗಿ ಕನ್ನಡಕ ವಿತರಿಸಲಾಗುತ್ತದೆ ಎಂದು ಹೇಳಿದರು.

ಟಿವಿ, ಕಂಪ್ಯೂಟರ್ ಹಾಗೂ ಮೊಬೈಲ್ ಬಳಸುವವರಿಗೆ ವಿಶೇಷ ರಿಯಾಯಿತಿ ದರದಲ್ಲಿ ಒಳ್ಳೆಯ ಲೆನ್ಸ್‌ಗಳನ್ನು ಹೊಂದಿದ ಕನ್ನಡಕ ಒದಗಿಸಲಾಗುವುದು. ಪತ್ರಕರ್ತರು ಹಾಗೂ ಅವರ ಕುಟುಂಬದವರಿಗೆ ಅಗತ್ಯವಿದ್ದಲ್ಲಿ ಶಸ್ತ್ರಚಿಕಿತ್ಸೆಗೆ ಎಂ.ಎಂ. ಜೋಶಿ ಆಸ್ಪತ್ರೆಯ ಸಂಪೂರ್ಣ ಸೌಲಭ್ಯಗಳನ್ನು ಸಹಕಾರದೊಂದಿಗೆ ಒದಗಿಸಲಾಗುತ್ತದೆ ಎಂದರು.

ಸರ್ಚ್ ಸಂಸ್ಥೆಯ ವೆಂಕಟೇಶ್ ಮಾತನಾಡಿ, ಸರ್ಚ್ ಸಂಸ್ಥೆ ಕಳೆದ 30 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು, ಎಂ.ಎಂ. ಜೋಶಿ ಆಸ್ಪತ್ರೆಯ ಸಹಯೋಗದಲ್ಲಿ ಆರೋಗ್ಯ ತಪಾಸಣೆ ಶಿಬಿರಗಳನ್ನು ನಡೆಸುತ್ತಿದೆ ಎಂದು ಹೇಳಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಗದೀಶ ಗಾಣಿಗೇರ ಸ್ವಾಗತಿಸಿ, ವಂದಿಸಿದರು.

# ವ್ಯಕ್ತಿ ಗೌರವ ಎಲ್ಲರಿಗೂ ಮನ್ನಣೆಯಾಗಲಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಪ್ರತಿಯೊಬ್ಬರ ವ್ಯಕ್ತಿ ಗೌರವಕ್ಕಾಗಿ ಶ್ರಮಿಸಿದ ಬಾಬಾ ಸಾಹೇಬ್ ಡಾ.ಬಿ.ಆರ್ ಅಂಬೇಡ್ಕರರು ವಿಶ್ವ ಗುರುವಾಗಿದ್ದಾರೆ ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ತಿಪ್ಪೇರುದ್ರಪ್ಪ ಜೆ ಅವರು ಹೇಳಿದರು.

ವಿವಿಯ ಡಾ.ಬಿ.ಆರ್ ಅಂಬೇಡ್ಕರ್ ಸಭಾಂಗಣದಲ್ಲಿ ವಿವಿಯ ಡಾ.ಬಿ.ಆರ್ ಅಂಬೇಡ್ಕರ್ ತರಬೇತಿ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ ಹಾಗೂ ಮೈಸೂರಿನ ಸಮಾಜ ಕಾರ್ಯಕರ್ತರ ಕ್ರಿಯಾ ಸಂಶೋಧನೆ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ್ದ 'ಅಂಬೇಡ್ಕರ ಅವರ ಬರಹಗಳು ಮತ್ತು ಭಾಷಣಗಳ ಮೂಲಕ ಭಾರತೀಯರನ್ನು ಅರ್ಥಮಾಡಿಕೊಳ್ಳುವಿಕೆ' ಎಂಬು ಮೂರು ದಿನಗಳ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಪ್ರಸ್ತುತವಾಗಿ ಅಂಬೇಡ್ಕರ ಅವರ ಕುರಿತು ಚಿಂತನೆಗಳು ಬಹಳ ಕ್ರಿಯಾಶೀಲವಾಗಿವೆ. ಅಂಬೇಡ್ಕರ್ ಅವರು ದಲಿತರಿಗೆ ಮಾತ್ರ ಸೀಮಿತವಾಗಿಲ್ಲ, ಅವರನ್ನು ಮೀಸಲಾತಿಗಾಗಿ ಗುರುತಿಸದೇ ವೈಚಾರಿಕ ಚಿಂತನೆಗಳನ್ನು ಅಳವಡಿಸಿಕೊಳ್ಳುವ ಮೂಲಕ ಜಾತಿ ತಾರತಮ್ಯ ನಿರ್ಮೂಲನೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ಹೈಕೋರ್ಟ್ ವಕೀಲರಾದ ಮೋಹನ್ ಕುಮಾರ ಅವರು ಮಾತನಾಡಿ, ಸಮಾಜದಲ್ಲಿನ ಕೆಲವು ಸಮುದಾಯಗಳು ಜಾತಿ ತಾರತಮ್ಯವನ್ನು ತಮ್ಮ ಹಕ್ಕನ್ನಾಗಿ ಪರಿಗಣಿಸಿಕೊಂಡಂತಾಗಿದೆ. ಜಾತಿ ತಾರತಮ್ಯವನ್ನು ಹೋಗಲಾಡಿಸಲು ವಿದ್ಯಾರ್ಥಿಗಳಲ್ಲಿನ ಕೀಳರಿಮೆ ಹೋಗಲಾಡಿಸಿ, ಅವರಲ್ಲಿ ವಿಶ್ವಾಸ ಮೂಡಿಸುವ ಕಾರ್ಯವಾಗಬೇಕು. ಕಾರ್ಯಗಾರದಲ್ಲಿ ವಿದ್ಯಾರ್ಥಿಗಳು ಮುಕ್ತವಾಗಿ ಭಾಗವಹಿಸುವುದರಿಂದ ತಾರತಮ್ಯದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಹೇಳಿದರು.

ಕೇಂದ್ರೀಯ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಶ್ರೀನಿವಾಸ ಡಿ.ಮನಗಳ್ಳಿ ಅವರು ಮಾತನಾಡಿ, ದೇಶದ ಪರಿಸ್ಥಿತಿಯನ್ನು ಅವಲೋಕನ ಮಾಡುವ ಮೊದಲು ಅಂಬೇಡ್ಕರ್ ಅವರನ್ನು ಅರ್ಥಮಾಡಿಕೊಳ್ಳಬೇಕು. ಅವರ ಬರಹ ಮತ್ತು ಭಾಷಣಗಳು ಮಾನವ ಅಭಿವೃದ್ಧಿಯ ಕುರಿತಾಗಿವೆ. ವರ್ತಮಾನ, ಭವಿಷ್ಯದೆಡೆ ಸಾಗಲು ವೈಚಾರಿಕಗಳ ಕೃಷಿಯನ್ನು ಮಾಡಿದ್ದಾರೆ. ಅವುಗಳ ಮೂಲಕ ಸಾಮಾಜಿಕ ಪರಿವರ್ತನೆಗೆ ಶ್ರಮಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಸಂಯೋಜಕರು ಮತ್ತು ಡಾ.ಬಿ.ಆರ್ ಅಂಬೇಡ್ಕರ ತರಬೇತಿ, ಸಂಶೋಧನೆ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕರಾದ ಪ್ರೊ.ಗೌರಿ ಮಾಣಿಕ್ ಮಾನಸ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿವಿಯಲ್ಲಿ ತರಬೇತಿ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರದ ಕಾರಣಿಭೂತರಾದ ಪ್ರೊ.ಸೋಮಶೇಖರ್ ಅವರನ್ನು ನೆನೆದರು.

ಕಾರ್ಯಾಗಾರದಲ್ಲಿ ಪ್ರೊ. ಮೇಧಾವಿನಿ ಕಟ್ಟಿ ವೇದಿಕೆಯಲ್ಲಿದ್ದರು. ವಿಶ್ವವಿದ್ಯಾಲಯದ ವಿವಿಧ ನಿಕಾಯಗಳ ಡೀನರು, ಮುಖ್ಯಸ್ಥರುಗಳು, ಬೋಧಕ–ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು ಸೇರಿದಂತೆ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಫೆ.03 ರಂದು ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ವ್ಯಾಪ್ತಿಯ ಜಿಲ್ಲಾ ಕೋರ್ಟ್ ಸಂಕೀರ್ಣದ ವಿದ್ಯುತ್ ಲೈನಿನ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಫೆ.03 ರಂದು ಬೆಳಗ್ಗೆ 09 ರಿಂದ ಸಂಜೆ 05 ಗಂಟೆಯವರೆಗೆ ಎಫ್–6 ವ್ಯಾಪ್ತಿಯ ನಗರದ ತಾಳೂರು ರಸ್ತೆ, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್ ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರಸ್ತೆ, ರಾಮ ನಗರ, ಅವಂಬಾವಿ, ಜಿಲ್ಲಾಕೋರ್ಟ್ ಸಂಕೀರ್ಣ ಪ್ರದೇಶಗಳಲ್ಲಿ

ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರಂತರ ಓದು ಸಾಧನೆಗೆ ಪೂರಕ-ಭಗವತಿ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ:

ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಹಂತದಲ್ಲಿ ಸತತ ಅಧ್ಯಯನಶೀಲರಾದರೆ ಅದು ಅವರ ಸಾಧನೆಗೆ ಪೂರಕವಾಗುತ್ತದೆ ಎಂದು ಶಿರೂರ ಪಟ್ಟಣದ ಟಿ.ಎಂ.ಭಗವತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಲ್ಲೇಶಪ್ಪ ಭಗವತಿ ಹೇಳಿದರು.

ಸಂಸ್ಥೆಯಲ್ಲಿ ಅಧ್ಯಯನ ಮಾಡಿ ಭಾರತೀಯ ನೌಕಾದಳ ಸೇವೆಗೆ ಆಯ್ಕೆಯಾಗಿರುವ ಚಿನ್ನಪ್ಪ ಆಡಿನ ಮತ್ತು ಸಿಆರ್ ಪಿಎಫ್ ಸೇರಿರುವ ಪರುಶುರಾಮ ಚಿತ್ತರಗಿ ಅವರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಿ ಮಾತನಾಡಿದ ಅವರು, ವಿದ್ಯಾರ್ಥಿ ಹಂತದಲ್ಲಿಯೇ ಶ್ರಮವಹಿಸಿ ಅಧ್ಯಯನ ಮಾಡಿದರೆ ಕೆಲಸದ ಅವಕಾಶಗಳು ದೊರೆಯುತ್ತವೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ಶ್ರೀಶೈಲ ಕರಿಶಂಕರಿ, ಅಂಗಸಂಸ್ಥೆಗಳ ಪ್ರಾಚಾರ್ಯರಾದ ಎಸ್.ಎಸ್. ಮುಳ್ಳೂರ, ಸಂಗಮೇಶ ಕೆಂಜೋಡಿ, ಶ್ರೀಧರ ಪತ್ತಾರ, ಐ.ಸಿ.ಹೊಸೂರ, ಶಕುಂತಲಾ ಕರಿಶಂಕರಿ, ಮಹೇಶ ಪಾಟೀಲ ಇದ್ದರು.

# ಮಕ್ಕಳ ಹಬ್ಬದಲ್ಲಿ ಗಮನ ಸೆಳೆದ ಬಾಲ್ಯ ವಿವಾಹ ಮುಕ್ತಿ ರಥ ವಾಹನ



• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಎಡೆದೊರೆನಾಡು ರಾಯಚೂರು ಜಿಲ್ಲಾ ಉತ್ಸವ–2026 ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಫೆ.2ರಂದು ಆಯೋಜಿಸಿದ್ದ ಮಕ್ಕಳ ಹಬ್ಬ ಕಾರ್ಯಕ್ರಮದಲ್ಲಿ ಬಾಲ್ಯ ವಿವಾಹ ಮುಕ್ತಿ ರಥ ವಾಹನ ಗಮನ ಸೆಳೆಯಿತು.

ನಾವೆಲ್ಲರೂ ಒಟ್ಟಾಗಿ ಬಾಲ್ಯ ವಿವಾಹ ಪದ್ಧತಿಯನ್ನು ನಿರ್ಮೂಲನೆ ಮಾಡೋಣ. ಎಲ್ಲಾ ಮಕ್ಕಳು ತಮ್ಮ ಹಕ್ಕುಗಳು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಕೆಲಸ ಮಾಡೋಣ ಎನ್ನುವ ಸಂದೇಶ ಹೊತ್ತ ಜಾಗೃತಿ ವಾಹನವು ಜಿಲ್ಲಾ ಕ್ರೀಡಾಂಗಣದ ವಿವಿಧೆಡೆ ಸಂಚರಿಸಿತು.

ದೊಡ್ಡ ಸಂಖ್ಯೆಯಲ್ಲಿ ಮಕ್ಕಳು ಸೇರಿರುವ ಕಾರ್ಯಕ್ರಮದಲ್ಲಿ ಸಂಚಾರಿ ಜಾಗೃತಿ ರಥ ವಾಹನದ ಮೂಲಕ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಮಕ್ಕಳಿಗೆ ಜಾಗೃತಿ ಮೂಡಿಸಲಾಯಿತು. ಮಕ್ಕಳಿಗೆ ಸುರಕ್ಷಿತ ಸ್ಪರ್ಶ, ಅಸುರಕ್ಷಿತ ಸ್ಪರ್ಶ, ಮಕ್ಕಳ ಸಹಾಯವಾಣಿ ಸಂಖ್ಯೆ: 1098 ಹಾಗೂ ಪೋಕ್ಸೋ ಕಾಯ್ದೆ ಕುರಿತು ಕರಪತ್ರ ಹಂಚುವ ಮೂಲಕ ಹಾಗೂ ವೇದಿಕೆಯ ಮುಂಭಾಗದಲ್ಲಿ ಸೆಲ್ಫಿ ಸ್ಟಾಂಡ್ ಇಟ್ಟು ಜಾಗೃತಿ ಮೂಡಿಸಲಾಯಿತು.

ಬಾಲ್ಯ ವಿವಾಹ ನಿಷೇಧ ಕುರಿತು ಆಡಿಯೋ ಜಿಂಗಲ್ಸ್ ಮೂಲಕವೂ ಜಾಗೃತಿ ಮೂಡಿಸಲಾಯಿತು.

ಈ ಜಾಗೃತಿ ವಾಹನಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಚಾಲನೆ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕುಮಾರ್ ಕಾಂದೂ, ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮಹಾಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ, ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷ ಈರಮ್ಮ ಹಾಗೂ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ರೇಷ್ಮೆ ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಇಲ್ಲಿನ ರೇಷ್ಮೆ ಇಲಾಖೆಯಿಂದ 2023–24 ಹಾಗೂ 2024–25ನೇ ಸಾಲಿನ ರೇಷ್ಮೆ ಕೃಷಿ ಪ್ರಶಸ್ತಿಗಾಗಿ ಉತ್ತಮ ಪ್ರಗತಿ ಸಾಧಿಸಿರುವ ಅರ್ಹ ರೇಷ್ಮೆ ಬೆಳೆಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರಶಸ್ತಿಗಾಗಿ ರೇಷ್ಮೆ ಬೆಳೆಗಾರರು ಕನಿಷ್ಠ 1.00 ಎಕರೆ ಹಿಪ್ಪುನೇರಳೆ ತೋಟ ಹಾಗೂ ಪ್ರತ್ಯೇಕ ಹುಳು ಸಾಕಾಣಿಕಾ ಮನೆ ಹೊಂದಿರಬೇಕು. 100 ಮೊಟ್ಟೆಗೆ ಸರಾಸರಿ ರೇಷ್ಮೆ ಗೂಡಿನ ಇಳುವರಿ 65 ಕೆ.ಜಿ. ಹಾಗೂ ಒಂದು ಎಕರೆಗೆ ರೇಷ್ಮೆ ಗೂಡಿನ ಉತ್ಪಾದನೆ 500 ಕೆ.ಜಿ.ಗಿಂತ ಕಡಿಮೆ ಇರಬಾರದು. ರೇಷ್ಮೆ ಬೆಳೆಗಾರರು ರೇಷ್ಮೆ ಪಾಸ್ ಬುಕ್, ರೇಷ್ಮೆ ಮೊಟ್ಟೆ ಅಥವಾ ಚಾಕಿ ಖರೀದಿಸಿರುವ ಬಗ್ಗೆ ಹಾಗೂ ರೇಷ್ಮೆ ಗೂಡು ಮಾರಾಟ ಮಾಡಿರುವ ಬಗ್ಗೆ ದಾಖಲಾತಿಗಳನ್ನು ಹೊಂದಿರಬೇಕು.

ರೇಷ್ಮೆ ಬೆಳೆಗಾರರು ಸ್ಥಳೀಯ ರೇಷ್ಮೆ ವಿಸ್ತರಣಾಧಿಕಾರಿಗಳು ಅಥವಾ ರೇಷ್ಮೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಿ ಅಗತ್ಯ ಮಾಹಿತಿಗಳನ್ನು ದಾಖಲಾತಿಗಳೊಂದಿಗೆ ಒದಗಿಸಿ ಅರ್ಜಿ ಪಡೆಯುವುದು. ಭರ್ತಿ ಮಾಡಿದ ಅರ್ಜಿಯನ್ನು ದಿನಾಂಕ 06–02–2026ರ ಒಳಗೆ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–220322ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ರೇಷ್ಮೆ ಇಲಾಖೆಯ ರೇಷ್ಮೆ ಕೃಷಿ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರದ ಬಜೆಟ್: ಸಮಸ್ಯೆಗೆ ಪರಿಹಾರ ಒದಗಿಸಿಲ್ಲ

**ಮಲ್ಲಮ್ಮ ನುಡಿ ವಾರ್ತೆ:** ಹಣಕಾಸು ಸಚಿವೆ ಶ್ರೀಮತಿ ನರ್ಮಲಾ ಸೀತಾರಾಮನ್ ಮಂಡಿಸಿದ ಕೇಂದ್ರ ಬಜೆಟ್ ಸಂಪೂರ್ಣ ಜನವಿರೋಧಿಯಾಗಿದೆ



ಎಂದು ಕೆಪಿಸಿಸಿ ಸಂಯೋಜಕ ಹಾಗೂ ಕಿಸಾನ್ ಘಟಕದ ರಾಜ್ಯ ಪ್ರಧಾನ ಕರ್ಯರ್ತಿ ರಾಜ ಮೈನುದ್ದಿನ್ ಎಂ. ಜಮಾದಾರ ದೋರನಳ್ಳಿ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಬಜೆಟ್ ನಲ್ಲಿ ಜನಸಾಮಾನ್ಯರ ನಿರೀಕ್ಷೆ ಪೂರೈಸುವಲ್ಲಿ ಸರ್ಕಾರ ವಿಫಲವಾಗಿದೆ. ಬಡವರು, ಮದ್ಯಮ ವರ್ಗದವರು, ರೈತರು, ಕರ್ಮಿಕರು ಯುವಜನತೆಗೆ ಈ ಬಜೆಟ್‌ನಿಂದ ಯಾವುದೇ ಲಾಭ ಇಲ್ಲ, ಬೆಲೆ ಏರಿಕೆ ತಡೆಯುವಲ್ಲಿ ನಿರುದ್ಯೋಗ ತಡೆಯಲು ಯಾವುದೇ ಪರಿಹಾರವನ್ನು ತೋರಿಸಿಲ್ಲ. ಬಜೆಟ್ ನಲ್ಲಿ ಪಾರರ್ಕತೆಯ ಕೊರತೆ ಇದೆ. ಗ್ರಾಮೀಣರ, ಅನ್ನದಾತರ ಕಲ್ಯಾಣವನ್ನು ಪರಿಗಣನೆಗೆ ತೆಗೆದುಕೊಂಡಿಲ್ಲ.

ಕೃಷಿ ನೀರಾವರಿ ಕ್ಷೇತ್ರಗಳಲ್ಲಿ ಒತ್ತುಕೊಡುವ ಕೆಲಸವನ್ನೇ ಬಜೆಟ್ ನಲ್ಲಿ ಮಾಡಿಲ್ಲ. ಹೈಸ್ಪೀಡ್ ರೈಲುಗಳಿಗೆ ಶೇ. ಕೇಂದ್ರ ರಾಜ್ಯದ 50:50 ರ ಅನುದಾನ ಪ್ರಸ್ತಾವನೆ ನೀಡಲಾಗಿದೆ. ಆದರೆ ಇದು 90:10 ಮಾಡಬೇಕಿತ್ತು ಎಂದು ಅವರು ಹೇಳಿದ್ದಾರೆ. ಒಟ್ಟಾರೆ ಈ ಬಜೆಟ್ ಬಡವರು ದೀನ ದಲಿತರ ವಿರೋಧಿಯಾಗಿದೆ, ದೇಶದ ರ್ಥಿಕ ಸಾಮಾಜಿಕ ಸಮಸ್ಯೆಗಳಿಗೆ ಪರಿಹಾರ ಒದಗಿಸಿಲ್ಲ ಎಂದು ಅವರು ಟೀಕಿಸಿದ್ದಾರೆ.




ಸಹಾಯಕ ಕಾರ್ಯನಿರ್ವಾಹಕ ಅಭಿಯಂತರು ಲೋಕೋಪಯೋಗಿ ಇಲಾಖೆ ಯಾದಗಿರಿ ಇವರು ನಮ್ಮ ಮಲ್ಲಮ್ಮ ನುಡಿ ಪತ್ರಿಕೆಯನ್ನು ಸ್ವೀಕರಿಸಿ ಒಳ್ಳೆಯ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದರು. ಈ ಸಂದರ್ಭದಲ್ಲಿ ಮಲ್ಲಮ್ಮ ನುಡಿ ಪತ್ರಿಕೆಯ ಜಿಲ್ಲಾ ವರದಿಗಾರ ಡಿ.ಕೆ.ದೇವಿಂದ್ರ ಹಾಗೂ ಗುರುಮಠಕಲ್ ತಾಲೂಕ ವರದಿಗಾರ ಜಗದೀಶ್ ಬೂಮ ಕಚೇರಿಯ ಆಡಳಿತ ಸಿಬ್ಬಂದಿಯವರು ಇದ್ದರು.



ಐದು ದಿನಗಳ ಕಾಲ ನಡೆದ ಕನಕಪುರದ ಉತ್ಸವ ಕನಕೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಮ್ಯೂಸಿಕಲ್ ನೈಟ್ ಸಂದರ್ಭದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಹಾಗೂ ಬಮೂಲ್ ಅಧ್ಯಕ್ಷ ಡಿ ಕೆ ಸುರೇಶ್ ಅವರು ಖ್ಯಾತ ಚಿತ್ರನಟ ಉಪೇಂದ್ರ, ಮತ್ತಿತರರನ್ನು ಸನ್ಮಾನಿಸಿದರು.

# ಹಿಂದೂ ಧರ್ಮ ರಕ್ಷಣೆಗಾಗಿ ಜಾಗೃತಿ ಹಿಂದೂ ಸಮಾಜೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಭಾರತದಲ್ಲಿ ನಮ್ಮ ಶ್ರೇಷ್ಠ ಸಂಸ್ಕೃತಿ, ಸನಾತನ ಹಿಂದು ಧರ್ಮ ಹಾಗೂ ಸಂಪ್ರದಾಯ ಪರಂಪರೆಯನ್ನು ಕೆಲವು ದೇಶದ್ರೋಹಿಗಳು ತುಳಿಯುವ ಪ್ರಯತ್ನ ನಿರಂತರವಾಗಿದೆ.

ಮುಂದಿನ ದಿನಗಳಲ್ಲಿ ಬಹುಸಂಖ್ಯಾತ ಹಿಂದುಗಳು ಅಲ್ಪಸಂಖ್ಯಾತರಾಗಬಹುದು ನಾವು ಹಿಂದು ಎಂದು ಹೇಳಿಕೊಳ್ಳಲು ಆಗದ ಪರಿಸ್ಥಿತಿ ಬರಬಹುದು, ಹಿಂದೂ ಧರ್ಮ ರಕ್ಷಣೆಗಾಗಿ ಹಿಂದೂಗಳ ಒಗ್ಗಟ್ಟು ಪ್ರದರ್ಶನ ಅಗತ್ಯವಿದೆ ಎಂದು ಬಿಜೆಪಿ ಮುಖಂಡ ಸಮಾಜಸೇವಕ ಮಂಡ್ಯ ಮಲ್ಲೇಶ್ ಹೇಳಿದರು.



ತಿಗಳರಪಾಳ್ಯ ಗಣೇಶ ದೇವಸ್ಥಾನದಲ್ಲಿ ಹಿಂದೂ ರಕ್ಷಕರು ಪೂಜೆ ಸಲ್ಲಿಸಿ ಸಾವಿರಾರು ಸಂಖ್ಯೆಯಲ್ಲಿ ತಿಗಳರ ಪಾಳ್ಯ ರಸ್ತೆಯಲ್ಲಿ ಶೋಭಾ ಯಾತ್ರೆ ಯಲ್ಲಿ ಪಾಲ್ಗೊಂಡು ಬಾಲಾಜಿನಗರದ ಮೈದಾನದಲ್ಲಿ ಬೃಹತ್ ಹಿಂದೂ ಸಮಾಜೋತ್ಸವ ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮತಾನಾಡಿದರು. ಹಾಗೂ ಸಮಾರಂಭದಲ್ಲಿ ಅನ್ನ ಪ್ರಸಾದ ಕೂಡ ಏರ್ಪಡಿಸಿದ್ದರು.

ಈ ಕಾರ್ಯಕ್ರಮದಲ್ಲಿ ವೇದಿಕೆ ದಿವ್ಯ ಸಾನಿಧ್ಯ ಡಾ ಸಿ ಎನ್ ಕೃಷ್ಣ ಗುರೂಜಿ ಸ್ವಾಮೀಜಿ, ಸಾಮಾಜಿಕ ಕಾರ್ಯಕರ್ತ ಶ್ರೀ ಮುರಳಿ, ಅಂಗಡಿ ಮಂಜಣ್ಣ, ಮೂರ್ತಿ, ಸಿದ್ದು, ರಾಘು, ರವಿ, ನಂಜಪ್ಪ, ಡಿ ಗ್ರೂಪ್ ಅನಂತ, ಹರೀಶ್, ದಿಲೀಪ್, ದೀಪು, ಸಂಜಯ್ ಜೈನ್, ಸೇರಿದಂತೆ ಜೈನ್ ಸಮುದಾಯದವರು, ಆರ್ ಎಸ್ ಎಸ್ ಕಾರ್ಯಕರ್ತರು ಸೇರಿದಂತೆ ಸಾವಿರಾರು ಹಿಂದೂ ಸಮಾಜದ ಕಾರ್ಯಕರ್ತರುಗಳು ಮಹಿಳಾ ಮುಖಂಡರು, ಪಾಲ್ಗೊಂಡಿದ್ದರು.

## ಸಮಸ್ಯೆ, ಜೀವನಶೈಲಿ ಚಿತ್ರಿಸುವಲ್ಲಿ ಓಟಿಟಿ ಪಾತ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಓಟಿಟಿಗಳು ನಮ್ಮ ಜೀವನಕ್ಕೆ ಹತ್ತಿರವಾಗಿರುವ ಸಮಸ್ಯೆಗಳು ಮತ್ತು ಜೀವನಶೈಲಿಯನ್ನು ಚಿತ್ರಿಸುತ್ತಿವೆ. ಆ ಅರ್ಥದಲ್ಲಿ ಅವು ಬಹಳ ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಪದ್ಮಶ್ರೀ ಪುರಸ್ಕೃತ ಡಾ.ಗಿರೀಶ್ ಕಾಸರವಳ್ಳಿ ಅಭಿಪ್ರಾಯಪಟ್ಟಿದ್ದಾರೆ.




17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಿತ್ರೋತ್ಸವದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, '30 ವರ್ಷಗಳ ಹಿಂದೆ ಟೆಲಿವಿಷನ್ ಬೆಳವಣಿಗೆಯಿಂದ ಉಂಟಾದ ಒಳ್ಳೆಯ ಸಂಗತಿಯೆಂದರೆ, ಚಾಲ್ತಿಯಲ್ಲಿದ್ದ ಕೆಲವು ನಂಬಿಕೆಗಳನ್ನು ಪುಡಿ ಮಾಡಿದ್ದು. ಅದಕ್ಕೂ ಮೊದಲು ಒಬ್ಬ ನಟಿ ಸ್ಟಾರ್ ಆಗಬೇಕಾದರೆ ಆಕೆ ಎಷ್ಟೇ ಪ್ರತಿಭಾವಂತಳಾಗಿದ್ದರೂ, ಸುಂದರವಾಗಿರಬೇಕು ಎಂಬ ನಂಬಿಕೆ ಇತ್ತು. ಪ್ರತಿಭೆ ಎರಡನೇ ಸ್ಥಾನದಲ್ಲಿತ್ತು. ಅಂದರೆ ಕಲಾವಿದರನ್ನು ಅರ್ಥಮಾಡಿಕೊಳ್ಳಲು ಮಾರುಕಟ್ಟೆ ಆರ್ಥಿಕತೆಯ ತರ್ಕವನ್ನು ಬಳಸಲಾಗುತ್ತಿತ್ತು. ಆದರೆ, ಟಿವಿ ಬಂದ ನಂತರ ಪ್ರತಿಭೆ ಇರುವವರನ್ನು ನೇರವಾಗಿ ಸಾಮಾನ್ಯ ಜನರ ಮಧ್ಯದಿಂದಲೇ ಆಯ್ಕೆ ಮಾಡಲು ಆರಂಭಿಸಲಾಯಿತು. ಅವರು ಸುಂದರವಾಗಿ ಕಾಣಿಸಿಕೊಳ್ಳದೇ ಇರಬಹುದು, ಆದರೆ ಪ್ರತಿಭಾವಂತರಾಗಿದ್ದರು.

ಇದಕ್ಕೆ ಅತ್ಯುತ್ತಮ ಉದಾಹರಣೆ ಎಂದರೆ ಅದು ನಟಿ ಅನಿತಾ ಕನ್ವರ್ ಎಂದ ಕಾಸರವಳ್ಳಿ, ಅವರು ಒಂದು ಧಾರಾವಾಹಿಯನ್ನು ಸುಮಾರು ಎರಡು ವರ್ಷಗಳ ಕಾಲ ಯಶಸ್ವಿಯಾಗಿ ಮುನ್ನಡೆಸಿದರು. ಆದರೆ, ಸಿನಿಮಾರಂಗ ಅವರನ್ನು ಅಷ್ಟರ ಮಟ್ಟಿಗೆ ಸ್ವೀಕರಿಸಲಿಲ್ಲ. ಈ ರೀತಿಯ ಹಲವಾರು ಸೂಕ್ಷ್ಮ ಬದಲಾವಣೆಗಳು ಮತ್ತು ಹೊಸ ಅಸಮಾಧಾನಗಳು ಈಗ ನಡೆಯುತ್ತಿವೆ. ನನ್ನ ಅಭಿಪ್ರಾಯದಲ್ಲಿ ವೆಬ್ ಸೀರೀಸ್‌ಗಳು ಇದನ್ನು ಬಹಳ ಪರಿಣಾಮಕಾರಿಯಾಗಿ ಮಾಡುತ್ತಿವೆ. ಆ ನಿಟ್ಟಿನಲ್ಲಿ ನಾವು ಓಟಿಟಿಯೊಂದಿಗೆ ಹೆಜ್ಜೆ ಹಾಕಬೇಕು ಎಂದು ಹೇಳಿದರು.

ಪ್ರತಿ 20 ವರ್ಷಗಳಿಗೊಮ್ಮೆ ಸಿನಿಮಾದ ವ್ಯಾಕರಣ ಬದಲಾಗುತ್ತದೆ ಎಂದ ಅವರು, ಸಿನೆಮಾ ಒಂದು ಕಲೆ. ಅದು ಸುಮಾರು 130 ವರ್ಷಗಳಷ್ಟು ಹಳೆಯದು. ಆದರೆ, ಪ್ರತಿ 20 ವರ್ಷಕ್ಕೊಮ್ಮೆ ಚಲನಚಿತ್ರ ವ್ಯಾಕರಣದ ದೃಷ್ಟಿಕೋನ ಬದಲಾಗುತ್ತಿರುತ್ತದೆ. ಇಲ್ಲಿಯವರೆಗೂ ಕೆಲವು ಬಾರಿ ಈ ತರಹದ ಬದಲಾವಣೆಗಳಾಗುತ್ತಿರುತ್ತವೆ. ಆ ಬದಲಾವಣೆಯ ಹಿಂದೆ ರಾಜಕೀಯವಿದೆ. ಆ ಬದಲಾವಣೆಯ ಹಿಂದೆ ಒಂದು ಹೊಸ ಅಭಿವ್ಯಕ್ತಿ ವಿಧಾನ ಮೂಡಿಬರುತ್ತದೆ ಎಂದು ಹೇಳಿದರು.

## ಸಾಯಿಬಾಬಾ ಮಂದಿರಕ್ಕೆ ಭೇಟಿ, ಪೂಜೆ

• ಮಲ್ಲಮ್ಮ ನುಡಿ ಹುಣಸೂರು

ಕಾಂಗ್ರೆಸ್ ಸರ್ಕಾರದಲ್ಲಿ ಮೀಸಲಿಟ್ಟಿದ ಸ್ಥಾನವನ್ನೇ ತ್ಯಾಗ ಮಾಡಿದ ಮಾಜಿ ಶಾಸಕ ಎಚ್ ಪಿ ಮಂಜಣ್ಣ ರವರ ಬೆಂಬಲದಿಂದ ನನಗೆ ನಮ್ಮ ರಾಜ್ಯದ ನಿಗಮ ಮಂಡಳಿಗೆ ಸಮುದಾಯದಲ್ಲಿ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದ ತಾರೆ ಏಕೈಕ ವ್ಯಕ್ತಿ ಎಂದು ಕರ್ನಾಟಕ ರಾಜ್ಯ ಆರ್ಯವೈಶ್ಯ ಅಭಿವೃದ್ಧಿ ನಿಗಮ. ಮಂಡಳಿ ಅಧ್ಯಕ್ಷರಾದ ಕೆ ವಿ ರಾಮಪ್ರಸಾದ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ

ನಗರದ ಸಾಯಿಬಾಬಾ ಮಂದಿರಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ನಂತರ ಸುದ್ದಿಗಾರೊಂದಿಗಿ ಮಾತನಾಡಿ ಸರ್ಕಾರದಲ್ಲಿ ಮೀಸಲಿಟ್ಟ ಸ್ಥಾನವನ್ನೇ ಕಲ್ಪಿಸಿಕೊಟ್ಟ ಏಕೈಕ ವ್ಯಕ್ತಿ ಮಂಜಣ್ಣ ರವರನ್ನು ನಾನು ಎಂದೆಂದಿಗೂ ಮರೆಯಲಾರೆ ಸರ್ಕಾರದಲ್ಲಿ ಅಧಿಕಾರ ಸಿಗುತ್ತೆ ಅಂದರೆ ಯಾರು ಕೂಡ ಬಿಡಕ್ಕೆ ತಯಾರಿಲ್ಲ ಆದರೂ ಕೂಡ ನನ್ನನ್ನು ಗುರುತಿಸಿ ಈ ಸ್ಥಾನಕ್ಕೆ ಕಲ್ಪಿಸಿಕೊಟ್ಟ ಅವರಿಗೆ ನಾನು ಚಿರಋಣಿಯಾಗಿರುತ್ತೇನೆ ಮುಂದಿನ ದಿನಗಳಲ್ಲಿ ನಾವೆಲ್ಲ ಸೇರಿ ಸಮುದಾಯದ ಕೆಲಸಗಳ ಕಾರ್ಯಗಳನ್ನು ಒಗ್ಗಟ್ಟಾಗಿ ಅಭಿವೃದ್ಧಿ ಪಡಿಸೋಣ ಎಂದರು.



ಮಾಜಿ ಶಾಸಕ ಎಚ್ ಪಿ ಮಂಜಣ್ಣ ರವರಿಗೆ ವಿಶೇಷವಾಗಿ ಸರ್ಕಾರ ಮಟ್ಟದಲ್ಲಿ ನಿಗಮದ ಸ್ಥಾನಕ್ಕೆ ಮೀಸಲಿಟ್ಟಿದ್ದ ಸ್ಥಾನವನ್ನೇ ನನಗೆ ಅವಶ್ಯಕತೆ ಇಲ್ಲ ಅಂತ ಹೇಳಿ ಇನ್ನಿತರಿಗೆ ನಮ್ಮ ಸಮುದಾಯದಲ್ಲಿ ಅವಕಾಶ ಮಾಡಿಕೊಡ ಮಾಡಿಕೊಟ್ಟಿದ್ದಾರೆ ಹಾಗೂ ತಾಲೂಕಿನ ಜನತೆ ನನಗೆ ಮತ್ತೊಮ್ಮೆ ನನ್ನನ್ನು ಆಯ್ಕೆ ಮಾಡಿ ಕಳಿಸುತ್ತಾರೆ. ಅದರಿಂದ ನನಗೆ ಯಾವ ಅಧಿಕಾರ ಬೇಡ ಎಂದು ಹೇಳಿದ ಏಕೈಕ ವ್ಯಕ್ತಿ ಅಂದರೆ ಎಚ್ ಪಿ ಮಂಜಣ್ಣ ಅಂತ ಹೇಳಿದರು. ಆರ್ಯವೈಶ್ಯ ರಾಜ್ಯ ನಿಗಮ ಮಂಡಳಿಯ ಅಧ್ಯಕ್ಷರಾದ ಕೆ ವಿ ರಾಮಪ್ರಸಾದ್ ರವರನ್ನು ಆರ್ಯವೈಶ್ಯ ಸಮುದಾಯದ ಮುಖಂಡರ ವತಿಯಿಂದ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಮಹಾಸಭಾ ಅಧ್ಯಕ್ಷರಾದ ರವಿಶಂಕರ್ ಜಿಲ್ಲಾ ಸಹಕಾರಿ ಬ್ಯಾಂಕಿನ ಮಾಜಿ ನಿರ್ದೇಶಕರು ನಾಗಪ್ರಸಾದ್ ವಸಂಬ ಸಹಕಾರ ಸಂಘದ ಅಧ್ಯಕ್ಷರಾದ ರಾಜೇಶ್ವರಿ ಸದಸ್ಯರು ಸುನೀತ್ ಕಾರ್ಯದರ್ಶಿಯಾದ ಅಜಯ್ ಗುಪ್ತ ಹಾಗೂ ಇನ್ನಿತರ ಹಾಜರಿದ್ದರು.

# ಶ್ರೀ ವಿನಾಯಕ ಶಾಲೆಯಲ್ಲಿ ಮಕ್ಕಳ ಸಾಂಸ್ಕೃತಿಕ ಸಂಭ್ರಮ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ನಗರದ ಗೌರಿ ಅಂಗಳದಲ್ಲಿರುವ ಶ್ರೀ ವಿನಾಯಕ ಪಬ್ಲಿಕ್ ಸ್ಕೂಲ್ ನ 19ನೇ ಶಾಲಾ ವಾರ್ಷಿಕೋತ್ಸವ ಸಮಾರಂಭವು ಇತ್ತೀಚೆಗೆ ನಡೆಯಿತು. ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಗಣ್ಯರು ಉದ್ಘಾಟಿಸಿದರು.

ಇದೇ ವೇಳೆ ಮಾತನಾಡಿದ ಮಹಾಲಕ್ಷ್ಮಿ ಕಂದಾರಿ ಮಕ್ಕಳು ಓದಿನ ಜೊತೆಗೆ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕು, ಹಿರಿಯರಿಗೆ ಗೌರವಿಸುವುದನ್ನು ಕಲಿಯಬೇಕು. ಮೊಬೈಲ್ ಗೀಳಿನಿಂದ ಹೊರಬಂದು ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ಹರಿಸಿ, ವಾರ್ಷಿಕ ಸಮಾರಂಭವು ಮಕ್ಕಳ ಪ್ರತಿಭೆಗೆ ಸೂಕ್ತ ವೇದಿಕೆಯಾಗಿದೆ, ಹಿಂದುಳಿದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ವಿನಾಯಕ ಶಾಲೆಯು ಶ್ರಮಿಸುತ್ತಿದೆ ಎಂದರು.

ಇದೇ ವೇಳೆ ಪ್ರತಿಭಾನ್ವಿತ ಮಕ್ಕಳಿಗೆ ಮತ್ತು ವಿಶೇಷ ಆಹ್ವಾನಿತರಿಗೆ ಸನ್ಮಾನಿಸಿ ಗೌರವಿಸಲಾಯಿತು. ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳಾದ ನೃತ್ಯ, ನಾಟಕ, ಹಾಸ್ಯ ಗಮನ ಸೆಳೆದವು.

ಬೆಳಿಗ್ಗೆ ಸರಸ್ವತಿ ಪೂಜೆ ಮತ್ತು ಪಾಲಕರ ಆಟೋಟಗಳನ್ನು ಹಮ್ಮಿಕೊಳ್ಳಲಾಗಿತ್ತು. ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಬಸವರಾಜ ಶಹಾಪೂರ, ವಿರುಪಾಕ್ಷ ಗಂಗನಾಳ ಸಿದ್ದಪ್ಪ ಸಂಕಲಾಪುರ, ಕವಿತಾ ಬಸವರಾಜ ಗಾಳಿ ವಿಜಯಕುಮಾರ ಗುದಗಿ (ಉಪಾಧ್ಯಕ್ಷರು) ವಿರುಪಾಕ್ಷ ಗೌಡ್ರು ಪೊಲೀಸ್ ಪಾಟೀಲ ( ಕಾರ್ಯದರ್ಶಿ) ವಿರುಪಾಕ್ಷಪ್ಪ ಕೊಪ್ಪಳ, ಮುಖ್ಯ ಗುರುಗಳಾದ ಹೊಳಿಬಸಯ್ಯ ಪೊಲೀಸ್ ಪಾಟೀಲ ಶಿಕ್ಷಕರಾದ ಶೈಲಜಾ. ಅನಿತಾ, ಕವಿತಾ, ಚಾಂದಿನಿ, ಅಲ್ವಿಯಾ ತಾಜ್, ಮಂಜುಳಾ, ಲಕ್ಷ್ಮಿ, ಮಾರುತಿ, ಬಸವರಾಜ್ ಮತ್ತು ಶಿಕ್ಷಣ ಪ್ರೇಮಿಗಳು, ಪಾಲಕರು ಮುದ್ದು ಮಕ್ಕಳು ಉಪಸ್ಥಿತಿ ಇದ್ದರು.

## ಕೇಂದ್ರ ಬಜೆಟ್ ಪರ–ವಿರೋಧ



ಕೇಂದ್ರದ ಬಜೆಟ್ ರಾಜ್ಯಕ್ಕೆ ನಿರುಪಯುಕ್ತ, ಚುನಾವಣೆ ನಡೆಯುವ ರಾಜ್ಯಗಳ ಗಮನದಲ್ಲಿಟ್ಟುಕೊಂಡು ಬಜೆಟ್ ಮಂಡನೆಯಾಗಿದೆ. ಬಿಜೆಪಿಯವರು ಹೇಳಿಕೊಳ್ಳಲು ಮಾತ್ರ ಎರಡು ರೈಲು ಕೊಡುಗೆ, ಅದು ಬಿಟ್ಟರೆ ಕರ್ನಾಟಕ ರಾಜ್ಯ ಸಂಪೂರ್ಣ ಕಡೆಗಣನೆಯಾಗಿದೆ. –ಬಸವರಾಜ್ ಎಸ್ ಪಾಟೀಲ್
ನಿರ್ದೇಶಕರು ಡಿಸಿಸಿ ಬ್ಯಾಂಕ ಕಲಬುರಗಿ ಯಾದಗಿರಿ



ನಿನ್ನೆಯ ಬಜೆಟ್ ರಾಜ್ಯ ಸರಕಾರಕ್ಕೆ ಅನ್ಯಾಯ ಮಾಡಿದೆ ನಿರಾಶಾದಾಯಕ ಬಜೆಟ್ ಬಡವರ ಶಾಪ ತಟ್ಟುತ್ತೆ ಬೆಂಗಳೂರು ಮೆಟ್ರೋ ಸೇರಿದಂತೆ ರಾಜ್ಯ ಅಭಿವೃದ್ಧಿಗೆ ಒತ್ತು ಕೊಡಬೇಕಾಗಿತ್ತು ಅದು ಆಗಿಲ್ಲ.
–ಸಂಜೀವ್ ಕುಮಾರ ಚಂದಾಪುರ
ಪ್ರಧಾನ ಕಾರ್ಯದರ್ಶಿ ಬ್ಲಾಕ್ ಕಾಂಗ್ರೆಸ್ ಗುರುಮಠಕಲ್.



ರೈತರ ಬಡವರ ಪರವಾದ ಬಜೆಟ್ ಮುಂದಿನ ಭವಿಷ್ಯದ ಬಗ್ಗೆ ಮುಂದಾಲೋಚನೆ ಇಟ್ಟುಕೊಂಡಿರುವ ಬಜೆಟ್ ಜನಸಾಮಾನ್ಯರ ಪರವಾಗಿ ಬಜೆಟ್ ದೇಶದ ಜನತೆಗೆ ಈ ಬಜೆಟ್ ಖುಷಿ ತಂದಿದೆ.
–ಚಂದುಲಾಲ್ ಚೌಧರಿ
ಭಾಜಪ ಯಾದಗಿರಿ ಜಿಲ್ಲಾ ಕಾರ್ಯದರ್ಶಿ



ಮಾಧ್ಯಮ ವರ್ಗಕ್ಕೆ ಕಡಿಮೆ ಒತ್ತು ನೀಡಲಾಗಿದೆ. ಶೇರ್ ಮಾರುಕಟ್ಟೆಯಲ್ಲಿ ಟ್ರೇಡಿಂಗ್ ಮಾಡುವವರಿಗೆ ನಷ್ಟ, ಲಾಂಗ್ ಟರ್ಮ್ ಇನ್ವೆಸ್ಟ್‌ಮೆಂಟ್ ಮಾಡುವವರಿಗೆ ಅನುಕೂಲ. ತಂಬಾಕು ಉತ್ಪನ್ನ ನಿಷೇಧದಿಂದ ವ್ಯಾಪಾರಕ್ಕೆ ಪರಿಣಾಮ ಬೀಳಬಹುದು. ಮೇಡ್ ಇಂಡಿಯಾ ಗುರಿಯಿಂದ ಸರಾಸರಿಯಲ್ಲಿ ಬಜೆಟ್ ಚೆನ್ನಾಗಿದೆ.
–ಗುರುನಾಥ ತಲಾರಿ
ಗುರುಮಠಕಲ್‌ನ ಜಿಟಿ ಮಾರ್ಟ್ ಮಾಲೀಕರು



ಅಭಿವೃದ್ಧಿ ಪೂರಕವಾಗಿರುವ ಬಜೆಟ್ ರೈತ ಬಂಧು, ಆರೋಗ್ಯ ಸಿಂಧು, ಮೂಲಭೂತ ಸೌಕರ್ಯಕ್ಕೆ ಬಾರಿ ಒತ್ತು ನೀಡಲಾಗಿದೆ ಈ ಬಜೆಟ್ ಸಾರ್ವಜನಿಕರ ಹಿತಾಸಕ್ತಿ ದೃಷ್ಟಿಯಿಂದ ವಿಕಸಿತ ಭಾರತಕ್ಕೆ ಅಡಿಪಾಯವಾಗಲಿದೆ.
–ನರೇಂದ್ರ ರಾಥೋಡ್
ಹಿರಿಯ ಉದ್ಯಮಿದಾರರು ಗುರುಮಠಕಲ್



ಕೇಂದ್ರ ಸರಕಾರದಿಂದ ಮಂಡಿಸಿರುವ ಈ ಸಾಲಿನ ಬಜೆಟ್ ಸಮತೋಲನವಾಗಿದೆ, ಕರ್ನಾಟಕದ ಪಾಲಿಗೆ ಮಹತ್ವದ ಬಜೆಟ್ ಆಗಿದೆ. ಕೃಷಿ ವಲಯಕ್ಕೆ ಹೆಚ್ಚಿನ ಒತ್ತು ಸಮಾನವಾಗಿದೇ, ವಿಶೇಷವಾಗಿ ಜನ ಸಾಮಾನ್ಯರು, ಸ್ತ್ರೀ ಸಾಮಾನ್ಯರು ದಿನನಿತ್ಯ ಬಳಸುವ ಪದಾರ್ಥಗಳ ಬೆಲೆ ಬಗ್ಗೆ ಎಲ್ಲರ ಅಪೇಕ್ಷೆಯಂತೆ ಮೀರಿಸುವ ಬಜೆಟ್ ಆಗಿದೆ.
–ಅರವಿಂದ ಭುಳ್ಳಾ, ಉಪಾಧ್ಯಕ್ಷರು
ಬಿಜೆಪಿ ಯುವ ಮೋರ್ಚಾ ಬೀದರ ದಕ್ಷಿಣ



ರಾಜ್ಯಗಳ ತೆರಿಗೆ ಪಾಲಿನ ಬಗ್ಗೆ ಕೂಡಾ ಯಾವುದೇ ಸ್ಪಷ್ಟತೆ ಕೊಟ್ಟಿಲ್ಲ. ರಾಜ್ಯಕ್ಕೆ ಯಾವುದೇ ವಿಶೇ? ಯೋಜನೆ ಕೊಟ್ಟಿಲ್ಲ. ದೇಶದ ಜನರ ನಿರೀಕ್ಷೆಗೆ ವಿರುದ್ಧವಾಗಿ ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್ ಮಂಡಿಸಿದ್ದಾರೆ ಕರ್ನಾಟಕದ ಪಾಲಿಗೆ ನಿರಾಶದಾಯಕ ಬಜೆಟ್ ಆಗಿದೆ. ಕೃಷಿ ವಲಯಕ್ಕೆ ಹೆಚ್ಚಿನ ಒತ್ತು ಸಿಕ್ಕಿಲ್ಲ.
–ಚಂದ್ರಶೇಖರ ಚನ್ನಶೆಟ್ಟಿ
ಬ್ಲಾಕ್ ಕಾಂಗ್ರೆಸ್ ಕಮಿಟಿ ಅಧ್ಯಕ್ಷರು, ಬೀದರ್ ದಕ್ಷಿಣ ಕ್ಷೇತ್ರ



ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಸಮರ್ಥ ನೇತೃತ್ವ ಮತ್ತು ವಿಕಸಿತ ವಿಶ್ವಗುರು ಭಾರತ ನಿರ್ಮಾಣದ ಅವರ ದೂರದೃಷ್ಟಿತ್ವದಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ ಅವರು ಮಂಡಿಸಿದ ಬಜೆಟ ಉದ್ಯಮದಾರಿಗೆ ಅನುಕುಲವಾಗಿದೆ ಎಂದು ಹೇಳಿದ್ದಾರೆ.
–ಲೋಕೇಶ್ ಎಂ ಮರ್ಜಾಪುರ
ಸಂಗೊಳ್ಳಿ ರಾಯಣ್ಣ ಯುವ ಘರ್ಜನೆ ಬೀದರ ಜಿಲ್ಲಾಧ್ಯಕ್ಷರು



ಕೇಂದ್ರ ಸರ್ಕಾರದ ಬಜೆಟ್ ಬಡವರ, ದಿನದಲಿತರ ವಿರೋಧಿಯಾಗಿದ್ದು, ಅರ್ಥ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶ್ರೀಮಂತರ ಪರವಾದ ಬಜೆಟ್ ಮಂಡಿಸಿದ್ದಾರೆ. ವಿಶೇಷವಾಗಿ ಕರ್ನಾಟಕ, ಅದರಲ್ಲೂ ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಅನುದಾನ ನೀಡಿ ಅಭಿವೃದ್ಧಿಗೆ ಒತ್ತು ನೀಡಬೇಕಿತ್ತು.
–ಕೃಷ್ಣಾ ದಾಸನಕೇರಿ
ಕಾಂಗ್ರೇಸ್ ಪಕ್ಷದ ಯುವ ಮುಖಂಡರು, ಯಾದಗಿರಿ



ಡಿಜಿಟಲ್ ಮೂಲಸೌಕರ್ಯ ಎಂಬ ಸರ್ಕಾರದವಾದವು ಮತ್ತೊಂದು ಭ್ರಮೆಯಾಗಿದೆ. ಉತ್ತಮ ಕೊಠಡಿಗಳು, ವಿದ್ಯುತ್ ಸೌಲಭ್ಯವೇ ಮತ್ತು ಮೂಲಭೂತ ಸೌಕರ್ಯಗಳೇ ಇಲ್ಲದ ಗ್ರಾಮೀಣ ಭಾರತದ ಲಕ್ಷಾಂತರ ವಿದ್ಯಾರ್ಥಿಗಳ ವಾಸ್ತವವನ್ನು ಇದು ನಿರ್ಲಕ್ಷಿಸಿದೆ.
–ಶಿಲ್ಪಾ ಬಿ ಕೆ, AIDSO ಜಿಲ್ಲಾ ಸಂಚಾಲಕಿ.



ಜನವಿರೋಧಿ ಬಜೆಟ್ ಕೇಂದ್ರ ಸರ್ಕಾರದ ಬಜೆಟ್ ಬಡವರ, ದಿನದಲಿತರ ವಿರೋಧಿಯಾಗಿದ್ದು, ಕರ್ನಾಟಕ ಮತ್ತು ಜನರ ಯೋಗ ಕ್ಷೇಮ ಮತ್ತು ಅಭಿವೃದ್ಧಿಯ ಪರ ಯಾವುದೇ ಬಜೆಟ್ನಲ್ಲಿ ಮಂಡನೆ ಮಾಡೋದಿಲ್ಲ ಇದು ರೈತ ವಿರೋಧಿ, ಹಿಂದುಳಿದ ವರ್ಗಗಳ ಕಲ್ಯಾಣ ಬಯಸದೆ ಉಳ್ಳವರ ಕಲ್ಯಾಣವನ್ನು ಬಯಸಿರುವುದು ಖಂಡನೀಯವಾಗಿದೆ.
–ಶರಣಪ್ಪ ಡಿ ಮಾನೇಗಾರ, ಮಾಜಿ ಸದಸ್ಯ ಕೆಪಿಸಿಸಿ ಸದಸ್ಯ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಬೆಂಗಳೂರು.

## ರಾಜ್ಯಕ್ಕೆ ಮತ್ತೆ ಅನ್ಯಾಯ ಮಾಡಿದ ಕೇಂದ್ರ: ಸಚಿವೆ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ನಮ್ಮ ರಾಜ್ಯಕ್ಕೆ ಈ ಕೇಂದ್ರ ಬಜೆಟ್ ನಲ್ಲಿ ಹೆಚ್ಚಿನ ಪ್ರಾಮುಖ್ಯತೆ ನೀಡಬಹುದು ಎಂಬ ನಿರೀಕ್ಷೆಗಳು ಹುಸಿಯಾಗಿವೆ. ನಮ್ಮ ರಾಜ್ಯಕ್ಕೆ ಮಲತಾಯಿ ದೊರಣೆ ಮುಂದುವರೆದಿದೆ. ನೆರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ಕರ್ನಾಟಕ ರಾಜ್ಯಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ಇಂದು ಪಟ್ಟಣದ ಖಾಸಗಿ ಕಾರ್ಯಕ್ರಮಕ್ಕೆ ಆಗಮಿಸಿದ ಹೆಬ್ಬಾಳ್ಕರ್ ಅವರು ಪತ್ರಕರ್ತರೊಂದಿಗೆ ಮಾತನಾಡಿ, 'ಈ ಬಾರಿಯ ಕೇಂದ್ರ ಬಜೆಟ್ ನಲ್ಲಿ ರಾಜ್ಯ ಸರ್ಕಾರಕ್ಕೆ ಕೊಡಬೇಕಾಗಿದ್ದ ತೆರಿಗೆ ಹಣವನ್ನು ಸರಿಯಾಗಿ ಕೊಟ್ಟಿಲ್ಲ. ಬಜೆಟ್‌ನಲ್ಲಿ ನೀರಾವರಿಗೆ ಕೊಡಬೇಕಾಗಿದ್ದ ಕೇಂದ್ರ ಸರ್ಕಾರದ ಪಾಲನ್ನು ನೀಡೇ ಇಲ್ಲ. ರೈತರ ಪರವಾದ ಬಜೆಟ್ ಎಂದು ವಿರೋಧ ಪಕ್ಷದವರು ಹೇಳುತ್ತಾರೆ ಆದ್ರೆ, ಇದ್ಯಾವ ಬಜೆಟ್ ಎಂದು ನನಗೂ ಗೊತ್ತಾಗ್ತಿಲ್ಲ. ಜೊತೆಗೆ ನಮ್ಮ ರಾಜ್ಯದ ಬಿಜೆಪಿ ಹಿರಿಯ ನಾಯಕರೆಲ್ಲರು ಮಂತ್ರಿಮಂಡಲದಲ್ಲಿದ್ದರೂ ಸಹಿತ ಈ ರೀತಿ ಅನ್ಯಾಯವಾಗಿದ್ದು ನಿಜಕ್ಕೂ ವಿಪರ್ಯಾಸ, ಇದು ಆಶಾದಾಯಕವಿಲ್ಲದ ಕೇಂದ್ರ ಬಜೆಟ್ ಇದಾಗಿದೆ ಎಂದು ಹೇಳಿದರು.



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927 (RNINO:KARKAN/2011/48371)